ಸಂಪುಟ: 14 Volume | ಸಂಚಿಕೆ: 59 Issue | ಪುಟಗಳು 08 Pages | ಶನಿವಾರ 06 ಜೂನ್ 2026 | ₹4 | PRGINO.120927 (RNINO:KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper

ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ಅದೃಷ್ಟ ವೆನ್ನುವುದು ಪ್ರಯತ್ನವೆಂಬ ತಾಯಿಗೆ, ಅವಕಾಶವೆಂಬ ತಂದೆಗೆ ಜನಿಸುವ ಮಗು.

–ಗುರುನಾನಕ್

## ಕಂಪೌಂಡ್ ಗೋಡೆ ನಿರ್ಮಾಣ



**ವರದಿ MN ಫಲಶ್ರುತಿ**

**ಬಸವಕಲ್ಯಾಣ:** ಇಲ್ಲಿನ ಬಿ.ಕೆ.ಡಿ.ಬಿ. ಅಧಿನದ ರಥಾ ಮೈದಾನದ ಕಂಪೋಡ್ ವನು ಒಡೆದು ನಾಲ್ಕು ತಿಂಗಳು ಕಳೆದರೂ ಸಹ ಪುನರ್ನಿರ್ಮಾಣ ಮಾಡಿರುವುದು ಇಲ್ಲ ಎಂದು ನ್ಯಾಯವಾದಿಗಳಾದ ಸಿ. ಪಿ. ಸೀಗೆದಾರ ಮನವಿ ಮೂಲಕ ಒತ್ತಾಯಿಸಿದ್ದ ಸುದ್ದಿ ಮಲ್ಲಮ್ಮ ನುಡಿ ಪ್ರಾದೇಶಿಕ ಕನ್ನಡ ದಿನಪತ್ರಿಕೆಯ ವರದಿ ಪ್ರಕಟವಾದ ಕಂಡು ಇಲ್ಲಿನ ಅಧಿಕಾರಿಗಳು ಎಚೆತು ಕೊಂಡು ಕಾಂಪಾಂಡ್ ಗೋಡೆ ನಿರ್ಮಾಣ ಮಾಡಿರುವುದು ಚಿತ್ರದಲ್ಲಿ ಕಾಣಬಹುದು.

## ಭೀಕರ ರಸ್ತೆ ಅಪಘಾತ: ಸ್ಥಳದಲ್ಲೇ ಸಾವು

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ನಗರದ ಮೋತಿ ಸರ್ಕಲ್ ಸಮೀಪದ ಬಸವೇಶ್ವರ ಪುತ್ಥಳಿ ಎದುರು ಇಂದು ಬೆಳಿಗ್ಗೆ ಸುಮಾರು 10.30 ಗಂಟೆಗೆ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಬೈಕ್ ಸವಾರನೊಬ್ಬ ಸ್ಥಳದಲ್ಲೇ ಮೃತಪಟ್ಟಿರುವ ಘಟನೆ ನಡೆದಿದೆ.



ಮೃತರನ್ನು ಜೋಳದರಾಶಿ ಗ್ರಾಮದ ನಿವಾಸಿ ವೀರೇಶ್ (28) ಎಂದು ಗುರುತಿಸಲಾಗಿದೆ. ವೀರೇಶ್ ಅವರು ಬೈಕ್‌ನಲ್ಲಿ ಸಂಚರಿಸುತ್ತಿದ್ದ ವೇಳೆ CG12BF9703 ಸಂಖ್ಯೆಯ ಲಾರಿಯೊಂದು ಡಿಕ್ಕಿ ಹೊಡೆದ ಪರಿಣಾಮ ಗಂಭೀರ ಗಾಯಗೊಂಡು ಸ್ಥಳದಲ್ಲೇ ಮೃತಪಟ್ಟಿದ್ದಾರೆ ಎಂದು ತಿಳಿದುಬಂದಿದೆ.

ಅಪಘಾತ ಸಂಭವಿಸಿದ ತಕ್ಷಣ ಲಾರಿ ಚಾಲಕ ಸ್ಥಳದಿಂದ ಪರಾರಿಯಾಗಿದ್ದಾನೆ. ಮಾಹಿತಿ ತಿಳಿದು ಸ್ಥಳಕ್ಕಾಗಮಿಸಿದ ಸಂಚಾರ ಪೊಲೀಸರು ಪರಿಶೀಲನೆ ನಡೆಸಿ, ಮೃತದೇಹವನ್ನು ಮರಣೋತ್ತರ ಪರೀಕ್ಷೆಗಾಗಿ ಬಳ್ಳಾರಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ (ಬಿಮ್ಸ್) ಆಸ್ಪತ್ರೆಗೆ ರವಾನಿಸಿದ್ದಾರೆ. ಘಟನೆಯ ಸುದ್ದಿ ತಿಳಿಯುತ್ತಿದ್ದಂತೆ ಮೃತನ ಕುಟುಂಬಸ್ಥರು ಹಾಗೂ ಗ್ರಾಮಸ್ಥರು ಸ್ಥಳಕ್ಕೆ ಧಾವಿಸಿ ಆಕ್ರಂದನ ವ್ಯಕ್ತಪಡಿಸಿದರು. ಅಪಘಾತ ನಡೆದ ಪ್ರದೇಶದಲ್ಲಿ ಕೆಲಕಾಲ ಆತಂಕದ ವಾತಾವರಣ ನಿರ್ಮಾಣವಾಗಿತ್ತು.

ಈ ಕುರಿತು ಪ್ರತಿಕ್ರಿಯಿಸಿದ ಬಳ್ಳಾರಿ ಸಂಚಾರ ಪೊಲೀಸ್ ಇನ್ಸ್ಪೆಕ್ಟರ್ ರುದ್ರಪ್ಪ, ನಗರದಲ್ಲಿ ಈಗಾಗಲೇ ಹೆಲ್ಮೆಟ್ ಧಾರಣೆ ಕಡ್ಡಾಯಗೊಳಿಸಲಾಗಿದ್ದು, ವಾಹನ ಸವಾರರು ಸುರಕ್ಷತಾ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ಮನವಿ ಮಾಡಿದರು. ಅಪಘಾತದಲ್ಲಿ ಮೃತಪಟ್ಟ ಬೈಕ್ ಸವಾರ ಹೆಲ್ಮೆಟ್ ಧರಿಸಿರಲಿಲ್ಲ ಎಂಬ ಮಾಹಿತಿ ಲಭ್ಯವಾಗಿದ್ದು, ರಸ್ತೆ ಸುರಕ್ಷತೆಯ ಕುರಿತು ಸಾರ್ವಜನಿಕರು ಹೆಚ್ಚಿನ ಜಾಗೃತಿ ವಹಿಸಬೇಕಿದೆ ಎಂದು ಅವರು ತಿಳಿಸಿದರು. ಘಟನೆ ಸಂಬಂಧ ಸಂಚಾರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಜಮೀರ್‌ಗೆ ಡಿಸಿಎಂ ಹುದ್ದೆ ನೀಡಲು ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಚಿಕ್ಕಬಳ್ಳಾಪುರ

ರಾಜ್ಯ ಸಚಿವ ಸಂಪುಟದಲ್ಲಿ ಐದು ಮುಸ್ಲಿಂ ಶಾಸಕರಿಗೆ ಸ್ಥಾನ ನೀಡಬೇಕು ಹಾಗೂ ಹಿರಿಯ ಶಾಸಕ ಬಿ.ಝಡ್.ಝಮೀರ್ ಅಹ್ಮದ್ ಖಾನ್ ಅವರಿಗೆ ಉಪಮುಖ್ಯಮಂತ್ರಿ (ಡಿಸಿಎಂ) ಹುದ್ದೆ ನೀಡಬೇಕು ಎಂದು ಒತ್ತಾಯಿಸಿ ಚಿಕ್ಕಬಳ್ಳಾಪುರದಲ್ಲಿ ಮುಸ್ಲಿಂ ಸಮುದಾಯದ ಮುಖಂಡರು ಪ್ರತಿಭಟನೆ ನಡೆಸಿದರು.

ನಗರದ ಜಾಮೀಯ ಮಸೀದಿಯಲ್ಲಿ ಶುಕ್ರವಾರ ನಮಾಝ್ ನಂತರ ಜಮಾಯಿಸಿದ ಮುಸ್ಲಿಂ ಸಮುದಾಯದ ಮುಖಂಡರು ಹಾಗೂ ಬಾಂಧವರು, ನೂತನ ಸಚಿವ ಸಂಪುಟದ ಮೊದಲ ಪಟ್ಟಿಯಲ್ಲಿ ಕೇವಲ ಒಬ್ಬ ಮುಸ್ಲಿಂ ಶಾಸಕರಿಗೆ ಮಾತ್ರ ಸ್ಥಾನ ನೀಡಿರುವುದಕ್ಕೆ ಅಸಮಾಧಾನ ವ್ಯಕ್ತಪಡಿಸಿದರು. ಝಮೀರ್ ಅಹ್ಮದ್ ಖಾನ್, ವಿಧಾನ ಪರಿಷತ್ ಸದಸ್ಯ ನಸೀರ್ ಅಹ್ಮದ್ ಸೇರಿದಂತೆ ಒಟ್ಟು ಐದು




ಮುಸ್ಲಿಂ ಪ್ರತಿನಿಧಿಗಳಿಗೆ ಸಚಿವ ಸ್ಥಾನ ನೀಡಬೇಕು ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಜಮಾಅತೆ ಅಹ್ಲೆ ಇಸ್ಲಾಂ ಕಾರ್ಯದರ್ಶಿ ಮಹಮ್ಮದ್ ಫಹಾದ್, ಉಪಾಧ್ಯಕ್ಷ ಸಾಧಿಕ್ ಅಲಿ, ಸದಸ್ಯರಾದ ನಯಾಜ್ ಪಾಷಾ, ಆಸೀಫ್ ಪಾಷಾ, ಇಸ್ಮಾಯಿಲ್ ಖಾನ್, ಅತಾವುಲ್ಲಾ, ಸಮಿವುಲ್ಲಾ (ಸಮ್ಮು) ಹಾಗೂ ಸಮುದಾಯದ ಪ್ರಮುಖರಾದ ಬಿ.ಅಜ್ಗರ್, ಫಜಿಲ್ ಖಾನ್, ಮಹಮ್ಮದ್ ತೌಸಿಫ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಖಾತೆ ಕಾಟ ಕ್ಯಾತೆ ಸ್ಫೋಟ

## ಹಿರಿಯ ಧುರೀಣ ರಾಮಲಿಂಗಾರೆಡ್ಡಿ ರಾಜಿನಾಮೆ | ಸಚಿವ ಜಾರ್ಜ್, ಮುನಿಯಪ್ಪ ಅಸಮಾಧಾನ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಸಚಿವರಿಗೆ ಖಾತೆ ಹಂಚಿಕೆಯ ವಿಷಯವೇ ಸರ್ಕಾರಕ್ಕೆ ಕಗ್ಗಂಟಾಗಿದೆ. 13 ಸಚಿವರಿಗೆ ವಿವಿಧ ಖಾತೆಗಳನ್ನು ಹಂಚಿಕೆ ಮಾಡಲಾಗಿದೆ. ಸಚಿವ ಜಾರ್ಜ್ ಅವರೂ ಹಿರಿಯ ಅಧಿಕಾರಿ ರಾಜೇಂದ್ರ ಚೋಳನ್ ಅವರು ಎಚಿಡಿ ಆಗಿ ಬಂದಿದ್ದಕ್ಕೆ ಅಸಮಾಧಾನ ಹೊರ ಹಾಕಿದ್ದಾರೆ. ಹಿರಿಯ ಸಚಿವ ರಾಮಲಿಂಗಾ ರೆಡ್ಡಿ ಬೆಂಗಳೂರು ಅಭಿವೃದ್ಧಿ ಖಾತೆಗೆ ಪಟ್ಟು ಹಿಡಿದಿದ್ದಾರೆ.

**ಬಿಜೆಪಿಗೆ ಆಹಾರ:** ರಾಮಲಿಂಗಾ ರೆಡ್ಡಿಯವರ ರಾಜಿನಾಮೆ ಎಲ್ಲರನ್ನು ಅಚ್ಚರಿಗೆ ದೂಡಿದ್ದಷ್ಟೇ ಅಲ್ಲದೆ, ಬಿಜೆಪಿಗೆ ಈಗ ಆಹಾರವಾಗಿದೆ. ರಾಜೀನಾಮೆ ಪತ್ರ ರವಾನಿಸಿರುವ ರಾಮಲಿಂಗಾ ರೆಡ್ಡಿಯವರು ತಮಗೆ ಕೊಟ್ಟ ಖಾತೆ ಬಗ್ಗೆ ಅಸಮಾಧಾನ ಹೊರಹಾಕಿದ್ದಾರೆ. ಸದಾ ಕಲಹಪ್ರಿಯವೆಂಬಂತೆ ಕಾದು ಕುಳಿತಿದ್ದ ಬಿಜೆಪಿಗೆ ಈ ವಿಷಯ ಅಸ್ತ್ರವಾಗಿದೆ.

**ಡಿಕಶಿಗೆ ಕರೆ ಮಾಡಿ ಚರ್ಚೆ:** ಖಾತೆ ಅಧಿಕೃತ ಹಂಚಿಕೆಯಾದ ಹಿನ್ನೆಲೆಯಲ್ಲಿ ರಾಮಲಿಂಗಾ ರೆಡ್ಡಿ ಅವರು ಸಿಎಂ ಡಿಕೆ ಶಿವಕುಮಾರ್ ಅವರಿಗೆ ಫೋನ್ ಕರೆ ಮಾಡಿ ಮಾತುಕತೆ ನಡೆಸಿದ್ದಾರೆ. ಸಿಎಂಗೆ ಕರೆ ಮಾಡಿ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡುವುದಾಗಿ ತಿಳಿಸಿದ್ದಾರೆ. ರಾಮಲಿಂಗಾ ರೆಡ್ಡಿ ಅವರನ್ನು ಈ ಸಂದರ್ಭದಲ್ಲಿ ಡಿಕೆಶಿ ಸಮಾಧಾನ ಪಡಿಸಿರುವುದಾಗಿ ತಿಳಿದು ಬಂದಿದೆ.









### ಮಾಜಿ ಸಿಎಂ ಜೊತೆ ಚರ್ಚೆ

ಖಾತೆ ಗೊಂದಲದ ಹಿನ್ನೆಲೆಯಲ್ಲಿ ಸಿಎಂ ಡಿಕೆ ಶಿವಕುಮಾರ್ ಅವರು ಈಗಾಗಲೇ ಸಿದ್ದರಾಮಯ್ಯ ಅವರ ಜೊತೆಗೆ ಮಾತುಕತೆ ನಡೆಸಿದ್ದಾರೆ. ಈ ವಿಚಾರವಾಗಿ ನೆರವು ನೀಡುವಂತೆಯೂ ಮನವಿ ಮಾಡಿದ್ದಾರೆ. ಗೊಂದಲದ ಹಿನ್ನೆಲೆಯಲ್ಲಿ ರಾಮಲಿಂಗಾ ರೆಡ್ಡಿ ಅವರು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ ಮಾತುಕತೆ ನಡೆಸಿದ್ದಾರೆ.

### ಪ್ರತಿಪಕ್ಷ ನಾಯಕ ಅಶೋಕ್ ಟೀಕಾಸ್ತ್ರ

ಕಾಂಗ್ರೆಸ್ ಪಕ್ಷದ ಒಳಜಗಳ ಇಲ್ಲದ ದಿನವನ್ನ ನೋಡಲು ಸಾಧ್ಯವೇ ಇಲ್ಲ. ಇನ್ನು ಎರಡು ವರ್ಷ ನಡೆಯಲಿರುವ ಡಿಕೆ ಶಿವಕುಮಾರ್ ಸರ್ಕಾರದ ಈ ನಿತ್ಯ ಕಚ್ಚಾಟಕ್ಕೆ ತೇಪೆ ಹೆಚ್ಚಲು ರಾಹುಲ್ ಗಾಂಧಿ ಅವರು, ಕೆ.ಸಿ. ವೇಣುಗೋಪಾಲ್ ಅವರು, ರಣದೀಪ್ ಸೂರ್ಜೆವಾಲ ಬೆಂಗಳೂರಿನಲ್ಲೇ ಇರೋದು ಉತ್ತಮ ಎಂದು ಆರ್.ಅಶೋಕ್ ಟೀಕಿಸಿದ್ದಾರೆ.

### ಕೆಪಿಸಿಸಿ ಅಧ್ಯಕ್ಷರವಾದ?

ಈ ಪ್ರಕರಣ ಕುರಿತು ಮಾತನಾಡಿರುವ ಕೆಪಿಸಿಸಿ ಅಧ್ಯಕ್ಷ ಹರಿಪ್ರಸಾದ್ ಅವರು ಸಚಿವರ ಆಕ್ಷೇಪ ಏನೇ ಇದ್ರೂ ಕುಳಿತು ಮಾತಾಡಲಾಗುವುದು. ಸದ್ಯದ ಸಮಸ್ಯೆ ಬಗೆಹರಿಸಲಾಗುತ್ತದೆ. ಅವರು ಪಕ್ಷದ ಹಿರಿಯರು, ರಾಜ್ಯಕ್ಕೆ ಹಾಗೇ ಪಕ್ಷಕ್ಕೆ ಅವರ ಸೇವೆ ಬೇಕು ಎಂದು ಅಭಿಪ್ರಾಯಪಟ್ಟಿದ್ದಾರೆ.

### ಮುನಿಯಪ್ಪ ಅಸಮಾಧಾನ

ರಾಮಲಿಂಗಾರೆಡ್ಡಿಯ ರಾಜಿನಾಮೆ ರಾಜ್ಯ ಕಾಂಗ್ರೆಸ್ಸಿಗೆ ಶಾಕ್ ನೀಡಿದೆ. ಸದ್ಯ ಆಹಾರ ಖಾತೆಯ ಜವಾಬ್ದಾರಿ ಪಡೆದುಕೊಂಡಿರುವ ಕೆಎಚ್ ಮುನಿಯಪ್ಪ, ಬಹಿರಂಗ ಅಸಮಾಧಾನವನ್ನು ವ್ಯಕ್ತ ಪಡಿಸಿದ್ದಾರೆ. ಬಿಜೆಪಿಗೆ ಮುನಿಯಪ್ಪ ಅವರ ಅಸಮಾಧಾನವು ಉರಿಯುವ ಬೆಂಕಿಗೆ ತುಪ್ಪ ಸುರಿದಂತಾಗಿದೆ. ಎರಡೂ ಪ್ರಕರಣಗಳನ್ನು ಸಿಎಂ ಹೇಗೆ ನಿಭಾಯಿಸುತ್ತಾರೆ? ಕಾದು ನೋಡಬೇಕಿದೆ.



ರಾಜ್ಯದ ನೂತನ ಗೃಹ ಸಚಿವರಾಗಿರುವ ಪ್ರಿಯಾಂಕ್ ಖರ್ಗೆ ಅವರನ್ನು ಕರ್ನಾಟಕ ರಾಜ್ಯದ ಪೊಲೀಸ್ ಮಹಾನಿರ್ದೇಶಕ ಹಾಗೂ ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್ ಡಾ. ಎಂ.ಎ. ಸಲೀಂ ವಿಕಾಸಸೌಧದಲ್ಲಿ ಭೇಟಿ ಆಗಿ ಅಭಿನಂದಿಸಿದರು. ಬೆಂಗಳೂರು ನಗರ ಪೊಲೀಸ್ ಕಮೀಷನರ್ ಸೀಮಂತ್ ಕುಮಾರ್ ಸಿಂಗ್ ಅವರೂ ಸಚಿವ ಪ್ರಿಯಾಂಕ್ ಖರ್ಗೆ ಅವರನ್ನು ಭೇಟಿ ಮಾಡಿದರು. ಇಬ್ಬರೂ ಅಧಿಕಾರಿಗಳೊಂದಿಗೆ ಸಚಿವ ಪ್ರಿಯಾಂಕ್ ಖರ್ಗೆ ಅವರು ಸೌಹಾರ್ದಯುತ ಚರ್ಚೆ ನಡೆಸಿದರು.



ಯಾದಗಿರಿ: ಜಿಲ್ಲೆಯಲ್ಲಿ ನೂತನವಾಗಿ ರಚನೆಗೊಂಡ ಕರ್ನಾಟಕ ಕಾರ್ಯನಿರತ ಸಂಪಾದಕ ಹಾಗೂ ವರದಿಗಾರರ ಸಂಘದ ಜಿಲ್ಲಾ ಅಧ್ಯಕ್ಷರಾಗಿ ಮೊಮ್ಮದ್ ರಫೀಕ್ ಪಾಟೇಲ್ ಮತ್ತು ಉಪಾಧ್ಯಕ್ಷರಾಗಿ ಡಿ.ಕೆ ದೇವಿಂದ್ರ ರವರನ್ನು ಆಯ್ಕೆ ಮಾಡಿದ ಹಿನ್ನೆಲೆಯಲ್ಲಿ ಇವರನ್ನ ಮುಂಜಾನೆ ವಾರ್ತೆ ಪತ್ರಿಕೆಯ ಜಿಲ್ಲಾ ವರದಿಗಾರ ಮಲ್ಲಿಕಾರ್ಜುನ್ ಯರಗೋಳ ರವರು ನಗರದ ಹಳೆಯ ಪ್ರವಾಸಿ ಮಂದಿರದಲ್ಲಿ ಗೌರವಿಸಿ ಸನ್ಮಾನಿಸಿದರು.

## ಪರಿಷತ್, ರಾಜ್ಯ ಸಭೆ ಚುನಾವಣೆಯ ಬಿರುಸು

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ರಾಜ್ಯಸಭೆ, ವಿಧಾನ ಪರಿಷತ್ ಚುನಾವಣೆಗೆ ಕಾಂಗ್ರೆಸ್ ಸಿದ್ಧತೆಗಳನ್ನು ಮತ್ತಷ್ಟು ಚುರುಕುಗೊಳಿಸಿದ್ದು, ನಾಮಪತ್ರ ಸಲ್ಲಿಕೆ ಪ್ರಕ್ರಿಯೆಯ ಮೇಲ್ವಿಚಾರಣೆ ಹಾಗೂ ಅಂತಿಮ ಹಂತದ ರಾಜಕೀಯ ಕಸರತ್ತಿಗಾಗಿ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿಯವರು ಮುತುವರ್ಜಿ ವಹಿಸಿದ್ದಾರೆ. ರಾಜ್ಯಸಭೆಯ ನಾಲ್ಕು ಸ್ಥಾನಗಳಿಗೆ ನಡೆಯಲಿರುವ ಚುನಾವಣೆಯಲ್ಲಿ ಕಾಂಗ್ರೆಸ್ ಮೂರು ಸ್ಥಾನಗಳನ್ನು ಗೆಲ್ಲುವ ವಿಶ್ವಾಸದಲ್ಲಿದೆ. ಈ ಹಿನ್ನೆಲೆಯಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಬೆಂಗಳೂರು ಕೇಂದ್ರ ಲೋಕಸಭಾ ಕ್ಷೇತ್ರದ ಮಾಜಿ ಅಭ್ಯರ್ಥಿ ಮನ್ಸೂರ್ ಅಲಿ ಕಾನ್ ಹಾಗೂ ಕಾಂಗ್ರೆಸ್ ರಾಷ್ಟ್ರೀಯ ವಕ್ತಾರ ಪವನ್ ಖೇರಾ ಅವರ ಹೆಸರನ್ನು ಹೈಕಮಾಂಡ್ ಅಂತಿಮಗೊಳಿಸಿದೆ ಎನ್ನಲಾಗಿದೆ. ಇದೇ ವೇಳೆ ವಿಧಾನಸಭಾ ಕೋಟಾದಡಿ ಭರ್ತಿಯಾಗಲಿರುವ ಏಳು ವಿಧಾನ ಪರಿಷತ್ ಸ್ಥಾನಗಳಿಗೆ ಕಾಂಗ್ರೆಸ್ ಇದುವರೆಗೆ ನಾಲ್ವರು ಅಭ್ಯರ್ಥಿಗಳನ್ನು ಕಣಕ್ಕಿಳಿಸಿದೆ. ಕೆಪಿಸಿಸಿ ಅಧ್ಯಕ್ಷ ಬಿಕೆ. ಹರಿಪ್ರಸಾದ್, ತಿಪ್ಪಣ್ಣಪ್ಪ ಕಾಮಕನೂರ್, ಪಿವಿ ಮೋಹನ್ ಮತ್ತು ಶಿವಣ್ಣ ಮಳವಳ್ಳಿ ಅವರಿಗೆ ಟಿಕೆಟ್ ನೀಡಲಾಗಿದೆ.

## ಶಂಕಿತ ಉಗ್ರನ ಬಂಧನ

• ಮಲ್ಲಮ್ಮ ನುಡಿ ವಾರ್ತೆ ದಾವಣಗೆರೆ

ಭಾರತದಲ್ಲಿ ವಿಧ್ವಂಸಕ ಕೃತ್ಯ ನಡೆಸಲು ಸಜ್ಜಾಗಿದ್ದ ಶಂಕಿತ ಭಯೋತ್ಪಾದಕನೊಬ್ಬನನ್ನು ತುಮಕೂರು ಪೊಲೀಸರು ದಾವಣಗೆರೆಯ ರೈಲ್ವೆ ನಿಲ್ದಾಣದಲ್ಲಿ ಬಂಧಿಸಿ ತಮಕೂರಿಗೆ ಕರೆದೊಯ್ದು ವಿಚಾರಣೆ ಆರಂಭಿಸಿದ್ದಾರೆ. ದಾವಣಗೆರೆಯ ಬಿಡಿ ಲೇಔಟ್‌ನ ಜಮೀರ್ ಖಾನ್ (22) ಬಂಧಿತ ಶಂಕಿತ ಉಗ್ರ. ಈತ ಐಎಸ್ಎಸ್ ಫಂಡಿಂಗ್ ಮಾಡುತ್ತಿದ್ದ ಉಗ್ರರಾದ ಶಾಬಾಸ್ ಭುಟ್ಟಿ ಹಾಗೂ ರಾಣಾ ಉನೇಸ್ ಜೊತೆ ನಿರಂತರ ಸಂಪರ್ಕದಲ್ಲಿದ್ದ. ಈ ಬಗ್ಗೆ ಗುಪ್ತಚರ ಇಲಾಖೆ ಮಾಹಿತಿ ನೀಡಿತ್ತು. ಇದನ್ನಾಧರಿಸಿ ತುಮಕೂರು ಪೊಲೀಸರು ಬಂಧಿಸಿದ್ದಾರೆ ಎಂದು ತಿಳಿದು ಬಂದಿದೆ. ವಾಟ್ಸಾಪ್, ಇನ್ಸ್ಟಾಗ್ರಾಂ ಸೇರಿದಂತೆ ಸಾಮಾಜಿಕ ಜಾಲತಾಣದಲ್ಲಿ ನಿರಂತರವಾಗಿ ಉಗ್ರರ ಸಂಪರ್ಕದಲ್ಲಿದ್ದ. ದೇಶದಲ್ಲಿ ಸಂಚು ನಡೆಸಲು ಭಾರತದ ಮುಸ್ಲಿಂ ಯುವಕರನ್ನು ಬಳಕೆ ಮಾಡಿಕೊಂಡು ಐಎಸ್ಎಸ್ ಭಯೋತ್ಪಾದಕ ಸಂಘಟನೆ ವಿಸ್ತರಿಸಲು ಸಂಚು ರೂಪಿಸಿದ್ದ. ಈತ ಹಾಗೂ ತಮಕೂರಿನಲ್ಲಿ ಬಂಧಿತನಾಗಿರುವ ಶಂಕಿತ ಉಗ್ರ ಅಲ್ಲಾಭಕ್ಷ್‌ಗೆ ಉಗ್ರರು ಮುಂಬೈನಲ್ಲಿ ಉದ್ಯಮಿಯೊಬ್ಬನನ್ನು ಮುಗಿಸಲು ಟಾಸ್ಕ್ ನೀಡಿದ್ದರು ಎನ್ನಲಾಗಿದೆ.

# ಪುಣ್ಯಕೋಟಿ ಮಾತಿನಂತೆ ಕೊಟ್ಟ ಮಾತು ತಪ್ಪಬಾರದು..!

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ನಾಡಿನ ಪುಣ್ಯಕೋಟಿಯ ಮಾತು ಎಲ್ಲರಿಗೂ ನೆನಪಿದೆ. ಗೋವು ಕೊಟ್ಟ ಮಾತು ತಪ್ಪಿಲ್ಲ. ಅದೇ ರೀತಿ ಬಾರದು..! ಅದೇ ರೀತಿ ಈ ಹಿಂದೆ ಖುದ್ದು ಡಿಕೆಶಿವಕುಮಾರ್ ಅವರು ಮನೆಗೆ ಬಂದು ಕೊಟ್ಟ ಮಾತಿನಂತೆ ನನಗೆ ಖಾತೆಯನ್ನು ಕೊಡಬೇಕು. ನನ್ನ ಸೇವಾ ಹಿರಿತನ ಹಾಗೂ ಪ್ರಾಮಾಣಿಕತೆ ಮತ್ತು ಕಾರ್ಯಕ್ಷಮತೆಯನ್ನು ಗಮನಿಸಿ ಪ್ರಾಶಸ್ತ್ಯ ನೀಡಬೇಕು ಎಂದು ರಾಮಲಿಂಗಾರೆಡ್ಡಿ ಅವರು ಮುಖ್ಯಮಂತ್ರಿ ಹಾಗೂ ಹೈ ಕಮಾಂಡ್‌ಗೆ ಮನವಿ ಮಾಡಿದ್ದಾರೆ.

ಸದ್ಯ ರೆಡ್ಡಿ ತಮ್ಮ ಪಟ್ಟು ಸಡಿಲಿಸಿಲ್ಲ. ಯಾವುದೇ ಕಾರಣಕ್ಕೂ ರಾಜೀನಾಮೆ ನೀಡುವ ನಿರ್ಧಾರದಿಂದ ಹಿಂದೆ ಸರಿಯಲ್ಲ ಎಂದಿದ್ದಾರೆ. ಖಾತೆ ಬದಲಾವಣೆ ಮಾಡಿದರೆ ಸಚಿವ ಸ್ಥಾನದಲ್ಲಿ ಮುಂದುವರಿಯುವುದಾಗಿ ತಿಳಿಸಿದ್ದಾರೆ. ಹೀಗಾಗಿ ಸಿಎಂ ಡಿಕೆ ಶಿವಕುಮಾರ್ ಅವರು ಯಾವ ರೀತಿಯಲ್ಲಿ ಸ್ಪಂದಿಸಲಿದ್ದಾರೆ ಎಂಬುವುದು ಸದ್ಯಕ್ಕೆ ಕುತೂಹಲ ಕೆರಳಿಸಿದೆ.

### ನಾಡಿನ ಸಮಸ್ತ ರೆಡ್ಡಿ ಜನಾಂಗಕ್ಕೆ ಅಪಮಾನ...!

ಕಾಂಗ್ರೆಸ್‌ನ ಹಿರಿಯ ಧುರೀಣ ರಾಮಲಿಮಗಾರೆಡ್ಡಿ ಅವರು ಈ ನಾಡು ಕಂಡ ಶ್ರೇಷ್ಠ ಮುತ್ಸದ್ಧಿ. ರಾಜ್ಯದಲ್ಲಿರುವ 50 ಲಕ್ಷಕ್ಕೂ ಹೆಚ್ಚು ರೆಡ್ಡಿ ಜನಾಂಗಕ್ಕೆ ನಾಯಕರು. ಹಳ್ಳಿಯಲ್ಲಾಗಲಿ, ಡಿಲ್ಲಿಯಲ್ಲಾಗಲಿ, ನಮ್ಮ ಜನಾಂಗಕ್ಕೆ ಅನ್ಯಾಯವಾದಾಗ ಅವರು ಖುದ್ದು ನಿಂತು ಸರಿಪಡಿಸುತ್ತಾರೆ. ಇಂತಹ ಧೀಮಂತರಿಗೆ ಹೈಕಮಾಂಡ್ ಅನ್ಯಾಯ ಮಾಡಿದರೆ ನಮ್ಮೆಲ್ಲರಿಗೂ ಅನ್ಯಾಯ ಮಾಡಿದಂತೆ ಎಂದು ಸಮಾಜದ ಮುಖಂಡರು ಎಚ್ಚರಿಸಿದ್ದಾರೆ.



### ರಾಮಲಿಂಗಾ ರೆಡ್ಡಿ ನನ್ನ ಸ್ನೇಹಿತ, ಅವರ ಜತೆ ಮಾತಾಡುವೆ: ಡಿಕೆಶಿ

ರಾಮಲಿಂಗಾ ರೆಡ್ಡಿ ನನ್ನ ಸ್ನೇಹಿತ, ಹಿರಿಯ ಮುಖಂಡರು, ಅವರ ಬಳಿ ನಾನು ಮಾತನಾಡುತ್ತೇನೆ. ಆದಷ್ಟು ಬೇಗ ಎಲ್ಲಾ ಸಮಸ್ಯೆಗಳಿಗೆ ಪರಿಹಾರ ಸಿಗಲಿದೆ. ಎದುರಿಗೆ ಕೂತು ಮಾತನಾಡಿದಾಗ ವಸ್ತುಸ್ಥಿತಿ ಅವರಿಗೂ ಮನವರಿಕೆ ಆಗಲಿದೆ ಎಂದು ಸಿಎಂ ಡಿಕೆ ಶಿವಕುಮಾರ್ ಹೇಳಿದ್ದಾರೆ.

### ರಾಮಲಿಂಗರೆಡ್ಡಿ ಕಾರಿಗೆ ಅಡ್ಡಬಿದ್ದು ಪ್ರತಿಭಟನೆ

ಹಿರಿಯ ಕಾಂಗ್ರೆಸ್ ನಾಯಕ ರಾಮಲಿಂಗಾ ರೆಡ್ಡಿಯವರು ಇಂದು ಬೆಳಗ್ಗೆ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ ಬೆನ್ನಲ್ಲೇ ಕೆರಳಿದ ಅವರ ಬೆಂಬಲಿಗರು, ರಾಮಲಿಂಗಾ ರೆಡ್ಡಿಯವರ ಕಚೇರಿ ಮುಂಭಾಗದಲ್ಲಿ ಭಾರಿ ಪ್ರತಿಭಟಿಸಿದ್ದಾರೆ. ರಾಮಲಿಂಗಾ ರೆಡ್ಡಿ ಅವರಿಗೆ ಅನ್ಯಾಯವಾಗಿದೆ ಎಂದು ಘೋಷಣೆ ಕೂಗಿದ ಬೆಂಬಲಿಗರು, ಅವರ ನಿರ್ಧಾರಕ್ಕೆ ಬೆಂಬಲ ವ್ಯಕ್ತಪಡಿಸಿದ್ದಾರೆ. ಪ್ರತಿಭಟನೆ ವೇಳೆ ಬೆಂಬಲಿಗರು ರಾಮಲಿಂಗಾ ರೆಡ್ಡಿ ಕಾರಿಗೆ ಅಡ್ಡಬಿದ್ದು, ನ್ಯಾಯಕ್ಕಾಗಿ ಆಗ್ರಹಿಸಿದ್ದಾರೆ.

### ನಗರಾಭಿವೃದ್ಧಿ ಖಾತೆಗಾಗಿ ಯಾಕೆ ಪಟ್ಟು?

ರಾಮಲಿಂಗರೆಡ್ಡಿಯವರಿಗೆ ಬೇರೆ ಯಾವುದೇ ಕೊಟ್ಟರು ಯಶಸ್ವಿಯಾಗಿ ನಿಭಾಯಿಸುತ್ತಾರೆ. ಆದರೆ ಅವರಿಗೆ ಬೆಂಗಳೂರಿನ ಬಗ್ಗೆ ಒಂದು ವಿಶಿಷ್ಟವಾದ ದೂರದೃಷ್ಟಿಯಿದೆ. ಅವರು ಒಂಭತ್ತು ಬಾರಿ ಶಾಸಕರಾಗಿ ಆಯ್ಕೆಯಾಗಿದ್ದರಿಂದ ಬೆಂಗಳೂರಿನ ಸರ್ವಾಂಗೀಣ ಪ್ರಗತಿಯ ಬಗ್ಗೆ ಕನಸು ಕಂಡಿದ್ದಾರೆ. ಆ ಕನಸು ನನಸು ಮಾಡುವುದಕ್ಕಾಗಿ ಬೆಂಗಳೂರು ನಗರಾಭಿವೃದ್ಧಿ ಖಾತೆ ಕೊಡಬೇಕೆಂದು ಮನವಿ ಮಾಡಿದ್ದಾರೆ.

## ಇನ್ಮುಂದೆ ಎಲ್ಲಾ ಸರ್ಕಾರಿ ಅಧಿಕಾರಿಗಳು, ಸಿಬ್ಬಂದಿ 10 ಗಂಟೆಯೊಳಗೆ ಕಚೇರಿಯಲ್ಲಿರಬೇಕು: ಡಿಕೆ ಶಿವಕುಮಾರ್, ಸಿಎಂ

## ಸರ್ಕಾರದ ಸಹಾಯಧನ ಯೋಜನೆಗಳ ಬಗ್ಗೆ ಸ್ಪಷ್ಟತೆ ನೀಡುವುದು ಅತ್ಯಂತ ಅಗತ್ಯ

ರೈತರಿಗೆ ಸಮಗ್ರ ಮಾಹಿತಿ ನೀಡುವುದು ಕೃಷಿ ಇಲಾಖೆಯ ಅಧಿಕಾರಿಗಳ ಪ್ರಮುಖ ಜವಾಬ್ದಾರಿಯಾಗಿದೆ. ಇಂದಿನ ದಿನಗಳಲ್ಲಿ ಕೃಷಿ ಕ್ಷೇತ್ರವು ಹೊಸ ತಂತ್ರಜ್ಞಾನ, ಹವಾಮಾನ ಬದಲಾವಣೆ, ಮಾರುಕಟ್ಟೆ ಬೆಲೆ ಏರಿಳಿತ ಹಾಗೂ ಸರ್ಕಾರದ ಅನೇಕ ಯೋಜನೆಗಳ ನಡುವೆ ಸಾಗುತ್ತಿದೆ. ಇಂತಹ ಸಂದರ್ಭದಲ್ಲಿ ರೈತರಿಗೆ ಸರಿಯಾದ ಸಮಯದಲ್ಲಿ ಸರಿಯಾದ ಮಾಹಿತಿ ಸಿಗದೇ ಇದ್ದರೆ, ಅವರು ನಷ್ಟಕ್ಕೆ ಒಳಗಾಗುವ ಸಾಧ್ಯತೆ ಹೆಚ್ಚಾಗುತ್ತದೆ.

## ಸಂಪಾದಕೀಯ

**ಮಾಣಿಕರೆಡ್ಡಿ ಕೌಡಾಳೆ**
**ಪ್ರಧಾನ ಸಂಪಾದಕರು**
**ಮೊ: 9845028349**





ಕೃಷಿ ಅಧಿಕಾರಿಗಳು ಕೇವಲ ಕಚೇರಿ ಕಾರ್ಯಗಳಿಗೆ ಸೀಮಿತವಾಗದೇ, ಗ್ರಾಮ ಮಟ್ಟದಲ್ಲಿ ರೈತರನ್ನು ಭೇಟಿ ಮಾಡಿ ಅವರ ಸಮಸ್ಯೆಗಳನ್ನು ಕೇಳಿ ಪರಿಹಾರ ನೀಡಬೇಕು. ಬೀಜ, ಗೊಬ್ಬರ, ಕೀಟನಾಶಕಗಳ ಸರಿಯಾದ ಬಳಕೆ ಬಗ್ಗೆ ಮಾರ್ಗದರ್ಶನ ನೀಡುವುದು, ಮಳೆಗಾಲದ ಮುನ್ನೆಚ್ಚರಿಕೆ ಮಾಹಿತಿ ಹಂಚುವುದು ಹಾಗೂ ಸರ್ಕಾರದ ಸಹಾಯಧನ ಯೋಜನೆಗಳ ಬಗ್ಗೆ ಸ್ಪಷ್ಟತೆ ನೀಡುವುದು ಅತ್ಯಂತ ಅಗತ್ಯ.

ಇದೇ ರೀತಿ ಕೃಷಿ ವಿಜ್ಞಾನ ಕೇಂದ್ರಗಳು ಹಾಗೂ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಜಾಗೃತಿ ಶಿಬಿರಗಳನ್ನು ಆಯೋಜಿಸಿ, ರೈತರಿಗೆ ತಾಂತ್ರಿಕ ಜ್ಞಾನವನ್ನು ಸರಳವಾಗಿ ತಲುಪಿಸುವ ಕೆಲಸವಾಗಬೇಕು. ಮಾಹಿತಿ ಕೊರತೆಯಿಂದ ರೈತರು ಮಧ್ಯವರ್ತಿಗಳ ಮೇಲೆ ಅವಲಂಬಿತರಾಗುವ ಸ್ಥಿತಿ ತಪ್ಪಬೇಕು.

ರೈತನಿಗೆ ಸಮಯೋಚಿತ ಮಾಹಿತಿ ನೀಡಿದಾಗ ಮಾತ್ರ ಉತ್ಪಾದನೆ ಹೆಚ್ಚಾಗಿ, ಕೃಷಿ ಲಾಭದಾಯಕವಾಗುತ್ತದೆ. ಆದ್ದರಿಂದ ಕೃಷಿ ಅಧಿಕಾರಿಗಳು ಹೆಚ್ಚು ಸಕ್ರಿಯವಾಗಿ, ರೈತ ಸ್ನೇಹಿಯಾಗಿ ಕಾರ್ಯನಿರ್ವಹಿಸಬೇಕು.

## ಕಾಣೆಯಾದ ವ್ಯಕ್ತಿಯ ಪತ್ತೆಗೆ ಮನವಿ

**ಬೀದರ್:** ಜಿಲ್ಲೆಯ ಹುಮನಾಬಾದ ತಾಲ್ಲೂಕಿನ ಘಾಟಬೊರಾಳ ಗ್ರಾಮದ 29 ವರ್ಷ ಪುರುಷ ತುಕಾರಾಮ ತಂದೆ ಅಂಕುಶ ಗಾಯಕ್ವಾಡ 2026ರ ಮೇ 15 ರಂದು ಮನೆಯಿಂದ ಹೋಗಿದ್ದು, ಮರಳಿ ಮನೆಗೆ ಬಾರದೆ ಹಿನ್ನೆಲೆ ಹುಮನಾಬಾದ ಪೊಲೀಸ್ ಠಾಣೆಯಲ್ಲಿ ಕಾಣೆಯಾದ ಪ್ರಕರಣವನ್ನು ದಾಖಲಿಸಿಕೊಂಡು ತನಿಖೆ ಮುಂದುವರಿದಿದೆ ಎಂದು ಹುಮನಾಬಾದ ಪೊಲೀಸ್ ಠಾಣೆ ಪೊಲೀಸ್ ಉಪ ನೀರಿಕ್ಷಕರು ಅವರು ತಿಳಿಸಿದ್ದಾರೆ. ಕಾಣೆಯಾದ ಪುರುಷ ವ್ಯಕ್ತಿಯ ಚಹರೆಪಟ್ಟಿ ವಿವರ: 29 ವರ್ಷ ಪುರುಷ, ಗೋಧಿ ಮೈ ಬಣ್ಣ ಸಾಧಾರಣ ಮೈಕಟ್ಟು ಇದ್ದು, ಎತ್ತರ 5 ಫೀಟ್ 5 ಇಂಚು ಇದ್ದು, ಗುಲಾಬಿ ಬಣ್ಣದ ಶರ್ಟ್, ಕಪ್ಪು ಬಣ್ಣದ ಪ್ಯಾಂಟ್ ಧರಿಸಿದೆ. ಬಲಗೈ ಹೆಬ್ಬೆಟ್ಟಿನ ಕೆಳಗೆ ಏಸು ಶೀಲುಬೆ ಟ್ಯಾಟೂ ಇರುತ್ತದೆ. ಕನ್ನಡ, ಹಿಂದಿ, ಮರಾಠಿ ಮಾತನಾಡುತ್ತಾನೆ. ಈ ಪುರುಷ ವ್ಯಕ್ತಿಯ ಬಗ್ಗೆ ಮಾಹಿತಿ ಇದ್ದಲ್ಲಿ ಕಂಡುಬಂದಲ್ಲಿ, ಪತ್ತೆಯಾದಲ್ಲಿ ಈ ಭಾವಚಿತ್ರಕ್ಕೆ ಹೊಂದಾಣಿಕೆಯಾಗುವಂತೆ ಯಾವುದೇ ಮಾಹಿತಿ, ಸುಳಿವು ಸಿಕ್ಕಲ್ಲಿ ಬೀದರ ಪೊಲೀಸ್ ಅಧೀಕ್ಷಕರು ದೂ.ಸಂ.08482 226701, 9480803401, ಹುಮನಾಬಾದ ಪೊಲೀಸ್ ಉಪಾಧೀಕ್ಷಕರು ದೂ.ಸಂ.08483 270028, 270576, 9480803422, ಹುಮನಾಬಾದ ಪೊಲೀಸ್ ವೃತ್ತ ನೀರಕ್ಷಕರು ದೂ.ಸಂ.08483 270159, 9480803435, ಹುಮನಾಬಾದ್ ಪೊಲೀಸ್ ಠಾಣೆ ಪಿ.ಎಸ್.ಐ ದೂ.ಸಂ.08483 270033, 9480803452, ಜಿಲ್ಲಾ ನಿಸ್ತಂತು ಕೋಠಡಿ ಸಂ.08482 226704ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಯೋಗ ಸಾಧಕರಿಂದ ವಿಶ್ವ ಪರಿಸರ ದಿನಾಚರಣೆ

• ಮಲ್ಲಮ್ಮ ನುಡಿ ವಾರ್ತೆ ಬೀದರ್



ಪರಿಸರವನ್ನು ಹಸಿರಾಗಿಸುವ ಬಗ್ಗೆ ಕಾಳಜಿ ವಹಿಸುವುದರ ಜೊತೆಗೆ ಮಾಲಿನ್ಯ ನಿಯಂತ್ರಣ ಕುರಿತು ಜನರಲ್ಲಿ ಜಾಗೃತಿ ಮೂಡಬೇಕು ಎಂದು ಕರ್ನಾಟಕ ಕಾಲೇಜಿನ ನಿವೃತ್ತ ಪ್ರಾಂಶುಪಾಲ ಡಾ. ಜಗನ್ನಾಥ ಹೆಬ್ಬಾಳೆ ಹೇಳಿದರು.

ನಗರದ ಬರೀದ್ ಶಾಹಿ ಉದ್ಯಾನವನದಲ್ಲಿ ಹಿರಿಯ ಯೋಗ ಸಾಧಕರ ತಂಡದ ವತಿಯಿಂದ ಆಯೋಜಿಸಿದ್ದ ವಿಶ್ವ ಪರಿಸರ ದಿನಾಚರಣೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿದ ಅವರು, ಮನೆ ಮತ್ತು ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳುವ ಮೂಲಕ ಸಮಾಜದಲ್ಲಿ ಸ್ವಚ್ಛತಾ ಸಂಸ್ಕೃತಿಯನ್ನು ಬೆಳೆಸಬಹುದಾಗಿದೆ ಎಂದರು. ರಸ್ತೆಗಳಲ್ಲಿ ಎಲ್ಲೆಂದರಲ್ಲಿ ಕಸ-ಕಡ್ಡಿ ಬಿಸಾಡದೆ, ಪರಿಸರ ಸಂರಕ್ಷಣೆಗೆ ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದ ಪ್ರಾಸ್ತಾವಿಕ ಭಾಷಣ ಮಾಡಿದ ರಾಜ್ಯ ಹಿರಿಯ ನಾಗರಿಕರ ಪ್ರಶಸ್ತಿ ಪುರಸ್ಕೃತ ವೀರಭದ್ರಪ್ಪ ಉಪ್ಪಿನ್, ಪರಿಸರ ಜಾಗೃತಿ ಮತ್ತು ಮಾಲಿನ್ಯ ನಿಯಂತ್ರಣದ ಕಾರ್ಯಗಳು ನಮ್ಮ ಮನೆಯಿಂದಲೇ ಆರಂಭವಾಗಬೇಕು ಎಂದು ಹೇಳಿದರು. ಸರ್ಕಾರಗಳು ಹಸಿರೀಕರಣ ಮತ್ತು ಸ್ವಚ್ಛತಾ ಅಭಿಯಾನಗಳ ಮೂಲಕ ಅನೇಕ ಯೋಜನೆಗಳನ್ನು ಜಾರಿಗೊಳಿಸುತ್ತಿವೆ. ಆದರೆ ಜನರು ಪ್ರಾಮಾಣಿಕವಾಗಿ ಸಹಕರಿಸಿದಾಗ ಮಾತ್ರ ಅವು ಯಶಸ್ವಿಯಾಗಲಿವೆ ಎಂದು ಅಭಿಪ್ರಾಯಪಟ್ಟರು. ಪ್ರಸಕ್ತ ಮಳೆಗಾಲದಲ್ಲಿ ನಡೆಯುತ್ತಿರುವ "ಮನೆ ಮನೆಗಳಲ್ಲಿ ಸಸ್ಯಾರೋಪಣ" ಅಭಿಯಾನಕ್ಕೆ ಎಲ್ಲರೂ ಕೈಜೋಡಿಸಬೇಕೆಂದು ಮನವಿ ಮಾಡಿದರು.

ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲ ಶಂಕರ್ ಕೆ. ಮಾತನಾಡಿ, ಕಾಲೇಜಿನಲ್ಲಿ ಹಸಿರೀಕರಣಕ್ಕೆ ಸಂಬಂಧಿಸಿದಂತೆ ಹಲವು ಯೋಜನೆಗಳನ್ನು ರೂಪಿಸಲಾಗಿದೆ. ಇತ್ತೀಚೆಗೆ ನಡೆದ ಅಂತಿಮ ವರ್ಷದ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭದಲ್ಲಿ 300 ಸಸಿಗಳನ್ನು ವಿದ್ಯಾರ್ಥಿಗಳಿಗೆ ಉಚಿತವಾಗಿ ವಿತರಿಸಲಾಗಿದೆ ಎಂದು ತಿಳಿಸಿದರು.

ಕಾಲೇಜಿನ ಕನ್ನಡ ವಿಭಾಗದ ಮುಖ್ಯಸ್ಥ ರಾಜಕುಮಾರ ಅಲ್ಲುರೆ ಮಾತನಾಡಿ, ರಾಷ್ಟ್ರೀಯ ಸೇವಾ ಯೋಜನೆ (ಎನ್‌ಎಸ್‌ಎಸ್) ಸೇರಿದಂತೆ ವಿವಿಧ ಕಾರ್ಯಕ್ರಮಗಳ ಮೂಲಕ ವಿದ್ಯಾರ್ಥಿಗಳಲ್ಲಿ ಪರಿಸರ ಜಾಗೃತಿ ಮೂಡಿಸಲಾಗುತ್ತಿದೆ. ಕಾಲೇಜು ಆವರಣದ ಹಸಿರೀಕರಣಕ್ಕಾಗಿ ವಿಶೇಷ ಯೋಜನೆ ರೂಪಿಸಲಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಸಸಿಗಳಿಗೆ ಪೂಜೆ ಸಲ್ಲಿಸಿ, ಆಲಂಕಾರಿಕ ಸಸಿಗಳನ್ನು ನೆಡುವ ಮೂಲಕ ಪರಿಸರ ದಿನಾಚರಣೆಗೆ ಅರ್ಥಪೂರ್ಣ ಚಾಲನೆ ನೀಡಲಾಯಿತು. ಹಿರಿಯ ಯೋಗ ಮೇಲ್ವಿಚಾರಕ ಗಂಗಪ್ಪ ಸಾವಳೆಯವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಸಂಜು ಶೀಲವಂತ ಸ್ವಾಗತ ಗೀತೆ ಹಾಡಿದರು. ಅಶೋಕ ಶೀಲವಂತ ಕಾರ್ಯಕ್ರಮ ನಿರೂಪಿಸಿದರು. ಮಲ್ಲಿಕಾರ್ಜುನ ಪಾಟೀಲ ಸ್ವಾಗತಿಸಿದರು. ನಿವೃತ್ತ ಮುಖ್ಯಗುರು ನಿಜಲಿಂಗಪ್ಪ ತಗಾರೆಯವರು ವಂದಿಸಿದರು. ಜ್ಞಾನೇಶ ಪಾಟೀಲ ಕಾರ್ಯಕ್ರಮದ ನಿರ್ವಹಣೆ ಮಾಡಿದರು.

ಈ ಸಂದರ್ಭದಲ್ಲಿ ರಮೇಶ ಕಪ್ಲಾಪುರ, ಶಿವರಾಜ ಬಿರಾದಾರ, ಶಂಕರ ಚಿದ್ರಿ, ಈಶ್ವರ ಕನ್ನೇರಿ, ರಾಚಯ್ಯ ಸ್ವಾಮಿ, ಪುಷ್ಪವತಿ, ಅರುಣಾ ಪಾಟೀಲ, ನೀಲಮ್ಮ ರೋಗನ ಸೇರಿದಂತೆ ಉದ್ಯಾನದ ಅನೇಕ ಯೋಗ ಸಾಧಕರು ಹಾಗೂ ಪರಿಸರ ಪ್ರೇಮಿಗಳು ಉಪಸ್ಥಿತರಿದ್ದರು.

# ವಿಶ್ವ ಪರಿಸರ ದಿನಾಚರಣೆ ಕಾನೂನು ಅರಿವು ನೆರವು ಕಾರ್ಯಕ್ರಮಕ್ಕೆ ಚಾಲನೆ

• ಮಲ್ಲಮ್ಮ ನುಡಿ ವಾರ್ತೆ ಬೀದರ್



ವಿಶ್ವ ಪರಿಸರ ದಿನಾಚರಣೆಯನ್ನು ಜನಸಂಕುಲ ಪ್ರಾಣಿ ಸಂಕುಲ ನಾಶವಾಗುವುದಲ್ಲದೆ ಇದರಿಂದ ಪರಿಸರವು ದೊಡ್ಡ ಮಟ್ಟದ ಹನಿಯಾಗುತ್ತದೆ ಗಡ ಮರಗಳನ್ನು ಹೇರಳವಾಗಿ ಬೆಳೆಸುವುದರಿಂದ ಪರಿಶುದ್ಧವರಣ ಹಾಗೂ ಮಳೆ ಪ್ರಮಾಣವು ಹೆಚ್ಚುತ್ತದೆ ಎಂದು ಬೀದರ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಅಧ್ಯಕ್ಷರು ಹಾಗೂ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಗೌರವಾನ್ವಿತ ಶ್ರೀ ಎಸ್.ಬಿ ರಹಮಾನ ಅವರು ಹೇಳಿದರು.

ಬೀದರ್ ನಗರ ಜಿಲ್ಲಾ ನ್ಯಾಯಾಂಗ ಇಲಾಖೆ ಆವರಣದಲ್ಲಿ ಜೂನ್ 5ರ ಶುಕ್ರವಾರ ರಂದು ಜಿಲ್ಲಾ ನ್ಯಾಯಾಂಗ ಇಲಾಖೆ, ಬೀದರ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಬೀದರ ಜಿಲ್ಲಾ ವಕೀಲರ ಸಂಘ, ಬೀದರ. ಜಿಲ್ಲಾ ಅರಣ್ಯ ಇಲಾಖೆ, ಬೀದರ ಇವರ ಸಂಯುಕ್ತಾಶ್ರಯದಲ್ಲಿ ಸಸಿಗೆ ನೀರೂಣಿಸುವ ಮೂಲಕ ಚಾಲನೆ ನೀಡಿ ಹಾಗೂ "ವಿಶ್ವ ಪರಿಸರ ದಿನಾಚರಣೆ" ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಅದರಂತೆ ಹಿಂದಿನ ಕಾಲದಲ್ಲಿ ಔದ್ಯೋಗಿಕರಣ, ನಗರೀಕರಣಗಳಿಂದ ಕಾಡು ಗಡ ಮರಗಳ ಮಾರಣಹೋಮವಾಗುತ್ತಿದ್ದು, ಇದರಿಂದ ಪರಿಸರಕ್ಕೆ ತುಂಬಾ ಹಾನಿವಾಗುತ್ತದೆ, ಗಿಡ ಮರಳನ್ನು ಬೆಳೆಸಿ ಪರಿಸರ ಉತ್ತಮ ಪರಿಸರ ನೀರೂಮಿಸುವಂತೆ ತಿಳಿಸಿದರು.

ಬೀದರ ಸಿ.ಜೆ.ಎಮ್ ಹಾಗೂ ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಗೌರವಾನ್ವಿತ ಶ್ರೀ ಪ್ರಕಾಶ ಅರ್ಜುನ ಬನಸೋಡೆ ಅವರು ಪ್ರತಿಜ್ಞೆಯನ್ನು ಪರಿಸರದ ರಕ್ಷಣೆ ಕುರಿತು ಭೋದಿಸಿದರು.

ಈ ಸಂದರ್ಭದಲ್ಲಿ ಬೀದರ ಜೆ.ಎಮ್.ಎಫ್.ಸಿ ಹಾಗೂ ಒಂದನೇ ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಧೀಶರು ಗೌರವಾನ್ವಿತ ಶ್ರೀಮತಿ ಡಾ. ಶ್ರೀದೇವಿ ದರಬಾರೆ, ಬೀದರ ಜೆ.ಎಮ್.ಎಫ್.ಸಿ ಹಾಗೂ ಎರಡನೇ ಹಿರಿಯ ಸಿವಿಲ್ ನ್ಯಾಯಧೀಶರು ಗೌರವಾನ್ವಿತ ಶ್ರೀಮತಿ ಶೋಭಾ, ಜಿಲ್ಲಾ ವಕೀಲರ ಸಂಘದ ಜಂಟಿ ಕಾರ್ಯದರ್ಶಿಗಳಾದ ಶ್ರೀ ಉದಯಕುಮಾರ ಮುಲಗೆ, ಬೀದರ ಸಹಾಯಕ ಅರಣ್ಯ ಸಂರಕ್ಷಣಾ ಅಧಿಕಾರಿ ಚಂದ್ರಶೇಖರ ಖ್ಯಾಮಾ, ಬೀದರ ವಲಯ ಅರಣ್ಯ ಅಧಿಕಾರಿಗಳು ಪ್ರಾದೇಶಿಕ ಪ್ರಭಾರಿ ಸದಾನಂದ, ಬೀದರ ಅರಣ್ಯ ಇಲಾಖೆ ಜೀವ ವೈವಿಧ್ಯ ಸಮಿತಿ ಸದಸ್ಯರು ಪ್ರತ್ವಿರಾಜ, ಜಿಲ್ಲಾ ನ್ಯಾಯಾಂಗ ಇಲಾಖೆ, ಸಿಬ್ಬಂದಿ ವರ್ಗದವರು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸಿಬ್ಬಂದಿ ವರ್ಗದವರು, ಜಿಲ್ಲಾ ಅರಣ್ಯ ಇಲಾಖೆ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಪರಿಸರ ಸ್ವಚ್ಛತೆಗೆ ಪೌರ ಕಾರ್ಮಿಕರ ಕೊಡುಗೆ ಅಪಾರ

• ಮಲ್ಲಮ್ಮ ನುಡಿ ವಾರ್ತೆ ಬೀದರ್



ಪರಿಸರದ ಸ್ವಚ್ಛತೆ ಮತ್ತು ನೈರ್ಮಲ್ಯ ಕಾಪಾಡುವಲ್ಲಿ ಪೌರ ಕಾರ್ಮಿಕರು ಮಹತ್ವದ ಪಾತ್ರವಹಿಸುತ್ತಿದ್ದಾರೆ ಎಂದು ಪ್ರೊ. ಎಸ್.ವಿ. ಕಲ್ಮಠ ಹೇಳಿದರು.

ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ನಗರದ ವಿವೇಕಾನಂದ ಬಡಾವಣೆಯ ಪಂಚಾಕ್ಷರ ನಿಲಯದಲ್ಲಿರುವ 'ಕುಮಾರಕೃಪಾ ಕೋವಿಡ್ ಗೆದ್ದವರ ಕೈತೋಟ'ದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಪೌರ ಕಾರ್ಮಿಕರಾದ ಪ್ರವೀಣ ಹಾಗೂ ಗಣೇಶ ಅವರನ್ನು ಶಾಲು ಹೊದಿಸಿ, ಮಾಲಾರ್ಪಣೆ ಮಾಡಿ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಪ್ರೊ. ಕಲ್ಮಠ, ಪೌರ ಕಾರ್ಮಿಕರು ಪ್ರತಿನಿತ್ಯ ಮನೆ ಮನೆಗೆ ತೆರಳಿ ಗೃಹ ಕಸವನ್ನು ಸಂಗ್ರಹಿಸಿ ಸಾಗಿಸುವುದರ ಜೊತೆಗೆ ಬೀದಿಗಳಲ್ಲಿ ಬಿದ್ದಿರುವ ಕೊಳಕು ಹಾಗೂ ದುರ್ವಾಸನೆಯ ಕಸವನ್ನು ಸಹ ಸ್ವಚ್ಛಗೊಳಿಸುತ್ತಾರೆ. ಅವರ ಶ್ರಮದಿಂದ ಮನೆ ಹಾಗೂ ಸುತ್ತಮುತ್ತಲಿನ ಪರಿಸರ ನೈರ್ಮಲ್ಯ ಕಾಪಾಡಲಾಗುತ್ತದೆ. ಅವರು ನಿರ್ವಹಿಸುವ ಸೇವೆಯನ್ನು ಯಾವುದೇ ಕಾರಣಕ್ಕೂ ಕೀಳಾಗಿ ಕಾಣಬಾರದು ಎಂದು ಹೇಳಿದರು.

ಹಿಂದೆ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಪೌರ ಕಾರ್ಮಿಕರ ಪಾದ ತೊಳೆದು ಗೌರವ ಸಲ್ಲಿಸಿದ್ದನ್ನು ಸ್ಮರಿಸಿದ ಅವರು, ಸಮಾಜದಲ್ಲಿ ಪೌರ ಕಾರ್ಮಿಕರ ಸೇವೆಗೆ ನೀಡಬೇಕಾದ ಗೌರವದ ಪ್ರತೀಕವಾಗಿತ್ತು ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ನಿವೃತ್ತ ಪಿಎಸ್ಐ ವಿಜಯಕುಮಾರ ಬೊಗಲೆ ಅವರು ಪೌರ ಕಾರ್ಮಿಕರಿಗೆ ಶಾಲು ಹೊದಿಸಿ ಸನ್ಮಾನಿಸಿದರು. ರಾಜೇಶ್ವರಿ, ಶಾಂಭವಿ, ಸೂರ್ಯಕಾಂತ ಮಾಳಗೆ, ದಿಲೀಪಕುಮಾರ ಹುಲಸೂರೆ, ಬಬಲು, ಕಲ್ಮಠ ಕುಟುಂಬದ ಸದಸ್ಯರು ಹಾಗೂ ಬಡಾವಣೆಯ ನಿವಾಸಿಗಳು ಉಪಸ್ಥಿತರಿದ್ದರು.

# ಪ್ರತಿಭೆ ಪ್ರದರ್ಶಿಸಲು ಬೇಸಿಗೆ ಶಿಬಿರ ಸಹಕಾರಿ

• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ



ಮಕ್ಕಳು ಪ್ರತಿಭೆ ಪ್ರದರ್ಶಿಸಲು ಬೇಸಿಗೆ ಶಿಬಿರಗಳು ಅತ್ಯಂತ ಸಹಕಾರಿಯಾಗಿವೆ ಮಕ್ಕಳ ಪ್ರತಿಭೆಯನ್ನು ಗುರುತಿಸಿ ಪ್ರೋತ್ಸಾಹಿಸಬೇಕು ಇಂತಹ ಶಿಬಿರಗಳು ಅವಶ್ಯವಾಗಿವೆ ಎಂದು ಸಂಸ್ಕಾರ ಶಾಲೆಯ ಸಂಸ್ಥಾಪಕ ಈಶ್ವರ ರುಮ್ಮಾ ಹೇಳಿದರು.

ಭಾಲ್ಕಿ ನಗರದ ಸಂಸ್ಕಾರ ಶಾಲೆಯ ಆವರಣದಲ್ಲಿ ಹತ್ತು ದಿವಸಗಳ ಕಾಲ ಸೂರ್ಯ ಫೌಂಡೇಶನ್ ಹಾಗೂ ಸಂಸ್ಕಾರ ಶಾಲೆಯ ಸಹಭಾಗಿತ್ವದಲ್ಲಿ ಹಮ್ಮಿಕೊಂಡ ಬೇಸಿಗೆ ಶಿಬಿರದ ಸಮಾರೋಪ ಸಮಾರಂಭದಲ್ಲಿ ಅವರು ಮಾತನಾಡಿದರು.

ಮಕ್ಕಳು ಬಾಲ್ಯದಿಂದಲೆ ಪಾಠದ ಜೊತೆಗೆ ಆಟ, ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಭಾಗವಹಿಸುತ್ತಾ ಸಾಧನೆ ಮೆರೆಯಬೇಕು ಹಾಗೂ ಉತ್ತಮ ಹವ್ಯಾಸಗಳನ್ನು ರೂಢಿಸಿಕೊಳ್ಳುವುದರ ಮೂಲಕ ಸತ್ಪಜೆಗಳಾಗಿ ರೂಪುಗೊಳ್ಳಬೇಕು ಎಂದರು.

ಸೂರ್ಯ ಫೌಂಡೇಶನ್ ರಾಜ್ಯ ಸಂಚಾಲಕ ಗುರುನಾಥ ರಾಜಗೀರಾ ಮಾತನಾಡಿ ಸೂರ್ಯ ಫೌಂಡೇಶನ್ ವತಿಯಿಂದ ಇಡಿ ದೇಶಾದ್ಯಂತ ಹದಿನೆಂಟು ರಾಜ್ಯಗಳ ಸೂಮಾರು ಐನೂರಕ್ಕು ಹೆಚ್ಚು ಗ್ರಾಮಗಳಲ್ಲಿ ಪದ್ಮಶ್ರೀ ಜಯಪ್ರಕಾಶ್ ಅಗ್ರವಾಲ್ ಅವರ ದೂರದೃಷ್ಟಿಯಲ್ಲಿ ಸಮಾಜಮುಖಿ ಕೆಲಸಗಳು ನಡೆಯುತ್ತಿವೆ ಜಿಲ್ಲೆಯಲ್ಲಿ ಫೌಂಡೇಶನ್ ಉಪಾಧ್ಯಕ್ಷರಾದ ಅನಂತ ಬಿರಾದಾರ ಅವರ ಮಾರ್ಗದರ್ಶನದಲ್ಲಿ ಸೇವಾ ಚಟುವಟಿಕೆಗಳು ನಡೆಯುತ್ತಿವೆ.

ಬೇಸಿಗೆ ಕಾಲದಲ್ಲಿ ಭಾಲ್ಕಿ, ಧನ್ನೂರಾ ಹಾಗೂ ರಾಚಪ್ಪಾ ಗೌಡಗಾಂವ ಗ್ರಾಮಗಳಲ್ಲಿ ಹಮ್ಮಿಕೊಂಡ ಬೇಸಿಗೆ ಶಿಬಿರದಲ್ಲಿ ಮಕ್ಕಳಿಗೆ ಶಿಕ್ಷಣದ ಜೊತೆಗೆ ಚಿತ್ರಕಲೆ, ಹಾಡು, ನೃತ್ಯ, ನಾಟಕ, ಯೋಗ, ಧ್ಯಾನ ಕಲಿಸಲಾಯಿತು ಇದೆಲ್ಲದರಿಂದ ಮಕ್ಕಳ ಸರ್ವತೋಮುಖ ಅಭಿವೃದ್ಧಿ ಸಾಧ್ಯವಾಗುತ್ತದೆ ಎಂದರು.


ಧನ್ನುರಾ ಹಾಗೂ ರಾಚಪ್ಪಾ ಗೌಡಗಾಂವ ಗ್ರಾಮದಲ್ಲಿಯು ಬೇಸಿಗೆ ಶಿಬಿರ ಸಂಪನ್ನಗೊಂಡಿತು ಶಿಬಿರದಲ್ಲಿ ಉತ್ತಮ ಪ್ರದರ್ಶನಗೈದ ವಿದ್ಯಾರ್ಥಿಗಳಿಗೆ ಪ್ರಥಮ ಹಾಗೂ ದ್ವಿತೀಯ ಬಹುಮಾನದ ಜೊತೆಗೆನೆ ಭಾಗವಹಿಸಿದ ಎಲ್ಲ ಮಕ್ಕಳಿಗೆ ಪ್ರಮಾಣಪತ್ರ ವಿತರಿಸಲಾಯಿತು.

ಈ ಸಂದರ್ಭದಲ್ಲಿ ಫೌಂಡೇಶನ್ ಪ್ರಮುಖರಾದ ರಂಗರಾವ ಬಿರಾದಾರ, ಸಂಗಮೇಶ ದಾನಿ, ರಮೇಶ ಅರಾಳೆ, ಭೀಮರಾವ ಪಾಟೀಲ, ಮಲ್ಲಿಕಾರ್ಜುನ ಪಾಟೀಲ, ಮಹೇಶ ರುಮ್ಮಾ ಉಪಸ್ಥಿತರಿದ್ದರು.

# ಮುಂಗಾರು ಕೃಷಿಗೆ ಜಿಲ್ಲೆ ಸಜ್ಜು: 4.12 ಲಕ್ಷ ಹೆಕ್ಟೇರ್ ಬಿತ್ತನೆ ಗುರಿ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಮುಂಗಾರು ಹಂಗಾಮಿನ ಕೃಷಿ ಚಟುವಟಿಕೆಗಳಿಗೆ ಬೀದರ್ ಜಿಲ್ಲೆ ಸಂಪೂರ್ಣ ಸಜ್ಜಾಗಿದ್ದು, 2026ನೇ ಸಾಲಿನಲ್ಲಿ ಒಟ್ಟು 4.12 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ನಡೆಸುವ ಗುರಿ ಹೊಂದಲಾಗಿದೆ ಎಂದು ಜಂಟಿ ಕೃಷಿ ನಿರ್ದೇಶಕಿ ದೇವಿಕಾ ಆರ್. ತಿಳಿಸಿದ್ದಾರೆ.



ನಗರದ ಜಂಟಿ ಕೃಷಿ ನಿರ್ದೇಶಕರ ಕಚೇರಿಯಲ್ಲಿ ಶುಕ್ರವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಬಿತ್ತನೆ ಬೀಜ ಹಾಗೂ ರಸಗೊಬ್ಬರಗಳ ಸಮರ್ಪಕ ದಾಸ್ತಾನು ಲಭ್ಯ ಇದೆ ಎಂದು ಮಾಹಿತಿ ನೀಡಿದರು ಜಿಲ್ಲೆಯ ಎಲ್ಲಾ ರಸಗೊಬ್ಬರ ಮಾರಾಟಗಾರರು ಜಿಲ್ಲೆಯ ಪಾಲಿನ ರಸಗೊಬ್ಬರವನ್ನು ಬೇರೆ ಜಿಲ್ಲೆಗಳಿಗೆ ಮಾರಾಟ ಮಾಡದಂತೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ. ಅಂತರರಾಜ್ಯ ಗಡಿ ಪ್ರದೇಶಗಳಲ್ಲಿ ಚೆಕ್‌ಪೋಸ್ಟ್‌ಗಳ ಮೂಲಕ ಬಿತ್ತನೆ ಬೀಜ ಮತ್ತು ರಸಗೊಬ್ಬರ ಸಾಗಾಣಿಕೆಗೆ ನಿಗಾ ವಹಿಸಲಾಗುತ್ತಿದ್ದು, ನಿಯಮ ಉಲ್ಲಂಘಿಸುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಲಾಗಿದೆ. ಮಧ್ಯಪ್ರಾಚ್ಯದಲ್ಲಿನ ಪ್ರಸ್ತುತ ಬಿಕ್ಕಟ್ಟಿನ ಪರಿಣಾಮ ರಸಗೊಬ್ಬರ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಿರುವ ಹಿನ್ನೆಲೆಯಲ್ಲಿ ರೈತರು ಅನಗತ್ಯ ಆತಂಕಕ್ಕೆ ಒಳಗಾಗದೇ ಅಗತ್ಯಕ್ಕಿಂತ ಹೆಚ್ಚು ರಸಗೊಬ್ಬರ ಖರೀದಿಸಬಾರದು ಎಂದು ಕೃಷಿ ಇಲಾಖೆ ಮನವಿ ಮಾಡಿದೆ. ರೈತರು ಕೇವಲ ಡಿಎಪಿ ಗೊಬ್ಬರದ ಮೇಲೆಯೇ ಅವಲಂಬಿತರಾಗದೇ, 20:20:0:13, 12:32:16, 15:15:15 ಸೇರಿದಂತೆ ಇತರೆ ಸಂಯುಕ್ತ ರಸಗೊಬ್ಬರಗಳನ್ನು ಪರ್ಯಾಯವಾಗಿ ಬಳಸುವಂತೆ ಸಲಹೆ ನೀಡಿದರು.

ಜಿಲ್ಲೆಯ ವಾರ್ಷಿಕ ಸರಾಸರಿ ಮಳೆ 838 ಮಿ.ಮೀ. ಇದ್ದು, ಮುಂಗಾರು ಹಂಗಾಮಿನ ವಾಡಿಕೆ ಮಳೆ 650 ಮಿ.ಮೀ. ಆಗಿದೆ. ಪೂರ್ವ ಮುಂಗಾರು ಅವಧಿಯಲ್ಲಿ 60 ಮಿ.ಮೀ. ವಾಡಿಕೆ ಮಳೆಯ 77.90 ಮಿ.ಮೀ. ಮಳೆಯಾಗಿದ್ದು, ಇದು ವಾಡಿಕೆಗಿಂತ ಶೇ.31ರಷ್ಟು ಹೆಚ್ಚಾಗಿದೆ. ಮುಂಗಾರು ಹಂಗಾಮಿಗಾಗಿ ಜಿಲ್ಲೆಗೆ 1,04,339.70 ಕ್ವಿಂಟಲ್ ಬಿತ್ತನೆ ಬೀಜಗಳ ಹಂಚಿಕೆ ಮಾಡಲಾಗಿದೆ. ಇದರಲ್ಲಿ 1,03,165.51 ಕ್ವಿಂಟಲ್ ಸೋಯಾಅವರೆ, 951.92 ಕ್ವಿಂಟಲ್ ತೊಗರಿ, 101.09 ಕ್ವಿಂಟಲ್ ಹೆಸರು ಹಾಗೂ 87.70 ಕ್ವಿಂಟಲ್ ಉದ್ದು ಬೀಜಗಳಿವೆ. ಜಿಲ್ಲೆಯಲ್ಲಿ 30 ರೈತ ಸಂಪರ್ಕ ಕೇಂದ್ರಗಳು ಹಾಗೂ 127 ಹೆಚ್ಚುವರಿ ವಿತರಣಾ ಕೇಂದ್ರಗಳ ಮೂಲಕ ರೈತರಿಗೆ ರಿಯಾಯಿತಿ ದರದಲ್ಲಿ ಬೀಜ ವಿತರಣೆ ನಡೆಯುತ್ತಿದ್ದು, ಇದುವರೆಗೆ ಸುಮಾರು 37,800 ಕ್ವಿಂಟಲ್ ಬೀಜಗಳನ್ನು ವಿತರಿಸಲಾಗಿದೆ.

ಜಿಲ್ಲೆಗೆ ಮುಂಗಾರು ಹಂಗಾಮಿನಲ್ಲಿ ಒಟ್ಟು 43,366 ಮೆಟ್ರಿಕ್ ಟನ್ ರಸಗೊಬ್ಬರ ಬೇಡಿಕೆ ಇದ್ದು, ಜೂನ್ ಅಂತ್ಯದ ವೇಳೆಗೆ 21,559 ಮೆಟ್ರಿಕ್ ಟನ್ ಅಗತ್ಯವಿದೆ. ಇದಕ್ಕೆ ಎದುರಾಗಿ ಜೂನ್ 2ರ ವೇಳೆಗೆ 24,065 ಮೆಟ್ರಿಕ್ ಟನ್ ರಸಗೊಬ್ಬರ ದಾಸ್ತಾನು ಲಭ್ಯವಿದ್ದು, 8,212 ಮೆಟ್ರಿಕ್ ಟನ್ ವಿತರಣೆಗೊಂಡ ನಂತರವೂ 17,485 ಮೆಟ್ರಿಕ್ ಟನ್ ರಸಗೊಬ್ಬರ ಲಭ್ಯವಿದೆ.

ಜಿಲ್ಲೆಯ ಚಿಲ್ಲರೆ ಮತ್ತು ಸಗಟು ಮಾರಾಟಗಾರರ ಬಳಿ ಒಟ್ಟು 13,303 ಮೆಟ್ರಿಕ್ ಟನ್ ರಸಗೊಬ್ಬರ ದಾಸ್ತಾನು ಇದೆ. ಇದರಲ್ಲಿ 4,537 ಮೆಟ್ರಿಕ್ ಟನ್ ಯೂರಿಯಾ, 2,360 ಮೆಟ್ರಿಕ್ ಟನ್ ಡಿಎಪಿ, 5,005 ಮೆಟ್ರಿಕ್ ಟನ್ ಎನ್‌ಪಿಕೆಎಸ್, 708 ಮೆಟ್ರಿಕ್ ಟನ್ ಎಂಒಪಿ ಹಾಗೂ 697 ಮೆಟ್ರಿಕ್ ಟನ್ ಎಸ್‌ಎಸ್‌ಪಿ ರಸಗೊಬ್ಬರಗಳಿವೆ.

ಜಿಲ್ಲೆಯ 189 ಪ್ಯಾಕ್ಸ್‌ಗಳ ಪೈಕಿ 165 ಪ್ಯಾಕ್ಸ್‌ಗಳು ರಸಗೊಬ್ಬರ ಮಾರಾಟ ಪರವಾನಗಿ ಹೊಂದಿದ್ದು, ಕಾಪು ದಾಸ್ತಾನು ಯೋಜನೆಯಡಿ 900.25 ಮೆಟ್ರಿಕ್ ಟನ್ ಡಿಎಪಿ, 589 ಮೆಟ್ರಿಕ್ ಟನ್ ಯೂರಿಯಾ ಹಾಗೂ ವಿವಿಧ ಸಂಯುಕ್ತ ರಸಗೊಬ್ಬರಗಳನ್ನು ಪೂರೈಸಲಾಗಿದೆ. ಇದುವರೆಗೆ 93 ಪ್ಯಾಕ್ಸ್‌ಗಳಿಗೆ ರಸಗೊಬ್ಬರ ಸರಬರಾಜು ಮಾಡಲಾಗಿದ್ದು, ಉಳಿದ ಪ್ಯಾಕ್ಸ್‌ಗಳಿಗೆ ಜೂನ್ ತಿಂಗಳಲ್ಲಿ ಆದ್ಯತೆ ಮೇರೆಗೆ ಪೂರೈಕೆ ಮಾಡಲಾಗುವುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

# ಮನುಷ್ಯನ ಅತಿಯಾಸೆ ಪರಿಸರ ನಾಶಕ್ಕೆ ಕಾರಣ



• **ಮಲ್ಲಮ್ಮ ನುಡಿ ವಾರ್ತೆ ಹಗರಿಬೊಮ್ಮನಹಳ್ಳಿ**

ತಾಲೂಕಿನ ಪಿಂಜಾರ್ ಹೆಗ್ಡಳ್ ಗ್ರಾಮದ ಪಿ ಎಂ ಶ್ರೀ ಸರ್ಕಾರಿ ಪ್ರೌಢಶಾಲೆ ಹಾಗೂ ಪಿ ಎಂ ಶ್ರೀ ಕರ್ನಾಟಕ ಪಬ್ಲಿಕ್ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ವಿಶ್ವ ಪರಿಸರ ದಿನಾಚರಣೆ ಕಾರ್ಯಕ್ರಮ ಆಚರಿಸಲಾಯಿತು.ಪ್ರೌಢಶಾಲೆಯಲ್ಲಿ ಸಸಿ ನೆಡುವುದರ ಮುಖಾಂತರ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಹಿರಿಯ ಹೋರಾಟಗಾರರಾದ ಆರ್ ಎಸ್ ಬಸವರಾಜ್ ಅವರು, ಇಂದು ಮನುಷ್ಯನ ಅತಿಯಾದ ಆಸೆಯಿಂದ, ಸ್ವಾರ್ಥದಿಂದ, ಭೂಮಿ ಮೇಲಿನ ಮೋಹದಿಂದ ಅರಣ್ಯ ನಾಶ, ಮರಗಳ ಮಾರಣಹೋಮ ಮಾಡುತ್ತಾ, ತನ್ನ ಭವಿಷ್ಯವನ್ನು ತಾನೇ ಹಾಳು ಮಾಡಿಕೊಳ್ಳುತ್ತಿದ್ದಾನೆ. ನಾವು ನಮ್ಮ ಮುಂದಿನ ಪೀಳಿಗೆಗಾಗಿ ಪ್ರತಿ ಮನೆಗೆ ಎರಡು ಗಿಡಗಳನ್ನು ನೆಟ್ಟು ಪರಿಸರವನ್ನು ಸಮತೋಲನದಲ್ಲಿ ಇಟ್ಟಾಗ ಮಾತ್ರ ಮುಂದಿನ ಪೀಳಿಗೆಗೆ ಗಾಳಿ ನೀರು ಮಳೆ ಜೊತೆಗೆ ಪ್ರಕೃತಿಯನ್ನು ಉಳಿಸಬಹುದಾಗಿದೆ ಎಂದರು. ನಂತರ ಮಾತನಾಡಿದ ವಿಜಯನಗರ ಜಿಲ್ಲಾ ಗ್ಯಾರಂಟಿ ಪ್ರಾಧಿಕಾರದ ಸದಸ್ಯರು,ಹಾಗೂ ಕರ್ನಾಟಕ ದಲಿತ ಸಂಘರ್ಷ ಸಮಿತಿ ತಾಲೂಕು ಅಧ್ಯಕ್ಷರಾದ ಪರಶುರಾಮ್ ಹೆಗ್ಡಳ್ ಅವರು, ಪಿಂಜಾರ್ ಹೆಗ್ಡಳ್ ಗ್ರಾಮದ ಪರಿಸರ ಪ್ರೇಮಿಗಳು ಹಾಗೂ ಶಿಕ್ಷಣ ಪ್ರೇಮಿಗಳು, ಪ್ರತಿ ವರ್ಷ ಪರಿಸರ ದಿನಾಚರಣೆ ಯ ದಿನ ಶಾಲೆಗಳು ಹಾಗೂ ಸರ್ಕಾರಿ ಜಾಗಗಳಲ್ಲಿ 25 ರಿಂದ 50 ಗಿಡಗಳನ್ನು ನೆಡುವುದು ವಾಡಿಕೆಯಾಗಿದೆ. ಶಾಲೆಯಲ್ಲಿ ಉತ್ತಮ ಪರಿಸರ ನಿರ್ಮಾಣ ಮಾಡಲು ಗಿಡಗಳನ್ನು ನೆಡುತ್ತಿದ್ದೇವೆ. ವಿವಿಧ ತಳಿಯ ಹಣ್ಣಿನ ಗಿಡಗಳು, ತೆಂಗು, ಬೇವಿನ ಮರ, ಹುಣಸೆ ಮರ, ಹೂವಿನ ಗಿಡ ಸೇರಿದಂತೆ ಹಲವಾರು ತಳಿಯ ಗಿಡಗಳನ್ನು ಹಾಕಲಾಗಿದೆ. ಮುಂದಿನ ದಿನಗಳಲ್ಲಿ ಶಾಲೆಯಲ್ಲಿ ವಿದ್ಯಾರ್ಥಿಗೊಂದು ಗಿಡ ನೆಟ್ಟು ಪೋಷಿಸುವ ಯೋಜನೆಯಿದ್ದು, ತಾಪಮಾನ ಕಡಿಮೆ ಮಾಡಲು ಉತ್ತಮ ಗಾಳಿ ಬೆಳಕಿಗಾಗಿ ನಮ್ಮದೊಂದು ಅಳಿಲು ಸೇವೆ ಎಂದರು. ಈ ಸಂದರ್ಭದಲ್ಲಿ ಪ್ರೌಢಶಾಲೆಯ ಮುಖ್ಯಗುರುಗಳಾದ ಸುರೇಶ ರೆಡ್ಡಿ, ಇಂಗ್ಲಿಷ್ ಶಿಕ್ಷಕರಾದ ಆಂಜನೇಯ, ಗಣಿತ ಶಿಕ್ಷಕರಾದ ವೀರಣ್ಣ, ದೈಹಿಕ ಶಿಕ್ಷಕರಾದ ಚನ್ನಬಸಪ್ಪ, ಕನ್ನಡ ಶಿಕ್ಷಕರಾದ ವಾಮದೇವ್ ಬಣಕಾರ, ಗಣಿತ ಶಿಕ್ಷಕ ಕುಮಾರ್, ಹಿಂದಿ ಶಿಕ್ಷಕಿ ಶೋಭಾ, ವಿಜ್ಞಾನ ಶಿಕ್ಷಕಿ ಪದ್ಮಾವತಿ, ಸಂಗೀತ ಶಿಕ್ಷಕಿ ಸಂಗೀತಾ, ಗೆಸ್ಟ್ ಟೀಚರ್ ಬಸವರಾಜ, ಮತ್ತು ಊರಿನ ಹಿರಿಯರಾದ ಸಣ್ಣದುರುಗಪ್ಪ ಸೇರಿದಂತೆ ವಿದ್ಯಾರ್ಥಿಗಳು ಸೇರಿ ಕಾರ್ಯಕ್ರಮ ಯಶಸ್ವಿಗೊಳಿಸಿದರು.

# ಪ್ರತಿಯೊಬ್ಬ ನಾಗರಿಕ ಕನಿಷ್ಠ ಒಂದು ಗಿಡ ನೆಟ್ಟು ಪೋಷಣೆ ಮಾಡಿದರೆ ಪರಿಸರ ಉಳಿಯುತ್ತದೆ: ನಿಖಿಲೇಶ್ ಪಾಟೀಲ

• **ಮಲ್ಲಮ್ಮ ನುಡಿ ವಾರ್ತೆಬಸವನಬಾಗೇವಾಡಿ**



ಹಸಿರೇ ಉಸಿರು. ಪ್ರತಿಯೊಬ್ಬ ನಾಗರಿಕನು ಕನಿಷ್ಠ ಒಂದು ಗಿಡ ನೆಟ್ಟು ಪೋಷಣೆ ಮಾಡಿದರೆ ಪರಿಸರ ಉಳಿಯುತ್ತದೆ. ಮನಗೂಳಿ ಪಟ್ಟಣವನ್ನು ಹಸಿರು ಪಟ್ಟಣವನ್ನಾಗಿ ಮಾಡುವುದು ನಮ್ಮೆಲ್ಲರ ಜವಾಬ್ದಾರಿ. ನೆಟ್ಟ ಗಿಡಗಳನ್ನು ಸಂರಕ್ಷಿಸುವ ಹೊಣೆ ಪಂಚಾಯಿತಿಯದ್ದು ಎಂದು ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ನಿಖಿಲೇಶ್ ಪಾಟೀಲ್ ತಿಳಿಸಿದರು. ಅವರು ಶುಕ್ರವಾರ ತಾಲೂಕಿನ ಮನಗೂಳಿ ಪಟ್ಟಣ ಪಂಚಾಯಿತಿಯ ವತಿಯಿಂದ ವಿಶ್ವ ಪರಿಸರ ದಿನಾಚರಣೆ ಸಂದರ್ಭದಲ್ಲಿ ಮಾತನಾಡಿದರು.ಪಟ್ಟಣದ ವಾರ್ಡ್ ನಂ. 9 ರ ಉದ್ಯಾನವನ, ಪೊಲೀಸ್ ಠಾಣೆ ಆವರಣ, ಹೊಸ ಬಸ್ ನಿಲ್ದಾಣದ ಸುತ್ತಮುತ್ತ ಹಾಗೂ ಆರೋಗ್ಯ ಇಲಾಖೆಯ ಕಚೇರಿ ಆವರಣದಲ್ಲಿ ಒಟ್ಟು ಸುಮಾರು 150 ವಿವಿಧ ಜಾತಿಯ ಗಿಡಗಳನ್ನು ನೆಡುವ ಮೂಲಕ ಪರಿಸರ ಸಂರಕ್ಷಣೆಯ ಸಂದೇಶ ಸಾರಲಾಯಿತು.ಪಪಂ ಅಧ್ಯಕ್ಷ ಶೇಖಪ್ಪಗೌಡ ಬಿರಾದಾರ್, ಸದಸ್ಯರುಗಳಾದ ಭಾಗ್ಯರಾಜ್ ಶ್ರೀಶೈಲ ಸೊನ್ನದ, ಪ್ರದೀಪ್ ಜಾನಕರ, ಶಂಕರ್ ಶಿವಮತ, ಪ್ರಕಾಶ್ ಮನಗೂಳಿ, ಸಲೀಂ ಮಕಾಂದಾರ್, ರಾಜಶೇಖರ್ ವಾಲೀಕಾರ್ ತಿಪ್ಪಣ್ಣ ಕ್ಯಾತನವರ, ವಿಜಯಕುಮಾರ್ ರಜಪೂತ, ರಮೇಶ್ ತೊರವಿ, ಸಚಿನಗೌಡ ಪಾಟೀಲ್, ಪ್ರವೀಣ ಕರಿಶಂಕರಿ , ಹನಮಂತ ಬಿರಳದಿನ್ನಿ, ಸಂತೋಷ್ ಜಾಂಬರೆ, ಯಲ್ಲಪ್ಪ ಉಮನಾಬಾದಿ, ಸಿಬ್ಬಂದಿ ವರ್ಗದವರು, ಊರಿನ ಪ್ರಮುಖರು ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಪಾಲ್ಗೊಂಡು ಗಿಡ ನೆಡುವ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.ಕಾರ್ಯಕ್ರಮದಲ್ಲಿ ಸಾರ್ವಜನಿಕರಿಗೆ ಉಚಿತವಾಗಿ ಸಸಿಗಳನ್ನು ವಿತರಿಸಲಾಯಿತು.

# ವಿದ್ಯಾರ್ಥಿಗಳಲ್ಲಿ ಪರಿಸರ ಕಾಳಜಿ ಬೆಳೆಯಲಿ



ಪರಿಸರ ಸಂರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ವಿದ್ಯಾರ್ಥಿಗಳು ತಮ್ಮ ಜನ್ಮದಿನ, ಹಬ್ಬ ಹರಿದಿನಗಳದಂದು ತಮ್ಮ ಮನೆ ಪರಿಸರ, ಶಾಲಾ ಆವರಣದಲ್ಲಿ ಹೆಚ್ಚೆಚ್ಚು ಗಿಡಗಳನ್ನು ನೆಟ್ಟು ಅವುಳನ್ನು ಪೋಷಿಸಿ ಹಸಿರುಮಯ ವಾತಾವರಣ ನಿರ್ಮಿಸುವ ಸಂಕಲ್ಪ ತೊಡಬೇಕು.

**– ಗುರುಬಸವ ಪಟ್ಟದ್ದೇವರು ಹಿರೇಮಠ ಸಂಸ್ಥಾನ ಭಾಲ್ಕಿ**

ಇಂದಿನ ದಿನಮಾನಗಳಲ್ಲಿ ವಿದ್ಯಾರ್ಥಿಗಳು ಬಾಲ್ಯದಿಂದಲೇ ಕಾನೂನು ಅರಿವು ಹೊಂದುವುದು ಅವಶ್ಯಕವಾಗಿದೆ. ಕಾನೂನಿನ ಅರಿವಿನಿಂದ ಹಕ್ಕುಗಳು ರಕ್ಷಣೆ ಆಗುತ್ತವೆ. ಸಮಾಜದಲ್ಲಿ ಜವಾಬ್ದಾರಿಯುತ ಪ್ರಜೆಗಳಾಗಲು ಸಹಾಯ ಮಾಡುತ್ತದೆ ಮತ್ತು ಅಪರಾಧಗಳಿಂದ ದೂರವಿರಲು ಸಹಾಯಕವಾಗುತ್ತವೆ.

**– ರಾಜಶೇಖರ ಹರಸೂರ ಹಿರಿಯ ಶ್ರೇಣಿ ನ್ಯಾಯಾಧೀಶರು ಭಾಲ್ಕಿ**

• **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ**

ವಿದ್ಯಾರ್ಥಿಗಳು ಗಿಡ ನೆಡುವುದರಿಂದ ಬಾಲ್ಯದಿಂದಲೇ ಪ್ರಕೃತಿಯ ಮೇಲಿನ ಪ್ರೀತಿ ಮತ್ತು ಕಾಳಜಿ ಹೆಚ್ಚಾಗುತ್ತದೆ ಎಂದು ಭಾಲ್ಕಿಯ ಜೆಎಂಎಫ್‌ಸಿ ನ್ಯಾಯಾಲಯದ ನ್ಯಾಯಾಧೀಶ ರಾಜಶೇಖರ ಹರಸೂರ ಹೇಳಿದರು.ತಾಲೂಕಿನ ಕರಡ್ಯಾಳ ಚನ್ನಬಸವೇಶ್ವರ ಗುರುಕುಲದ ಸಮುಚ್ಛಯದಲ್ಲಿ ಪ್ರಾದೇಶಿಕ ಮತ್ತು ಸಾಮಾಜಿಕ ಅರಣ್ಯ ಇಲಾಖೆ ಭಾಲ್ಕಿ, ತಾಲೂಕು ಕಾನೂನು ಸೇವೆಗಳ ಸಮಿತಿ, ತಾಲೂಕು ನ್ಯಾಯಾವಾದಿಗಳ ಸಂಘ ಮತ್ತು ಚನ್ನಬಸವೇಶ್ವರ ಗುರುಕುಲ ಸಹಯೋಗದಲ್ಲಿ ವಿಶ್ವ ಪರಿಸರ ದಿನಾಚರಣೆ ನಿಮಿತ್ತ ಶುಕ್ರವಾರ ಆಯೋಜಿಸಿದ್ದ ಸಸಿ ನೆಡುವ ಕಾರ್ಯಕ್ರಮ ಮತ್ತು ಕಾನೂನು ಅರಿವು ಮತ್ತು ನೆರವು ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.ಶಾಲಾ ಆವರಣ ಮತ್ತು ಮನೆಯ ಪರಿಸರದಲ್ಲಿ ಗಿಡವನ್ನು ನೆಟ್ಟರಷ್ಟೇ ವಿದ್ಯಾರ್ಥಿಗಳ ಜವಾಬ್ದಾರಿ ಪೂರ್ಣಗೊಳ್ಳುವುದಿಲ್ಲ, ನೆಟ್ಟ ಗಿಡಕ್ಕೆ ಕಾಲಕಾಲಕ್ಕೆ ಪೋಷಣೆ ಮಾಡಬೇಕು. ಗಿಡಕ್ಕೆ ನಿತ್ಯ ನೀರು ಹಾಕಿ, ಗೊಬ್ಬರ ನೀಡಿ ಮಗುವಿನಂತೆ ಆರೈಕೆ ಮಾಡಿದಾಗ ಮಾತ್ರ ಮುಂದೆ ಗಿಡ ಮರವಾಗಿ ಬೆಳೆಯುತ್ತವೆ ಎಂದರು.

ಪ್ರಕೃತಿಯಲ್ಲಿನ ಗಿಡ ಮರಗಳನ್ನು ಕಾಳಜಿ ವಹಿಸಿ ರಕ್ಷಿಸಿದರೆ ಮನುಷ್ಯ ಹಾಗೂ ಪ್ರಾಣಿ, ಪಕ್ಷಿ ಸಂಕುಲಕ್ಕೆ ಶುದ್ಧ, ಆರೋಗ್ಯಕರ ವಾತಾವರಣ ನಿರ್ಮಾಣವಾಗುತ್ತದೆ. ಇದರಿಂದ ಪ್ರಾಕೃತಿಕ ಸಮತೋಲನ ಕಾಪಾಡಲು ಸಾಧ್ಯವಾಗುತ್ತದೆ.ಪ್ರಕೃತಿ ನಾಶದಿಂದ ಜೀವ ಸಂಕುಲಕ್ಕೆ ಆಪತ್ತು ಎದುರಾಗಿದೆ. ಸಸಿ ನೆಡುವ ಕಾರ್ಯಕ್ರಮಗಳು ಕೇವಲ ಪರಿಸರ ದಿನಾಚರಣೆಗೆ, ದಾಖಲೆಗಾಗಿ ಸೀಮಿತವಾಗದೆ ವರ್ಷವಿಡೀ ನಮ್ಮ ಪರಿಸರದಲ್ಲಿ ಸಸಿಗಳನ್ನು ನೆಟ್ಟು ಲಾಲನೆ ಪಾಲನೆ ಮಾಡಬೇಕು. ಗಿಡಮರಗಳನ್ನು ಉಳಿಸಿ ಬೆಳೆಸಲು ಪ್ರತಿಯೊಬ್ಬರೂ ಸಂಕಲ್ಪ ಮಾಡಬೇಕು ಎಂದು ತಿಳಿಸಿದರು.

ಸಾನ್ನಿಧ್ಯ ವಹಿಸಿದ್ದ ಹಿರೇಮಠ ಸಂಸ್ಥಾನದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಮಾತನಾಡಿ, ಪ್ರಕೃತಿ ಮತ್ತು ಪರಿಸರದಲ್ಲಿ ಅದ್ಭುತ ಶಕ್ತಿ ಅಡಗಿದೆ. ಬಸವಾದಿ ಶರಣರ ಅನುಭಾವದಿಂದ ರಚನೆಗೊಂಡ ವಚನ ಸಾಹಿತ್ಯ ಪ್ರಕೃತಿ, ಪರಿಸರದಲ್ಲಿ ಉದಯಸಿದೆ. ಪ್ರಕೃತಿ ಮಡಿಲಿನಲ್ಲಿ ಬುದ್ಧನಿಗೆ ಜ್ಞಾನೋದಯ ಆಗಿತ್ತು ಎಂಬುದನ್ನು ಇತಿಹಾಸದಿಂದ ತಿಳಿದು ಬರುತ್ತದೆ.

ಹಾಗಾಗಿ ಅಂತಹ ಪ್ರಕೃತಿ ಮತ್ತು ಪರಿಸರವನ್ನು ಉಳಿಸಿ ಬೆಳೆಸುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದು ತಿಳಿಸಿದರು.

ಸಿವಿಲ್ ನ್ಯಾಯಧೀಶ ದೇಶಭೂಷಣ ಕೌಜಲಗಿ ಬಸವ ಗುರುವಿನ ಪೂಜೆ ನೇರವೇರಿಸಿದರು. ಪ್ರಾದೇಶಿಕ ವಲಯ ಅರಣ್ಯ ಅಧಿಕಾರಿ ಸಚೀನ ಪಾಟೀಲ್ ಅಧ್ಯಕ್ಷತೆ ವಹಿಸಿಕೊಂಡಿದ್ದರು. ಈ ಸಂಧರ್ಭದಲ್ಲಿ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ನಿಕಟಪೂರ್ವ ಅಧ್ಯಕ್ಷ ಶಶಿಧರ ಕೋಸಂಬೆ, ತಾಲೂಕು ವಕೀಲರ ಸಂಘದ ಅಧ್ಯಕ್ಷ ಮಹೇಶ ರಾಚೋಟೆ, ಉಪಾಧ್ಯಕ್ಷ ಮಕರಂದ ಮಾನಕಾರಿ, ಸಹ ಕಾರ್ಯದರ್ಶಿ ನೀಲಕಂಠ ಬಿರಾದಾರ್, ಆಡಳಿತಾಧಿಕಾರಿ ಮೋಹನ ರೆಡ್ಡಿ ಸೇರಿದಂತೆ ಮುಂತಾದವರು ಇದ್ದರು. ಲಕ್ಷ್ಮಣ ಮೇತ್ರೆ ನಿರೂಪಿಸಿ, ವಂದಿಸಿದರು.

# ಪರಿಸರ ಸಂರಕ್ಷಣೆ ಪ್ರತಿಯೊಬ್ಬರ ಆದ್ಯ ಕರ್ತವ್ಯ



• **ಮಲ್ಲಮ್ಮ ನುಡಿ ವಾರ್ತೆ ಪಿರಿಯಾಪಟ್ಟಣ**

ಪರಿಸರವನ್ನು ಸಂರಕ್ಷಿಸುವುದು ಪ್ರತಿಯೊಬ್ಬರ ಆದ್ಯ ಕರ್ತವ್ಯ ಎಂದು ಹುಣಸೂರು ವನ್ಯಜೀವಿ ಉಪ ವಿಭಾಗದ ಸಹಾಯಕ ಅರಣ್ಯ ಸಂರಕ್ಷಾಧಿಕಾರಿ ಲಕ್ಷ್ಮಿಕಾಂತ್ ತಿಳಿಸಿದರು.

ತಾಲ್ಲೂಕಿನ ದೊಡ್ಡ ಹರವೆ ಕಾವೇರಿ ಸಾಕಾನೆ ಶಿಬಿರದಲ್ಲಿ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಆಯೋಜಿಸಿದ್ದ ಏಕ್ ಪೇಡ್ ಮಾ ಕೆ ನಾಮ್ ಸೆ ಎಂಬ ಅಭಿಯಾನದಡಿ ಸಸಿ ನೆಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಪ್ರತಿಯೊಬ್ಬರೂ ಪರಿಸರ ಸಂರಕ್ಷಿಸಬೇಕು. ಗಿಡಮರಗಳನ್ನು ಹೆಚ್ಚು ಬೆಳೆಸುವುದರಿಂದ ಬಿಸಿಲ ಬೇಗೆ ಕಡಿಮೆಯಾಗಿ ಜನರಿಗೆ ಉತ್ತಮ ಆಮ್ಲಜನಕ ದೊರೆಯಲಿದೆ. ಪರಿಸರದ ಸೌಂದರ್ಯವೂ ಹೆಚ್ಚಾಗಲಿದೆ. ಮುಂದಿನ ಪೀಳಿಗೆಗೆ ಪರಿಸರ ಸಂರಕ್ಷಣೆ ಮಾಡುವುದು ಎಲ್ಲರ ಕರ್ತವ್ಯವಾಗಿದೆ. ಮನೆಯ ಸುತ್ತಲೂ ಗಿಡಗಳನ್ನು ಬೆಳೆಸುವುದಲ್ಲದೇ ಮನೆಯಲ್ಲಿ ಬಳಸಿದ ನೀರನ್ನು ಮರು ಬಳಕೆ ಮಾಡಬೇಕು. ಶಾಲಾ ಕಾಲೇಜುಗಳಲ್ಲಿ ವಿದ್ಯಾರ್ಥಿಗಳು ಗಿಡಗಳನ್ನು ನೆಟ್ಟು ಇತರರಿಗೂ ಗಿಡ ನೆಡುವಂತೆ ಪ್ರೋತ್ಸಾಹಿಸಬೇಕು. ಇದು ಪರಿಸರವನ್ನು ಉಳಿಸುವ ಮಾರ್ಗ. ಪ್ರತಿಯೊಬ್ಬರೂ ಪ್ಲಾಸ್ಟಿಕ್ ತ್ಯಜಿಸಿ ಬಟ್ಟೆ ಚೀಲಗಳನ್ನು ಬಳಸಬೇಕು. ಮರುಬಳಕೆ ವಸ್ತುಗಳನ್ನು ಉಪಯೋಗಿಸುವುದರೊಂದಿಗೆ ಪರಿಸರ ಮಾಲಿನ್ಯವನ್ನು ತಡೆಗಟ್ಟಬಹುದು ಎಂದರು.

ಹುಣಸೂರು ಉಪ ವಿಭಾಗದ ಡಿವೈಎಸ್ಪಿ ಮಾತನಾಡಿ ಪ್ರಸ್ತುತ ದಿನಗಳಲ್ಲಿ ಅಭಿವೃದ್ಧಿಯ ಹೆಸರಿನಲ್ಲಿ ಗಿಡ–ಮರಗಳ ಮಾರಣಹೋಮ ನಡೆ–ಯುತ್ತಿದೆ. ಪ್ರತಿಯೊಬ್ಬರೂ ಹುಟ್ಟಿದ ದಿನದಂದು ಗಿಡ ನೆಟ್ಟು ಪೋಷಿಸಬೇಕು. ಸಮಾರಂಭಗಳಲ್ಲಿ ಉಡುಗೊರೆಗಳ ಬದಲಾಗಿ ಗಿಡಗಳನ್ನು ನೀಡುವುದರಿಂದ ಪರಿಸರವನ್ನು ಉಳಿಸಬಹುದು. ಸುತ್ತಮುತ್ತಲಿನ ಪರಿಸರವನ್ನು ರಕ್ಷಣೆ ಮಾಡುವುದು ನಮ್ಮೆಲ್ಲರ ಜವಾಬ್ದಾರಿ. ಮರ–ಗಿಡಗಳನ್ನು ಪೋಷಿಸಿದರೆ, ನಮ್ಮ ವೈಯಕ್ತಿಕ ಆರೋಗ್ಯದ ಜೊತೆಗೆ ಪರಿಸರವೂ ಸಂರಕ್ಷಣೆ ಆಗುತ್ತದೆ' ಎಂದರು.

ಈ ಸಂದರ್ಭದಲ್ಲಿ ಹುಣಸೂರು ವನ್ಯಜೀವಿ ವಲಯದ ವಲಯ ಅರಣ್ಯ ಅಧಿಕಾರಿ ಕೆ.ಇ.ಸುಬ್ರಮಣ್ಯ, ಬೈಲುಕುಪ್ಪೆ ಟಿಡಿಎಲ್ (ಖಿಜಭಜಣಚಿಟ ಆಭಿಇಜಥಿ ಐಚಿಥಿಾಜ) ಅಧ್ಯಕ್ಷೆ ಟೆಂಝಿನ್, ಹುಣಸೂರು ವನ್ಯಜೀವಿ ವಲಯದ ಸಿಬ್ಬಂದಿಗಳು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ವೈಯಕ್ತಿಕ ನಡವಳಿಕೆ, ಶಿಸ್ತಿನಿಂದ ಪರಿಸರ ಸಂರಕ್ಷಣೆ ಸಾಧ್ಯ: ನ್ಯಾ. ದೇವದಾಸ್

• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ**

ಜೂ.05:ಪರಿಸರ ಸಂರಕ್ಷಣೆ ಕೇವಲ ಗಿಡ ನೆಡುವುದಕ್ಕೆ ಸೀಮಿತವಾಗಿಲ್ಲ. ಅದು ನಮ್ಮ ವೈಯಕ್ತಿಕ ಸ್ವಚ್ಛತೆ ಹಾಗೂ ದಿನನಿತ್ಯದ ನಡವಳಿಕೆಯಿಂದ ಆರಂಭವಾಗಬೇಕು ಎಂದು ಕರ್ನಾಟಕ ಉಚ್ಚನ್ಯಾಯಾಲಯ ಗೌರವಾನ್ವಿತ ನ್ಯಾಯಮೂರ್ತಿ ಆರ್. ದೇವದಾಸ್ ಹೇಳಿದರು.

ಶುಕ್ರವಾರ ನಗರದ ಆದರ್ಶ ನಗರದಲ್ಲಿರುವ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಅರಣ್ಯ ಇಲಾಖೆ, ಶಾಲಾ ಶಿಕ್ಷಣ ಹಾಗೂ ಪದವಿ ಪೂರ್ವ ಶಿಕ್ಷಣ ಇಲಾಖೆ ಮತ್ತು ಗುಲಬರ್ಗಾ ಜಿಲ್ಲಾ ನ್ಯಾಯವಾದಿಗಳ ಸಂಘ ಸಹಯೋಗದಲ್ಲಿ ಆಯೋಜಿಸಿದ್ದ ವಿಶ್ವ ಪರಿಸರ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿದರು. ಅದಕ್ಕೂ ಮುನ್ನ ಕರ್ನಾಟಕ ಉಚ್ಚನ್ಯಾಯಾಲಯ ಗೌರವ ನ್ಯಾಯಮೂರ್ತಿ ಆರ್. ದೇವದಾಸ್ ಅವರು ಸಸಿ ನೆಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಮೊದಲು ನಮ್ಮ ದೇಹ, ಮನೆ ಹಾಗೂ ಶಾಲಾ ಆವರಣವನ್ನು ಸ್ವಚ್ಛವಾಗಿಟ್ಟುಕೊಳ್ಳುವ ಜವಾಬ್ದಾರಿ ನಮ್ಮದಾಗಬೇಕು ಎಂದರು.

ವಿವೇಕಾನಂದರ ಚಿಂತನೆಗಳನ್ನು ಸ್ಮರಿಸುತ್ತಾ, ಶಕ್ತಿಯುತ ದೇಹದಲ್ಲಿ ಶಕ್ತಿಯುತ ಮನಸ್ಸು ಇರುತ್ತದೆ. ಓದಿನ ಒತ್ತಡದ ನಡುವೆಯೂ ಮಕ್ಕಳಿಗೆ ಆಟ ಹಾಗೂ ವ್ಯಾಯಾಮ



ಅತ್ಯಗತ್ಯ. ಮಕ್ಕಳಲ್ಲಿ ಸ್ವಚ್ಛತೆಯ ಪ್ರೇರಣೆ ಮೂಡಿಸಲು ಶೈಕ್ಷಣಿಕ ಪ್ರವಾಸಗಳ ಅಗತ್ಯವನ್ನು ಎಂದು ತಿಳಿಸಿದರು.

ಇದೇ ವೇಳೆ, ಶೈಕ್ಷಣಿಕ ಪ್ರವಾಸಗಳ ಮಹತ್ವವನ್ನು ಒತ್ತಿಹೇಳಿದ ಅವರು, ವಿದ್ಯಾರ್ಥಿಗಳನ್ನು ಬೇರೆ ನಗರಗಳ ಉತ್ತಮ ಶಿಸ್ತು ಹಾಗೂ ಸ್ವಚ್ಛತೆಯುಳ್ಳ ಶಿಕ್ಷಣ ಸಂಸ್ಥೆಗಳಿಗೆ ಕರೆದೊಯ್ಯಬೇಕು. ಅಲ್ಲಿನ ಪರಿಸರವನ್ನು ನೋಡಿದಾಗ ಮಕ್ಕಳಲ್ಲಿ ತಮ್ಮ ಶಾಲೆಯನ್ನು ಸ್ವಚ್ಛವಾಗಿಟ್ಟುಕೊಳ್ಳುವ ಪ್ರೇರಣೆ ಮೂಡುತ್ತದೆ ಎಂದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಅಧ್ಯಕ್ಷ, ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಜಿ.ಎಲ್. ಲಕ್ಷ್ಮೀನಾರಾಯಣ ಅವರು ಮಾತನಾಡಿ, ಪರಿಸರ ದಿನಾಚರಣೆಯನ್ನು ಕೇವಲ ಒಂದು ದಿನಕ್ಕೆ ಸೀಮಿತಗೊಳಿಸದೆ, ಹಸಿ ಕಸ–ಒಣ ಕಸದ ವಿಲೇವಾರಿ ಹಾಗೂ ಗಿಡಮರಗಳ ಪೋಷಣೆಯನ್ನು ನಿರಂತರವಾಗಿ ಮಾಡುವುದು ಪ್ರತಿಯೊಬ್ಬರ ಸಂವಿಧಾನಬದ್ಧ ಕರ್ತವ್ಯ ಎಂದು ಹೇಳಿದರು.

ಹಸಿರು ಕಣ್ಣಿನ ಆರೋಗ್ಯಕ್ಕೆ ಹಿತಕರವಾಗಿದ್ದು, ಪ್ರತಿಯೊಬ್ಬರೂ ಕನಿಷ್ಠ ಒಂದು ಗಿಡ ಬೆಳೆಸಬೇಕು. ಪೋಷಕರ ಕನಸಿನಂತೆ ಕಷ್ಟಪಟ್ಟು ಓದಿ, ಧ್ರುವನಂತೆ ದೃಢವಾದ ಗುರಿ ಇಟ್ಟುಕೊಂಡು ಉನ್ನತ ಹುದ್ದೆಗೇರುವುದೇ ಶಿಕ್ಷಕರಿಗೆ ನೀಡುವ ನಿಜವಾದ ಗುರುದಕ್ಷಿಣೆ ಎಂದರು. ಹಿರಿಯ ಸಿವಿಲ್ ನ್ಯಾಯಾಧೀಶ ಹಾಗೂ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಶ್ರೀನಿವಾಸ ನವಲೆ ಅವರು ಮಾತನಾಡಿ, ಜಿಲ್ಲೆಯಲ್ಲಿ ಅರಣ್ಯ ಪ್ರದೇಶದ ಪ್ರಮಾಣವು ಶೇಕಡಾ 5 ಕ್ಕಿಂತಲೂ ಕಡಿಮೆಯಿದ್ದು, ಹಸಿರಿನ ಕೊರತೆಯಿಂದಾಗಿ ಬಿಸಿಲಿನ ತಾಪ ಹೆಚ್ಚಾಗುತ್ತಿದೆ. ಗಿಡಗಳನ್ನು ನೆಟ್ಟು ಪೋಷಿಸುವ ಮೂಲಕ ಪರಿಸರವನ್ನು ರಕ್ಷಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ ಎಂದು ಹೇಳಿದರು.

ಕೇವಲ ಸಸಿ ನೆಡುವುದಷ್ಟೇ ಅಲ್ಲದೆ, ಸಾಲುಮರದ ತಿಮ್ಮಕ್ಕನವರಂತೆ ಗಿಡಗಳನ್ನು ದೈನಂದಿನ ನೀರುಣಿಸಿ ಪೋಷಿಸುವುದು ಮುಖ್ಯ. ಭವಿಷ್ಯದ ಪೀಳಿಗೆಯ ಆರೋಗ್ಯಕರ ಜೀವನಕ್ಕಾಗಿ ಕಾನೂನು ಸೇವೆಗಳ ಪ್ರಾಧಿಕಾರವು ಒಟ್ಟು 5 ಕೋಟಿ ಸಸಿಗಳನ್ನು ನೆಡುವ ಬೃಹತ್ ಯೋಜನೆಯನ್ನು ಹಮ್ಮಿಕೊಂಡಿದೆ ಎಂದು ತಿಳಿಸಿದರು.

# ಗುರುಮಠಕಲ್ ಅನಧಿಕೃತ ಗೂಡಂಗಡಿಗಳ ತೆರವಿಗೆ ಸಾರ್ವಜನಿಕರ ಆಗ್ರಹ



• **ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್**

ಪಟ್ಟಣದ ಬಸ್ ನಿಲ್ದಾಣದ ಸುತ್ತಮುತ್ತ ರಸ್ತೆ ಒತ್ತುವರಿ ಮಾಡಿಕೊಂಡಿರುವ ಅನಧಿಕೃತ ಗೂಡಂಗಡಿಗಳ ಸಂ–ಖ್ಯೆ ಹೆಚ್ಚಾಗಿರುವುದರಿಂದ ರಸ್ತೆ ಒತ್ತುವರಿ ಸಮಸ್ಯೆ ತಲೆದೋರಿದೆ. ಇದರಿಂದ ವಾಹನ ಸಂಚಾರಕ್ಕೆ ಅಡಚಣೆ ಉಂಟಾಗುತ್ತಿದ್ದು, ಅಪಘಾತದ ಸಾಧ್ಯತೆಯೂ ಹೆಚ್ಚಾಗಿದೆ ಎಂದು ಸಾರ್ವಜನಿಕರು ಕಳವಳ ವ್ಯಕ್ತಪಡಿಸಿದ್ದಾರೆ.

ಬಸ್ ನಿಲ್ದಾಣ ಪ್ರದೇಶದಲ್ಲಿ ಸ್ವಚ್ಛತೆ ಕಾಪಾಡುವುದು, ವಿಶೇಷವಾಗಿ ಬಸ್ ನಿಲ್ದಾಣದ ಬಳಿ ದಿನವಿಡೀ ಕಾರ್ಯನಿರ್ವಹಿಸುವ ಆಟೋ ಚಾಲಕರು ದುರ್ವಾಸನೆಯಿಂದ ಬಳಲುತ್ತಿದ್ದು, ಸಂಬಂಧಪಟ್ಟ ಅಧಿಕಾರಿಗಳು ತಕ್ಷಣ ಕ್ರಮ ಕೈಗೊಂಡು ಶೌಚಾಲಯವನ್ನು ಸ್ಥಳಾಂತರಿಸಬೇಕು ಅಥವಾ ಸಮರ್ಪಕ ನಿರ್ವಹಣೆ ಮಾಡಬೇಕು .ಅನಧಿಕೃತ ಗೂಡಂಗಡಿಗಳನ್ನು ತೆರವುಗೊಳಿಸುವುದು ಹಾಗೂ ಖಾಸಗಿ ವಾಹನಗಳ ಅಕ್ರಮ ನಿಲುಗಡೆಗೆ ಕಡಿವಾಣ ಹಾಕಿ ಸಾರ್ವಜನಿಕರ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಲು ಸಾರ್ವಜನಿಕರು ಸಂಬಂಧಪಟ್ಟ ಅಧಿಕಾರಿಗಳಿಗೆ ಆಟೋ ಚಾಲಕರು ಆಗ್ರಹ ವ್ಯಕ್ತ ಪಡಿಸಿದ್ದಾರೆ. ಸರಿಯಾದ ಪಾದಚಾರಿ ಮಾರ್ಗದ ವ್ಯವಸ್ಥೆ ಇಲ್ಲದಿರುವದು, ಬಾರಿ ಪ್ರಮಾಣದ ದೊಡ್ಡ ಸರಕು ವಾಹನಗಳ ಓಡಾಟ, ರಸ್ತೆ ಅತಿಕ್ರಮಣ ಮಾಡಿಕೊಂಡಿರುವ ತರಕಾರಿ ಹಾಗೂ ಹಣ್ಣಿನ ವ್ಯಾಪರಿಗಳಿಂದ ಇನ್ನಷ್ಟು ಟ್ರಾಫಿಕ್ ಸಮಸ್ಯೆ ಉಲ್ಬಣಗೊಂಡಿದ್ದು, ಈಗಲಾದರೂ ಇತ್ತಕಡೆ ಸಂಬಂಧ ಪಟ್ಟ ಅಧಿಕಾರಿಗಳು ಗಮನ ಕೊಡಲು ಮನವಿ ಮಾಡಿದ್ದಾರೆ.

ಬಸ್ ನಿಲ್ದಾಣಕ್ಕೆ ಹೊಂದಿಕೊಂಡಿರುವ ಸಾರ್ವಜನಿಕ ಶೌಚಾಲಯ ಸ್ವಚ್ಛತೆಯ ಕೊರತೆಯಿಂದ ದುರ್ವಾಸನೆ ಬೀರುತ್ತಿದ್ದು, ಪ್ರಯಾಣಿಕರು ಹಾಗೂ ಆಟೋ ಚಾಲಕರು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ. ಶೌಚಾಲಯದ ಸುತ್ತಮುತ್ತ ಅಸ್ವಚ್ಛ ವಾತಾವರಣ ನಿರ್ಮಾಣವಾಗಿರುವುದರಿಂದ ಆರೋಗ್ಯ ಸಮಸ್ಯೆಗಳು ಉಂಟಾಗುವ ಭೀತಿ ಎದುರಾಗಿದೆ.

ನಾರಾಯಣ ಮಜ್ಜಿಗೆ
ಗುರುಮಠಕಲ್ ಆಟೋ ಚಾಲಕರ ಸಂಘದ ಅಧ್ಯಕ್ಷ

ಬಸ್ ನಿಲ್ದಾಣದ ಸುತ್ತಮುತ್ತ ಖಾಸಗಿ ವಾಹನಗಳ ಅಕ್ರಮ ನಿಲುಗಡೆ ಹೆಚ್ಚಾಗಿರುವುದರಿಂದ ಸಂಚಾರ ದಟ್ಟಣೆ ಉಂಟಾಗುತ್ತಿದೆ. ಪ್ರಯಾಣಿಕರು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರಿಗೆ ಓಡಾಟಕ್ಕೆ ತೊಂದರೆ–ಯಾಗುತ್ತಿದ್ದು, ಖಾಸಗಿ ವಾಹನಗಳ ನಿಲುಗಡೆಗೆ ನಿಯಂತ್ರಣ ಹೇರಬೇಕು, ಅನಧಿಕೃತ ಗೂಡಂಗಡಿ ತೆರವು ಗೊಳಿಸಬೇಕು,

ನಾಗೇಶ್ ಗದ್ದಿಗಿ
ಜಯಕರ್ನಾಟಕ ಸಂಘಟನೆ ತಾಲೂಕಾಧ್ಯಕ್ಷ


:CITATION:
IN THE COURT OF THE PRL. CIVIL JUDGE AND JMFC., AT HUMNABAD.
CRL. MISC. No.2323/2026.

Petitioners:
1. Vishwanath S/o Manikappa, Age: 54-year,
2. Seetamma W/o Late Baburao, Age: 56-year,
3. Sridevi W/o Kalyanrao. Age: 50-year,
4. Rajakumar S/o Manikappa. Age: 52-year,
All R/o Allur, Tq: Humnabad, Dist. Bidar.

Respondent:
The Registrar of Birth and Death through The Tahasildar Humnabad.

Sub:- Petition U/Sec. 13(3) of Birth and Death Registration Act-1969

Whereas, the above mentioned petitioners have filed the petition under section 13(3) of Birth and Death Registration Act-1969 praying this Honorable Court to issue Death Certificate of Father of Petitioner No.1 and Sister-in-law of petitioner No.2 and Younger sister of petitioner No.3 and Younger brother of petitioner No.4 by namely **LATE. MANIKAPPA S/O SAIBANNA,** who was died on 11.01.2025 at Village Allura. Tq. Humnabad. Dist. Bidar. The petitioners claiming the Death Certificate of said for transfer of property and other official purpose and home record.

Therefore, it is hereby proclaimed that if any persons have got any objection in this regard, may approach to this Court on 28.07.2026 at 11.00 AM in person or any authorized pleader to answer such claim otherwise the matter will be heard and determined in your absence as ner law

Given under my hand and seal of he court, this the 04-06-2026

//By order of the court//
Chief Ministerial Officer,
Prl. Civil Judge & JMFC Court,
Humnabad



:CITATION:
IN THE COURT OF THE I ADDL. CIVIL JUDGE AND JMFC., AT HUMNABAD.
CRL. MISC. No.2316/2026.

Petitioners:
Basavaraj S/o late Fakeerappa, Age: 38-year, Occu: Agriculture. R/o Village Mangalgi. Tq. Chitguppa.

Respondent:
The Registrar of Birth and Death through The Tahasildar Chitguppa.

Sub: Petition U/Sec. 13(3) of Birth and Death Registration Act-1969

Whereas, the above mentioned petitioners have filed the petition under section 13(3) of Birth and Death Registration Act-1969 praying this Honorable Court to issue Death Certificate of Father of petitioner Deceased by namely LATE. FAKEERAPPA S/O SAMBANNA, he was died on 18.10.2020 at Village Mangalgi, Tq. Chitguppa. Dist. Bidar. The petitioners claiming the Death Certificate of said for transfer of property and other official purpose and home record.

Therefore, it is hereby proclaimed that if any persons have got any objection in this regard, may approach to this Court on 25.06.2026 at 11.00 AM in person or any authorized pleader to answer such claim otherwise the matter will be heard and determined in your absence as per law.

Given under my hand and seal of he court, this the 03-06-2026.

//By order of the court//
Chief Ministerial Officer,
Prl. Civil Judge & JMFC Court,
Humnabad.



:CITATION:
IN THE COURT OF THE I ADDL. CIVIL JUDGE AND JMFC., AT HUMNABAD.
CRL. MISC. No.2317/2026.

Petitioners:
1. Ghalemma W/o late Devindra, Age: 69-yrs. Occu: Agriculture.
R/o Village Talmadgi, Tq. Chitguppa. Dist. Bidar.
2. Prema D/o late Devindra, W/o Tukaram, Age: 44-yrs. Occu: Agriculture. R/o Village Janthi, Tq. Bhalki. Dist. Bidar.
3. Ramesh S/o late Devindra, Age: 43-yrs. Occu: Agriculture.
4. Shalivan S/o late Devindra, Age: 41-yrs. Occu: Agriculture.
Petitioner No.3 and 4 R/o Village Talmadgi, Tq. Chitguppa. Dist. Bidar.
5. Reshma D/o late Devindrappa W/o Prabhu, Age: 38-yrs. Occu: House hold. R/o Village Mugnoor, Tq. Humnabad. Dist. Bidar.
6. Surekha D/o late Devindra W/o Dhanraj, Age: 34-yrs, Occu: House hold.
R/o Mailur ROAD Budhavihar GANDHI Gunj, Bidar.
7. Meenakshi D/o late Devindra, Age: 32-yrs. Occu: House hold.
8. Jayashree D/o late Devindra, Age: 29-yrs. Occu: House hold.
Petitioner No.7 and 8 R/o Village Talmadgi, Tq. Chitguppa. Dist. Bidar.

Respondent:
The Registrar of Birth and Death through the Tahasildar Chitguppa.

Sub:- Petition U/Sec. 13(3) of Birth and Death Registration Act-1969.

Whereas, the above mentioned petitioners have filed the petition under section 13(3) of Birth and Death Registration Act-1969 praying this Honorable Court to issue Death Certificate of Father of petitioner No.1 to 8 by namely LATE. DEVINDRA S/O MAREPPA, he is died on 26.06.2024 at Village Talmadgi, Tq. Chitguppa. Dist. Bidar. The petitioners claiming the Death Certificate of said for transfer of property and other official purpose and home record.

Therefore, it is hereby proclaimed that if any persons have got any objection in this regard, may approach to this Court on 25.06.2026 at 11.00 AM in person or any authorized pleader to answer such claim otherwise the matter will be heard and determined in your absence as per law.

Given under my hand and seal of he court, this the 03-06-2026

//By order of the court//
Chief Ministerial Officer,
Prl. Civil Judge & JMFC Court,
Humnabad.

# ಇಂದು ನೆಟ್ಟ ಸಸಿಗಳು ಮುಂದೆ ಹೆಮ್ಮರವಾಗಲಿದೆ: ಫಾದರ್ ಶಾಬು ಫ್ರಾನ್ಸಿಸ್

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ



ವಿಶ್ವಪರಿಸರ ದಿನಾಚರಣೆಯ ಅಂಗವಾಗಿ ಡಾನ್ ಬೋಸ್ಕೋ ಸಮಾಜ ಸೇವಾ ಕೇಂದ್ರ, ಯಾದಗಿರಿಯಲ್ಲಿ ಪರಿಸರ ದಿನಾಚಾರಣೆ–ಯ ಅಧ್ಯಕ್ಷತೆಯ ಭಾಷಣದಲ್ಲಿ ಡಾನ್ ಬೊಸ್ಕೋ ಸಮಾಜ ಸೇವಾ ಕೇಂದ್ರದ ನಿರ್ದೇಶಕರಾದಶಾಬು ಫ್ರಾನ್ಸಿಸ್ ಅವರು ಮಾತನಾಡಿ ಇಂದು ನೆಟ್ಟ ಸಸಿಗಳು ಒಂದು ವರ್ಷದ ನಂತರಹಸಿರಾಗಿ ಬೆಳೆದು ನಿಂತಿರುವುದನ್ನು ನೋಡುವುದೇ ನಮ್ಮ ಹೆಮ್ಮೆಯಾಗಬೇಕು ಎಂದು ತಿಳಿಸಿದರು. ನಮ್ಮ ಮನೆಯಲ್ಲಿ ಇರುವ ಹಳೆಯ ಪ್ಲಾಸ್ಟಿಕ್ ವಸ್ತುಗಳನ್ನು ಬಳಸಿಕೊಂಡು ಅದರಲ್ಲಿ ಸಸಿಗಳನ್ನುನಡೆಸಿ ಪರಿಸರವನ್ನು ಹಸಿರಾಗಿಸೋಣ ಎಂದು ವಿದ್ಯಾರ್ಥಿಗಳಿಗೆ ಕರೆಕೊಟ್ಟರು.ತ್ಯಾಜ್ಯವಸ್ತುಗಳನ್ನುಮರುಬಳಕೆ ಮಾಡುವ ಮೂಲಕ ಉಪಯುಕ್ತವಸ್ತುಗಳಾಗಿ ಪರಿವರ್ತಿಸಬಹುದಾಗಿದೆ ಎಂದರು. ಕಾರ್ಯಕ್ರಮವನ್ನುಉದ್ದೇಶಿಸಿ ಮಾತನಾಡಿದ ಡಾನ್ ಬೋಸ್ಕೋ ಆಡಳಿತಾಧಿಕಾರಿಗಳಾದ ಫಾ. ಮಿಥುನ್ ಅವರು, ಮಾನವನ ಜೀವನಕ್ಕೆ ಶುದ್ಧ ಗಾಳಿ, ಶುದ್ಧ ನೀರು ಹಾಗೂ ಫಲವತ್ತಾದ ಮಣ್ಣು ಎಂಬ ಮೂರು ಮೂಲಭೂತ ಅಂಶಗಳು ಅತ್ಯಗತ್ಯವಾಗಿವೆ ಎಂದು ಹೇಳಿದರು. ಮಾನವನ ಅತಿಯಾದ ಆಸೆ, ಸ್ವಾರ್ಥ ಮತ್ತು ನಿರ್ಲಕ್ಷ್ಯದ ಪರಿಣಾಮವಾಗಿ 2001 ರಿಂದ 2024ರ ಅವಧಿಯಲ್ಲಿ ವಿಶ್ವದಾದ್ಯಂತ ಸುಮಾರು 2.31 ಬಿಲಿಯನ್ ಹೆಕ್ಟೇರ್ ಅರಣ್ಯ ಪ್ರದೇಶ ನಾಶವಾಗಿದೆ ಎಂದು ವಿಷಾದ ವ್ಯಕ್ತಪಡಿಸಿದರು. ಪರಿಸರ ದಿನದ ಅಂಗವಾಗಿ ಕೈಗೊಂಡ ಪ್ರತಿಜ್ಞೆಯನ್ನು ಕೇವಲ ಕಾರ್ಯಕ್ರಮಕ್ಕೆ ಸೀಮಿತಗೊಳಿಸದೇ, ದೈನಂದಿನ ಜೀವನದಲ್ಲಿ ಅನುಸರಿಸುವ ಮೂಲಕ ಪರಿಸರ ಸಂರಕ್ಷಣೆಗೆ ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದು ಕರೆ ನೀಡಿದರು.

ಡಾನ್ ಬೋಸ್ಕೋ ಪದವಿ ಕಾಲೇಜಿನ ಉಪ ಪ್ರಾಂಶುಪಾಲರಾದ ಫಾ. ಜಿತ್ ಅವರು ಮಾತನಾಡಿ, ಸಸ್ಯಗಳು ಮತ್ತು ಮಾನವರ ನಡುವಿನ ಅವಿನಾಭಾವ ಸಂಬಂಧವನ್ನು ಉದಾಹರಣೆಗಳ ಮೂಲಕ ವಿವರಿಸಿದರು. ಇತರ ಜೀವಿಗಳಿಗಿಂತ ಮರಗಳನ್ನು ಸಂರಕ್ಷಿಸುವ ಹಾಗೂ ಪರಿಸರವನ್ನು ಕಾಪಾಡುವ ಹೊಣೆಗಾರಿಕೆ ಮಾನವನ ಮೇಲಿದೆ ಎಂದು ತಿಳಿಸಿದರು. ಯಾದಗಿರಿ ಜಿಲ್ಲೆಯ ನದಿಗಳು ಹಾಗೂ ಜಲಮೂಲಗಳು ಮಾಲಿನ್ಯಕ್ಕೆ ಒಳಗಾಗುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದ್ದು, ಹಸಿರು ಪರಿಸರ ನಿರ್ಮಾಣದ ಕಾರ್ಯವನ್ನುನಮ್ಮಿಂದಲೇ ಆರಂಭಿಸಬೇಕು ಎಂದು ಹೇಳಿದರು. ಮರಗಳನ್ನು ಉಳಿಸಿ ಜೀವವನ್ನು ಉಳಿಸಿ" ಎಂಬ ಸಂದೇಶವನ್ನು ವಿದ್ಯಾರ್ಥಿಗಳಿಗೆ ನೀಡಿದರು. ಮೈಂಡ್ಸ್ ಯೋಜನೆಯ ಸಂಯೋಜಕರಾದ ಶರಣಪ್ಪ ಸಿ.ಅಮರಾಪುರ ಅವರು ಮಾತನಾಡಿ, ವಿಶ್ವ ಪರಿಸರ ದಿನಾಚರಣೆಯ ಅಂಗವಾಗಿ ವಿಶ್ವಸಂಸ್ಥೆ ನೀಡಿರುವ ಪ್ರಕೃತಿಯಿಂದ ಸ್ಫೂರ್ತಿ ಹವಾಮಾನಕ್ಕಾಗಿ ಮತ್ತು ನಮ್ಮ ಭವಿಷ್ಯಕ್ಕಾಗಿ ಎಂಬ ಘೋಷವಾಕ್ಯದ ಮಹತ್ವವನ್ನು ವಿವರಿಸಿದರು. ಪರಿಸರ ಸಂರಕ್ಷಣೆ ಮತ್ತು ಹವಾಮಾನ ಬದಲಾವಣೆಯ ನಿಯಂತ್ರಣ–ಕ್ಕಾಗಿ ಪ್ರತಿಯೊಬ್ಬರೂ ತಮ್ಮದೇ ಆದ ಕೊಡುಗೆಯನ್ನು ನೀಡುವುದು ಅಗತ್ಯವಾಗಿದೆ ಎಂದು ತಿಳಿಸಿದರು. ಇದೇ ಸಂದರ್ಭದಲ್ಲಿ ಡಿ. ಬಿ. ಟೆಕ್. ವಿದ್ಯಾರ್ಥಿನಿ ಸಂಜನಾ ಅವರು ತಮ್ಮ ಹುಟ್ಟುಹಬ್ಬದ ಪ್ರಯುಕ್ತ ಒಂದು ಸಸಿಯನ್ನು ನಡೆಸಲಾಯಿತು .ಅವರ ಉದಾಹರಣೆಯನ್ನು ಕೊಡುತ್ತ ಪ್ರತಿಯೊಬ್ಬರೂ ತಮ್ಮ ಹುಟ್ಟುಹಬ್ಬವನ್ನು ಕೇಕ್ ಕತ್ತರಿಸುವುದರೊಂದಿಗೆ ಮಾತ್ರ ಆಚರಿಸದೆ ಒಂದು ಸಸಿ ನೆಡುವ ಮೂಲಕ ಆಚರಿಸಿದರೆ ಅದು ಸಮಾಜಕ್ಕೆ ಹಾಗೂ ಪರಿಸರಕ್ಕೆ ಅತ್ಯುತ್ತಮ ಕೊಡುಗೆಯಾಗುತ್ತದೆ ಎಂದು ಹೇಳಿದರು. ಹೀಗೆ ಮಾಡಿದಾಗ ಪರಿಸರ ಸಮತೋಲನ ಕಾಪಾಡಲು, ತಾಪಮಾನ ಏರಿಕೆ ತಗ್ಗಿಸಲು ಹಾಗೂ ನೈಸರ್ಗಿಕ ವಿಕೋಪಗಳ ಪರಿಣಾಮವನ್ನು ಕಡಿಮೆ ಮಾಡಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.ಈ ವೇಳೆಯಲ್ಲಿ ಡಾನ್ ಬೋಸ್ಕೋ ಸಂಸ್ಥೆಯ ರೆಕ್ಟರ್ ಹಾಗೂ ಮ್ಯಾನೇಜರ್ ಫಾ. ಸಜಿ ಜಾರ್ಜ್, ವಾಯ್ಸ್ ಆಫ್ ಯಾದಗಿರಿ ಕನ್ನಡ ದಿನಪತ್ರಿಕೆಯ ಸಂಪಾದಕರಾದನಿಜಾಮುದ್ದೀನ್, ಮಲ್ಲಮ್ಮ ನುಡಿಯ ವರದಿಗಾರರಾದ ದೇವಿಂದ್ರ, ಡಿ.ಬಿ. ಟೆಕ್ ಸಿಬ್ಬಂದಿಗಳಾದ ಪ್ರತಿಭಾ, ಜೀವನೋಪಾಯ ಯೋಜನೆಯ ಸಂಯೋಜಕರಾದ ದೇವೇಂದ್ರಪ್ಪ, ಡಿ.ಬಿ. ಟೆಕ್ ವಿದ್ಯಾರ್ಥಿಗಳು ಹಾಗೂ ಸಂಚಾರಿ ಆಸ್ಪತ್ರೆಯ ಸಿಬ್ಬಂದಿ ವರ್ಗದವರು ಭಾಗವಹಿಸಿದ್ದರು.ಡಿ.ಬಿ. ಟೆಕ್‌ನ ತರಬೇತಿದಾರರಾದ ಡಯಾನ ಅವರು ಪರಿಸರ ಸಂರಕ್ಷಣೆಯ ಪ್ರತಿಜ್ಞಾವಿಧಿಯನ್ನು ಬೋಧಿಸಿದರು. ಕಾರ್ಯಕ್ರಮವನ್ನು ಡಿ.ಬಿ. ಟೆಕ್‌ನ ಸಂಯೋಜಕರಾದ ಮಲ್ಲಿಕಾರ್ಜುನ ಕುರುಕುಂದ ಅವರು ನಿರೂಪಿಸಿದರು. ಮೈಂಡ್ಸ್ ಯೋಜನೆಯ ಆಪ್ತ ಸಮಾಲೋಚಕರಾದ ಸೂರ್ಯಕಾಂತ್ ಅವರು ವಂದಿಸಿದರು. ಒಂದು ಸಸಿ ನೆಡಿ ಭವಿಷ್ಯವನ್ನು ಬೆಳೆಸಿ ಎಂಬ ಸಂದೇಶದೊಂದಿಗೆ ವಿಶ್ವ ಪರಿಸರ ದಿನಾಚರಣೆ ಅರ್ಥಪೂರ್ಣವಾಗಿ ನೆರವೇರಿತು.

# ಪರಿಸರ ಉಳಿಸಿ ಬೆಳೆಸುವುದು ಯುವಕರ ಕರ್ತವ್ಯ: ಮಲ್ಲಿಕಾರ್ಜುನ ಮೇಟಿ



• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಪರಿಸರ ಉಳಿಸಿ ಬೆಳೆಸುವುದು ಇಂದಿನ ಯುವಕರ ಆದ್ಯ ಕರ್ತವ್ಯವಾಗಿದೆ. ಡಿಡಿಯು ಸಮೂಹ ಶಿಕ್ಷಣ ಸಂಸ್ಥೆಯ ಆಡಳಿತಾಧಿಕಾರಿಗಳಾದ ಮಲ್ಲಿಕಾರ್ಜುನ ಮೇಟಿ ಯಾದಗಿರಿ ನಗರದ ಡಿ ದೇವರಾಜ ಅರಸ್ ಹಿರಿಯ ಪ್ರಾಥಮಿಕ ಪ್ರೌಢಶಾಲೆ (ಕನ್ನಡ ಮಾಧ್ಯಮ) ಯಾದಗಿರಿಯಲ್ಲಿಂದು ವಿಶ್ವ ಪರಿಸರ ದಿನಾಚರಣೆಯ ಪ್ರಯುಕ್ತ ನಮ್ಮ ಶಾಲೆಯಲ್ಲಿ ಸಸಿ ನೆಟ್ಟು, ಸಸಿಗೆ ನೀರುಣಿಸುವುದರ ಮೂಲಕ ಆಚರಿಸಲಾಯಿತು. ಪರಿಸರ ಉಳಿಸಿ ಬೆಳೆಸುವುದು ಇಂದಿನ ಯುವಕರ ಆದ್ಯ ಕರ್ತವ್ಯವಾಗಿದೆ ಎಂದು ಡಿಡಿಯು ಸಮೂಹ ಶಿಕ್ಷಣ ಸಂಸ್ಥೆಯ ಆಡಳಿತಾಧಿಕಾರಿಗಳಾದ ಮಲ್ಲಿಕಾರ್ಜುನ ಮೇಟಿ ಮಾತನಾಡಿದರು. ಜೊತೆಗೆ ವಿದ್ಯಾರ್ಥಿಗಳಾದ ಪರಶುರಾಮ ಮತ್ತು ನಿಂಗಪ್ಪ ಮಾತನಾಡಿದರು. ಈ ಸಂದರ್ಭದಲ್ಲಿ ಡಿಡಿಯು ಕನ್ನಡ ಮಾಧ್ಯಮ ಶಾಲೆಯ ಮುಖ್ಯಶಿಕ್ಷಕರಾದ ವೆಂಕಟೇಶ ಪೂಜಾರಿ ಶಿಕ್ಷಕರಾದ ಕವಿತಾ ಪಾಟೀಲ್, ಹುಚ್ಚಪ್ಪ ದೇವರಗೋನಾಲ, ಪ್ರಭುಮೈಲಾರಿ, ನಸರೀನ್ ಬೇಗಂ, ಈರಮ್ಮ, ಎಚ್ ಪಿ ವಂದನಾ, ಶಕುಂತಲಾ, ಮಹಮ್ಮದ್ ಸೌದಾಗರ, ಹಾಗೂ ಮುದ್ದು ಮಕ್ಕಳು ಮತ್ತು ಯಲ್ಲಮ್ಮ ಇನ್ನಿತರರು ಉಪಸ್ಥಿತರಿದ್ದರು.

# ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣದ ಜತೆ ಉತ್ತಮ ಸಂಸ್ಕಾರ ಅಗತ್ಯ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ




ಪ್ರಸಕ್ತ ದಿನಗಳಲ್ಲಿ ಶಿಕ್ಷಕರು ಜಾಗೃತರಾಗಿ ಶಾಲೆಗಳಲ್ಲಿ ವಿದ್ಯಾರ್ಥಿಗಳಿಗೆ ಗುಣಮಟ್ಟದ ಬೋಧನೆ ಮಾಡುವದರ ಜೊತೆಗೆ ಅವರಲ್ಲಿ ಉತ್ತಮ ಸಂಸ್ಕಾರ ತಮೂಡಿಸಿದ್ದಲ್ಲಿ ಮಾತ್ರ ಬದಲಾವಣೆ ಕಾಣಲು ಸಾಧ್ಯ ಎಂದು ಶ್ರೀಶೈಲಂ 1008 ಜಗದ್ಗುರುಗಳಾದ ಡಾ. ಚನ್ನಸಿದ್ದರಾಮ ಪಂಡಿತರಾಧ್ಯ ಶಿವಾಚಾರ್ಯ ಮಹಾ ಸ್ವಾಮೀಜಿ ನುಡಿದರು.

ಜಿಲ್ಲೆಯ ವಡಗೇರಾ ತಾಲೂಕಿನ ಉಳ್ಳೆ ಸೂಗೂರು ಗ್ರಾಮದಲ್ಲಿರುವ ನೂತನವಾಗಿ ನಿರ್ಮಾಣ ಮಾಡಿರುವ ಜ್ಞಾನಾಮೃತ ಶಾಲೆಯ ನೂತನ ಕಟ್ಟಡವನ್ನು ಉದ್ಘಾಟಿಸಿ ಆಶೀರ್ವಚನ ನೀಡಿದರು.

ಪ್ರಸಕ್ತ ದಿನಗಳಲ್ಲಿ ಶಿಕ್ಷಣಕ್ಕೆ ಹೆಚ್ಚಿನ ಮೌಲ್ಯವಿದೆ ಗ್ರಾಮೀಣ ಭಾಗದ ಪೋಷಕರು ತಮ್ಮ ಬದುಕಿನಲ್ಲಿ ಎಷ್ಟೇ ಸಂಕಷ್ಟಗಳು ಎದುರಾದರೂ ತಮ್ಮ ಮಕ್ಕಳಿಗೆ ಗುಣಮಟ್ಟದ ಮೌಲ್ಯಯುತ ಶಿಕ್ಷಣ ಒದಗಿಸುವುದರ ಜೊತೆಗೆ ಹಾಗೂ ಮಾನವೀಯ ಮೌಲ್ಯಗಳನ್ನು ಹಾಗೂ ಬೆಳೆಸಿದಾಗ ಮಾತ್ರ ಅವರು ಭವಿಷ್ಯದಲ್ಲಿ ಒಳ್ಳೆಯ ನಾಗರಿಕರಾಗಿ ರೂಪಗೊಂಡು ಅವರವರ ಕ್ಷೇತ್ರಗಳಲ್ಲಿ ಸಾಧನೆ ಮಾಡುವ ಮೂಲಕ ಸಮಾಜಕ್ಕೆ ಹಾಗೂ ನಾಡಿಗೆ ತಮ್ಮದೇ ಆದ ಕೊಡುಗೆ ನೀಡುತ್ತಾರೆ ಎಂದು ಸಲಹೆ ನೀಡಿದರು.

ಶೈಕ್ಷಣಿಕವಾಗಿ ಗಿರಿ ಜಿಲ್ಲೆ ಸಾಧನೆ ಮಾಡಬೇಕಾದದ್ದು ಬಹಳಷ್ಟು ಇದೆ ಪ್ರಮಾಣ. ಈ ಭಾಗದಲ್ಲಿ ಸಾಕ್ಷರತೆ ಪ್ರಮಾಣ ಹೆಚ್ಚಾಗಬೇಕು, ಶಿಕ್ಷಣದಿಂದ ಮಾತ್ರ ನಾವು ಎಲ್ಲಾ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬಹುದು ಎಂದು ಹೇಳಿದರು.ಈ ಭಾಗದಲ್ಲಿ ವಿಶೇಷವಾಗಿ ಜನರು ಕೃಷಿಯನ್ನು ಅವಲಂಬಿಸಿ ಜೀವನ ಸಾಗಿಸುತ್ತಿದ್ದು,ಮಾನವ ಸಂಪನ್ಮೂಲಕ್ಕೆ ಯಾವುದೇ ಕೊರತೆ ಇಲ್ಲ ಪರಿಣಾಮರ ಪರಿಣಾಮವೇ ಈ ವರ್ಷ ನಡೆದ ದೇಶದ ಪ್ರಮುಖ ಐಎಎಸ್ ಪರೀಕ್ಷೆಯಲ್ಲಿ ಜಿಲ್ಲೆಯ ನಾಲ್ಕು ವಿದ್ಯಾರ್ಥಿಗಳು ಅತ್ಯುನ್ನತ ಶ್ರೇಣಿಯಲ್ಲಿ ಪಾಸ್ ಆಗುವ ಮೂಲಕ ಜಿಲ್ಲೆಗೆ ಕೀರ್ತಿ ತಂದಿದ್ದಾರೆ, ಅವರ ಸೇವೆ ಬರುವ ದಿನಗಳಲ್ಲಿ ಈ ಭಾಗಕ್ಕೆ ಸಿಗಲಿ ಎಂದರು.

ಇದು ಬದಲಾವಣೆಯ ಸಂಕೇತ ಗ್ರಾಮೀಣ ಭಾಗದಲ್ಲಿ ಕೂಡ ಪ್ರತಿಭಾವಂತ ವಿದ್ಯಾರ್ಥಿಗಳಿದ್ದಾರೆ ಶಿಕ್ಷಕರು ಪೋಷಕರು ಅವರ ಪ್ರತಿಭೆಯನ್ನು ಸೂಕ್ಷ್ಮವಾಗಿ ಗಮನಿಸಿ ಅವರ ಗುರಿಯತ್ತ ಪ್ರೋತ್ಸಾಹಿಸಬೇಕು ಜೊತೆಗೆ ಅವರಲ್ಲಿ ಸ್ಪರ್ಧಾತ್ಮಕ ಮನೋಭಾವನೆ ಬೆಳೆಸಬೇಕು ಎಂದು ಕಿವಿಮಾತು ಹೇಳಿದರುನಾಡಿನ ಪ್ರಗತಿಗೆ ಖಾಸಗಿ ಶಿಕ್ಷಣ ಸಂಸ್ಥೆಗಳ ಕೊಡುಗೆ ಅಪಾರವಾಗಿದೆ ಈ ಹಿಂದೆ ದೇಶದಲ್ಲಿ ಮಠಮಾನ್ಯಗಳು ಶಿಕ್ಷಣ ಮೂಲಕ ವಿದ್ಯಾರ್ಥಿಗಳಲ್ಲಿ ನೈತಿಕ ಶಿಕ್ಷಣ ನೀಡುವುದರ ಜೊತೆಗೆ ಅವರಲ್ಲಿ ಆತ್ಮವಿಶ್ವಾಸದ ಸ್ವಾವಲಂಬನೆ ಬದುಕು ಬದುಕು ರೂಪಿಸಿಕೊಳ್ಳುವತ ಗಮನ ನೀಡಲಾಗಿತ್ತು. ಆದಿಶೆಯಲ್ಲಿ ಈ ಭಾಗದಲ್ಲಿ ಶಿಕ್ಷಣ ಸಂಸ್ಥೆಯ ಆಡಳಿತ ಮಂಡಳಿಯವರು ಹಾಗೂ ಶಿಕ್ಷಕರ ತಂಡ ಪ್ರಾಮಾಣಿಕವಾಗಿ ಕೆಲಸ ನಿರ್ವಹಿಸಿ ವಿದ್ಯಾರ್ಥಿಗಳ ಪ್ರತಿಭೆಗಳನ್ನು ಗುರುತಿಸಿ ಅವರಲ್ಲಿ ಮೂಡಿಸಿ ಪ್ರೋತ್ಸಾಹವನ್ನು ನೀಡಬೇಕು ಅಷ್ಟೇ ಮಹತ್ವದ್ದಾಗಿದೆ. ಶಾಲೆಗೆ ಹೋಗಿ ಬರುವ ತಮ್ಮ ಮಕ್ಕಳ ಚಟುವಟಿಕೆಗಳ, ಹವ್ಯಾಸಗಳ ಬಗ್ಗೆ ಬಗ್ಗೆ ಗಮನವಿಟ್ಟು ಗಮನವಿರುವ ಮೂಲಕ ಸಕಾಲಕ್ಕೆ ಸಲಹೆ ಸೂಚನೆ ನೀಡಬೇಕು ಎಂದು ತಿಳಿಸಿದರು.

ಅಲ್ಲದೆ ಆಸಕ್ತಿಯಿಂದ ಕೆಲಸ ಮಾಡುವ ಆಸಕ್ತಿಯಿಂದ ಕೆಲಸ ಮಾಡುವ ಶಿಕ್ಷಕರ ತಂಡ ಕಾರ್ಯನಿರ್ವಹಿಸಬೇಕು ಇದು ಚಿಕ್ಕ ಮಕ್ಕಳ ಪರಿಣಾಮನಿಸಿನ ಮೇಲೆ ಸಕಾರಾತ್ಮಕ ಪರಿಣಾಮ ಬೀರಿ ಅವರಲ್ಲಿ ಶಿಸ್ತು ಜೊತೆಗೆ ಕ್ರೀಡಾಸಕ್ತಿ ಇನ್ನಿತರ ಹವ್ಯಾಸಗಳನ್ನು ಮೈಗೂಡಿಸಿಕೊಂಡು ಅವರು ದೈಹಿಕ ಮಾನಸಿಕ ಸದೃಢತೆ ಕಾಪಾಡಿಕೊಂಡು ಪರಿಶ್ರಮದಿಂದ ಅಧ್ಯಯನ ಮಾಡಿ ಗುರಿ ತಲುಪಿ ಇತರ ವಿದ್ಯಾರ್ಥಿಗಳಿಗೆ ಪ್ರೇರಣೆಯಾಗುತ್ತಾರೆ ಎಂದು ಅಭಿಪ್ರಾಯ ಪಟ್ಟರು,

ಜಗತ್ತಿನಲ್ಲಿ ಎಲ್ಲಾ ಸಂಪತ್ತುಗಳಲ್ಲಿ ವಿದ್ಯಾ ಸಂಪತ್ತು ಶ್ರೇಷ್ಠವಾದದ್ದು, ಕಾರಣ ಅದು ಎಲ್ಲಾ ದಾನಗಳಲ್ಲಿಯೂ ಕೂಡ ವಿದ್ಯಾದಾನ ಔತನ್ಯ ಸ್ಥಾನ ಪಡೆದಿದೆ, ನಾವೂ ಆಧ್ಯಾತ್ಮೀಕ ಚಟುವಟಿಕೆಗಳಿಗೆ ಹಾಗೂ ಕೌಟುಂಬಿಕ ಕಾರ್ಯಗಳಿಗೆ ನೀಡುವಷ್ಟು ಗೌರವ ಶಾಲೆಗಳಿಗೆ ನೀಡಬೇಕಾಗಿರುವುದು ಅಗತ್ಯವಾಗಿದೆ, ಇಂದಿನ ಮಕ್ಕಳೇ ಭವಿಷ್ಯದಲ್ಲಿ ಒಳ್ಳೇಯ ನಾಗರಿಕರಾಗಿ ದೇಶದ ಐಕ್ಯತೆಗೆ ಹಾಗೂ ಸಾಮರಸ್ಯಕ್ಕೆ ಶಕ್ತಿ ತುಂಬುತ್ತಾರೆ,

ಇಂದಿನ ದಿನಗಳಲ್ಲಿ ಖಾಸಗಿ ಶಿಕ್ಷಣ ಸಂಸ್ಥೆಯ ಶಾಲೆಗಳಲ್ಲಿ ಎಲ್ಲಾ ಪೋಷಕರಿಗೆ ಒಳ್ಳೆಯ ಶಿಕ್ಷಣ ಕೊಡಿಸಬೇಕೆಂಬ ಉದ್ದೇಶವಿರುತ್ತದೆ ಶಾಲಾ ಆಡಳಿತ ಮಂಡಳಿಯವರು ಅಲ್ಲಿನ ಜನರ ಜ ಜೀವನ ಸ್ಥಿತಿಗತಿ ಅರಿತು ಶಾಲಾ ಆಡಳಿತ ಮಂಡಳಿಯವರು ಎಲ್ಲಾ ವರ್ಗದ ಜನರಿಗೆ ಅನುಕೂಲವಾಗುವ ದೃಷ್ಟಿಯಿಂದ ವಿದ್ಯಾರ್ಥಿಗಳ ಶುಲ್ಕದಲ್ಲಿ ವಿನಾಯಿತಿ ತೋರಬೇಕು ಅದರಿಂದ ಸಿಗುವ ಆತ್ಮ ತೃಪ್ತಿ ಬೇರೆ ಯಾವುದರಿಂದ ನಿಮಗೆ ಸಿಗುವುದಿಲ್ಲ ಎಂದು ಎಚ್ಚರಿಕೆ ನೀಡಿದರು.

ಗ್ರಾಮೀಣ ಭಾಗದಲ್ಲಿ ಒಂದು ಖಾಸಗಿ ಶಿಕ್ಷಣ ನಡೆಸುವ ಕಾರ್ಯ ಒಂದು ಸವಾಲಿನ ಕೆಲಸವಾಗಿದ್ದು ಅದನ್ನು ಗೌರವಯುತವಾಗಿ ಸಮಾಜಕ್ಕೆ ನೀಡುವ ಸೇವೆಯೆಂದು ಸ್ವೀಕರಿಸಿರುವ ಪಂಪನಗೌಡ ಅವರ ತಂಡ ಯಶಸ್ವಿಯಾಗಲಿ ಎಂದು ಶುಭ ಹಾರೈಸಿದರು.

ಬಿಜೆಪಿ ಯುವ ಮುಖಂಡ ಮಹೇಶರಡ್ಡಿ ಮುದ್ನಾಳ ಮಾತನಾಡಿ, ಶಿಕ್ಷಣದಿಂದ ಮಾತ್ರ ಸಮಾಜದಲ್ಲಿ ಬೇರುರಿರುವ ಮೂಢನಂಬಿಕೆಗಳು ತೊಲಗಿಸಲು ಸಾಧ್ಯ, ಹಳ್ಳಿಯಲ್ಲಿಯೇ ಶಾಲೆ ಆರಂಭ ಮಾಡಿರುವುದರಿಂದ ಸುತ್ತ–ಮುತ್ತಲಿನ ಗ್ರಾಮಗಳ ವಿದ್ಯಾರ್ಥಿಗಳಿಗೆ ಶಿಕ್ಷಣ ಪಡೆಯಲು ಅನುಕೂಲವಾಗುವ ಜೊತೆಗೆ ಉತ್ತಮ ಭದ್ರತೆ ಒದಗಿಸಿದಂತಾಗುತ್ತದೆ, ಸ್ಪರ್ಧಾತ್ಮಕ ಯುಗದಲ್ಲಿ ವಿದ್ಯಾಧಾನ ಮಾಡುವ ಅವಕಾಶ ಭಗವಂತ ಕೆಲವರಿಗೆ ನೀಡುತ್ತಾನೆ, ಇದನ್ನು ಶಿಕ್ಷಣ ಸಂಸ್ಥೆಯವರು ಪರಿಣಾಮಕಾರಿಯಾಗಿ ಕೆಲಸ ಮಾಡುವ ಮೂಲಕ ಸಧೃಢ ಸಮಾಜ ನಿರ್ಮಾಣಕ್ಕೆ ಮಹತ್ವದ ಕೊಡುಗೆ ನೀಡಬೇಕೆಂದು ಹೇಳಿದರು.

ಇಂದು ಮಹಿಳೆಯರು ಎಲ್ಲಾ ಕ್ಷೇತ್ರಗಳಲ್ಲಿ ಪುರುಷ ಸಮಾನರಾಗಿ ಅಭಿವೃದ್ಧಿ ಸಾಧಿಸಿದ್ದಾರೆ, ಗ್ರಾಮೀಣ ಜನತೆ ತಮ್ಮ ಹೆಣ್ಣು ಮಕ್ಕಳಿಗೆ ತಪ್ಪದೇ ಶಿಕ್ಷಣ ನೀಡಬೇಕು, ಅಲ್ಲದೇ ಅವರು ವಯಸ್ಕರಾಗುವವರೆಗೆ ಯಾವುದೇ ಕಾರಣಕ್ಕೂ ಬಾಲ್ಯ ವಿವಾಹ ಮಾಡಬೇಡಿ, ಅವರು ವಿದ್ಯೆಯಿಂದ ಮಾತ್ರ ಸ್ವಾವಲಂಬನೆ ಬದುಕು ಕಟ್ಟಿಕೊಳ್ಳುತ್ತಾರೆ ಎಂದರು.

ಶಹಾಪೂರ ಹಿರೇಮಠದ ಸುಗೂರೇಶ್ವರ ಸ್ವಾಮಿಜಿ ಯಾವುದೇ ಭಾಗದಲ್ಲಾಗಲಿ ಒಳ್ಳೆಯ ಶಿಕ್ಷಣ ಸಂಸ್ಥೆಯಾಗಬೇಕಾದರೆ ಮೊದಲು ಶುದ್ಧವಾದ ಪರಿಸರ ನಿರ್ಮಾಣವಾಗಬೇಕು, ಇಂದೂ ನಮ್ಮಿಂದ ಸಸಿಗಳನ್ನು ನೆಟ್ಟರೆ ಸಾಲದು, ಬರುವ ದಿನಗಳಲ್ಲಿ ಆರಂಭಗೊಂಡ ಶಾಲೆಯ ಸುತ್ತಮುತ್ತ ಒಳ್ಳೆಯ ಗಿಡ ಮರಗಳನ್ನು ಬೆಳೆಸಬೇಕು ಪರಿ ಸರಿದ ಮಹತ್ವ ಕುರಿತು ಇಂದು ಆಚರಿಸಲಾಗುತ್ತಿರುವ ವಿಶ್ವ ಪರಿಸರ ದಿನಾಚರಣೆಯ ಸಂದೇಶವನ್ನು ತಲುಪಿಸಿದಂತಾಗುತ್ತದೆ ಎಂದು ಹೇಳಿದರು.

ವೇದಿಕೆ ಮೇಲೆ ನಿಲಗಲ್‌ದ ರೇಣುಕಾ ಶಾಂತಮಲ್ಲ ಶಿವಾಚಾರ್ಯರು, ದೇವತ್ಕಲ್‌ನ ಸಾಬಣ್ಣ ಪೂಜಾರಿ, ಮುಖಂಡರಾದ ಶ್ರೀನಿವಾಸರಡ್ಡಿ ಪಾಟೀಲ್ ಚನ್ನೂರ, ಸಿದ್ದಣ್ಣಗೌಡ ಕಾಡಂನೋರ, ಬಸ್ಸುಗೌಡ ಬಿಳ್ಹಾರ, ದಂಡಪ್ಪಗೌಡ ಉಳ್ಳೆಸೂಗೂರ, ವಿಶ್ವನಾಥರಡ್ಡಿ ನಾಯ್ಕಲ್, ರುದ್ರಗೌಡ ದೇವರಗುಡ್ಡ, ಬಸವಂತರಡ್ಡಿ ಮಲ್ಹಾರ, ಸದಾಶಿವಪ್ಪಗೌಡ ರೊಟ್ನಡಗಿ, ಬಸರಾಜಪ್ಪಗೌಡ ದಳಪತಿ ಮುಸ್ಟೂರ, ಡಾ. ರಾಹುಲ್ ನಾಯ್ಕೋಡಿ, ಡಾ. ಶಿವಪುತ್ರರಡ್ಡಿ, ಶಿವುಗೌಡ ಕೊಂಗಂಡಿ, ಮಾಣಿಕರಡ್ಡಿ ಕುರಕುಂದಿ, ಸಿದ್ದಲಿಂಗರಡ್ಡಿ ಕೌಳೂರ, ಶಿಕ್ಷಣ ಸಂಸ್ಥೆಯ ಗೌರವಾಧ್ಯಕ್ಷರಾದ ಪಂಪಣ್ಣಗೌಡ ಶಾಂತವೀರ ಉಳ್ಳೆಸೂಗೂರ, ಬಸರಾಜಪ್ಪಗೌಡ ಗುರುಸಣಗಿ, ಪ್ರಮೋದ ಕುಲಕರ್ಣಿ, ಮಹಿಪಾಲರಡ್ಡಿ ಸೇರಿದಂತೆ ಹಲವರು ಉಪಸ್ಥಿತರಿದ್ದರು,

ನಿವೃತ್ತ ಬ್ಯಾಂಕ್ ಅಧಿಕಾರಿ ಬಾಲಪ್ಪ ಆರಂಭದಲ್ಲಿ ಸಂವಿದಾನ ಪಿಠೀಕೆ ವಾಚಿಸಿದರು.

ಶಂಕರ ಸೋನಾರ್ ನಿರೂಪಿಸಿ, ವಂದಿಸಿದರು.

# ಗ್ರಾಮೀಣ ಪ್ರದೇಶದಲ್ಲಿ ಕುಡಿಯುವ ನೀರಿನ ಸಮಸ್ಯೆಯಾಗದಂತೆ ನಿಗಾವಹಿಸಿ: ಜೈನ್



• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಜಿಲ್ಲೆಯ ಗ್ರಾಮೀಣ ಪ್ರದೇಶದ ಜನರಿಗೆ ಕುಡಿಯುವ ನೀರಿನ ಕೊರತೆಯಾಗದಂತೆ ನಿಗಾ ವಹಿಸುವ ಜೊತೆಗೆ ಪ್ರತಿ ಗ್ರಾಮಕ್ಕೆ ಸಂಬಂಧಿಸಿದ ಅಧಿಕಾರಿಗಳು ಕ್ಷೇತ್ರ ಭೇಟಿ ನೀಡಿ ನೀರಿನ ಸಮಸ್ಯೆಗಳ ನಿವಾರಣೆಗೆ ವಿಶೇಷ ನಿಗಾವಹಿಸುವಂತೆ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಕಾರ್ಯದರ್ಶಿಗಳು ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ಶ್ರೀ ಮನೋಜ್ ಜೈನ್ ಅವರು ಸೂಚನೆ ನೀಡಿದರು. ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇಂದು ವಿವಿಧ ಇಲಾಖೆಗಳ ಮೇ ಮಾಹೆವರಗಿನ ಪ್ರಗತಿ ಪರಿಶೀಲನಾ ಸಭೆ ನಡೆಸಿ ಅವರು ಮಾತನಾಡಿದರು. ಶುದ್ಧ ನೀರು ಪಡೆಯುವುದು ಜನರ ಹಕ್ಕು. ನೂರು ಜನರಿದ್ದರೂ ಆ ಗ್ರಾಮದಲ್ಲಿ ನೀರಿನ ಸಮಸ್ಯೆಯಾದರೆ ಸಂಬಂಧಿಸಿದ ಅಧಿಕಾರಿಗಳು ಸಕಾಲಕ್ಕೆ ಸ್ಪಂದಿಸಬೇಕು.ಪ್ರತಿ ವಾರ ಸಮಸ್ಯೆ ಇರುವ ಕಡೆ ಭೇಟಿನೀಡಬೇಕು.ವಿಶೇಷವಾಗಿ ಗ್ರಾ.ಪಂ ಕೇಂದ್ರಕ್ಕೆ ಕ್ಷೇತ್ರ ಭೇಟಿ ನೀಡಿ, ಸಮಸ್ಯೆ ಪರಿಹರಿಸಲು ಪ್ರಯತ್ನಿಸಬೇಕು. ಇ.ಓ ಗಳು ಪ್ರತಿ ವಾರ ಸಾರ್ವಜನಿಕ ಕುಂದುಕೊರತೆ ಸಭೆ ನಡೆಸಬೇಕು. ನೋಡಲ್ ಅಧಿಕಾರಿಗಳು ಕೂಡ ಪ್ರತಿ ಗ್ರಾಮ ಹಾಗೂ ತಾಲೂಕು ಪಂಚಾಯಿತಿವಾರು

ನೀರಿನ ಸಮಸ್ಯೆ ನಿವಾರಣೆ ಕುರಿತು ನಿಗಾ ವಹಿಸುವಂತೆ ತಿಳಿಸಿದ ಅವರು,ತಹಸೀಲ್ದಾರರು ಹಾಗೂ ಸಂಬಂಧಿಸಿದ ಅಧಿಕಾರಿಗಳು ವಿಶೇಷ ಗಮನ ನೀಡುವಂತೆಯೂ ಸೂಚನೆ ನೀಡಿದರು. ಜಿಲ್ಲೆಯ ಯಾದಗಿರಿ,ಗುರುಮಠಕಲ್, ವಡಗೇರಾ ತಾಲೂಕುಗಳ ಕುಡಿಯುವ ನೀರಿನ ಸಮಸ್ಯಾತ್ಮಕ ಗ್ರಾಮಗಳಲ್ಲಿಅವಶ್ಯಕಗಮನನೀಡಬೇಕು.ಗುರುಮಠಕಲ್ 36 ಗ್ರಾಮಗಳಿಗೆ ನೀರು ಪೂರೈಸುವ ಯೋಜನೆ ಸಮರ್ಪಕವಾಗಿ ನಡೆಯುವಂತೆ ನೋಡಿಕೊಳ್ಳಬೇಕು. ನಗರ ಸ್ಥಳಿಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ನೀರಿನ ಸಮರ್ಪಕ ನಿರ್ವಹಣೆ ಮಾಡಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು. ಜಿಲ್ಲೆಯಲ್ಲಿ ಭತ್ತದ ಬದಲಾಗಿ ಪರ್ಯಾಯ ಬೆಳೆಗಳ ಬಗ್ಗೆ ರೈತರಲ್ಲಿ ಸೂಕ್ತ ಜಾಗೃತಿಯನ್ನು ಮೂಡಿಸಬೇಕು. ಬೀಜ, ರಸಗೊಬ್ಬರಗಳ ಲಭ್ಯತೆ ಅನುಸಾರ ಸಣ್ಣ ಅತಿ ಸಣ್ಣ ರೈತರಿಗೂ ವಿಶೇಷ ಗಮನ ನೀಡಬೇಕು. ಬೀಜ ,ರಸಗೊಬ್ಬರ ಸಮಾನ ಹಂಚಿಕೆ ಮಾಡುವಂತೆ ನೋಡಿಕೊಳ್ಳಬೇಕು. ಕಡಿಮೆ ನೀರು, ಕಡಿಮೆ ರಸಗೊಬ್ಬರದಡಿ ಹೆಚ್ಚು ಇಳುವರಿ ತರುವ ಬೆಳೆಗಳನ್ನು ಬೆಳೆಸಲು ರೈತರಿಗೆ ತಿಳಿಹೇಳಿ ಬೇಕು ಎಂದು ಕೃಷಿ ಹಾಗೂ ತೋಟಗಾರಿಕೆ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು. ನಗರದ ಸ್ವಚ್ಛತೆ ಕುರಿತಂತೆ ನಗರಸಭೆ ಆಯುಕ್ತರು ಹಾಗೂ ಸ್ಯಾನಿಟರಿ ಇನ್ಸ್‌ಪೆಕ್ಟರ್ ಗಳು ವಾರ್ಡ್ ವಾರು ಕ್ಷೇತ್ರ ಭೇಟಿ ನೀಡಿ ಸೂಕ್ತ ಕ್ರಮ ಕೈಗೊಳ್ಳಬೇಕು.ಗಾಂಧಿ ಚೌಕ್,ಗಂಜ್, ಹನುಮಾನ್ ಚೌಕ್,ಲುಂಬಿನಿ ಉದ್ಯಾನವನ,ಹೊಸಳ್ಳಿ ಕ್ರಾಸ್, ರೈಲ್ವೆ ಸ್ಟೇಷನ್ ವ್ಯಾಪ್ತಿಯಲ್ಲಿನ ರಸ್ತೆಗಳ ಸುಧಾರಣೆಗೆ ಗಮನ ನೀಡಬೇಕು.ಈ ಕುರಿತು ಪ್ರಸ್ತಾವನೆ ಸಹ ಸಲ್ಲಿಸಬೇಕೆಂದ ಅವರು ಪಿ.ಆರ್.ಇ .ಡಿ, ಕರ್ನಾಟಕ ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿ ನಿಗಮ, ಲೋಕೋಪಯೋಗಿ,ಗ್ರಾಮೀಣ ಕುಡಿಯುವ ನೀರು ಸರಬರಾಜು ಇಲಾಖೆ,

ನಿರ್ಮಿತಿ ಕೇಂದ್ರದ ವ್ಯಾಪ್ತಿಯಲ್ಲಿ ಬರುವ ಕಾಮಗಾರಿಗಳನ್ನು ಎಚ್ಚರಿಕೆಯಿಂದ ನಿಭಾಯಿಸುವಂತೆ ಅವರು ಸೂಚಿಸಿದರು. ಕೆ.ಆರ್.ಐ.ಡಿ. ಎಲ್ ಸಹಾಯಕ ನಿರ್ದೇಶಕರು ಸ್ವಚ್ಛ ಭಾರತ ಮಿಷನ್ ಯೋಜನೆಯಡಿ ಕಲ್ಯಾಣ ಕರ್ನಾಟಕ ಭಾಗದ 50

ಶೌಚಾಲಯಗಳ ನಿರ್ಮಾಣ ಹಾಗೂ ಇತರೆ ಕಾಮಗಾರಿ ನಿರ್ಮಾಣದಲ್ಲಿ ನಿರ್ಲಕ್ಷ್ಯ ತೋರಿದ ಹಿನ್ನೆಲೆಯಲ್ಲಿ ಅವರನ್ನು ಅಮಾನತ್ತುಗೊಳಿಸಿ ಆದೇಶ ಸಿದ್ಧಪಡಿಸಲು ಸೂಚಿಸಿದ ಅವರು, ಸಭೆಗೆ ಗೈರು ಹಾಜರಾದ ಪ್ರಾದೇಶಿಕ ಸಾರಿಗೆ ಅಧಿಕಾರಿಗಳಿಗೆ ಕಾರಣ ಕೇಳಿ ನೋಟಿಸ್ ಜಾರಿಗೊಳಿಸಲು ಸೂಚಿಸಿದರು.ಅದರಂತೆ ಎಸ್ ಎಸ್ ಎಲ್ ಸಿ ಫಲಿತಾಂಶ ಸುಧಾರಣೆ ಹಾಗೂ ಶಾಲಾ ಶಿಕ್ಷಣ ವ್ಯವಸ್ಥೆ ಸುಧಾರಣೆಗೆ ಸೂಕ್ತ ಕ್ರಮ ಕೈಗೊಂಡ ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕರಿಗೆ ಪ್ರಶಂಸಣಾ ಪ್ರಮಾಣ ಪತ್ರ ವಿತರಿಸಲಾಗುವುದು ಎಂದು ಹೇಳದರು. ಜಿಲ್ಲಾಧಿಕಾರಿ ರಾಹುಲ್ ತುಕಾರಾಮ ಪಾಂಡ್ವೆ ಅವರು, ಸಭೆಯಲ್ಲಿ ಮಾನ್ಯ ಕಾರ್ಯದರ್ಶಿಗಳು ಸೂಚಿಸಿದಂತೆ ಕಾಲ ಕಾಲಕ್ಕೆ ಪ್ರಗತಿ ಪರಿಶೀಲನೆ ನಡೆಸಲಾಗುವುದು. ಮುಂದಿನ ಸಭೆಯಲ್ಲಿ ಸೂಕ್ತ ಕ್ರಮಗಳ ವರದಿಯೊಂದಿಗೆ ಅಧಿಕಾರಿಗಳು ಆಗಮಿಸುವಂತೆ ತಿಳಿಸಿದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಲವೀಶ್ ಒರಡಿಯಾ ಅವರು ಜಿಲ್ಲೆಯಲ್ಲಿ 471 ಆರ್ ಪ್ಲಾಂಟ್ಗಳ ಪೈಕಿ 332 ಕಾರ್ಯನಿರ್ವಹಿಸುತ್ತಿವೆ. ಬಾಕಿ ಇರುವ ಆರ್ ಓ ಪ್ಲಾಂಟ್ಗಳ ದುರಸ್ತಿಗೆ ಅನುದಾನ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ ಹೇಳಿದರು. ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಪೃಥ್ವಿಕ್ ಶಂಕರ್ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ನೂತನ ಜಿಲ್ಲಾಧ್ಯಕ್ಷ ರಫೀಕ್ ಪಟೇಲ್‌ರಿಗೆ ಅಭಿನಂದನೆಗಳ ಮಹಾಪೂರ ನ್ಯಾಯವಾದಿಗಳಿಂದ ಸನ್ಮಾನ




• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಕರ್ನಾಟಕ ಕಾರ್ಯನಿರತ ಪತ್ರಕರ್ತರ, ಸಂಪಾದಕರು ಹಾಗೂ ವರದಿಗಾರರ ಸಂಘದ ಯಾದಗಿರಿ ಜಿಲ್ಲಾ ಘಟಕದ ನೂತನ ಜಿಲ್ಲಾಧ್ಯಕ್ಷರಾಗಿ ಆಯ್ಕೆಯಾದ ಮೊಹಮ್ಮದ್ ರಫೀಕ್ ಪಟೇಲ್ ಅವರನ್ನು ನ್ಯಾಯವಾದಿಗಳಾದ ಮಲ್ಲಿಕಾರ್ಜುನ್ ಮನಗನಾಳ ಹಾಗೂ ಕಲೀಮ್ ಸಾಬ್ ಅವರು ಸನ್ಮಾನಿಸಿ ಅಭಿನಂದಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಪತ್ರಕರ್ತರು ಸಮಾಜದ ಕಣ್ಣು ಮತ್ತು ಕಿವಿಗಳಾಗಿ ಕಾರ್ಯನಿರ್ವಹಿಸುತ್ತಿದ್ದು, ಪತ್ರಕರ್ತರ ಹಿತಾಸಕ್ತಿ ಹಾಗೂ ಮಾಧ್ಯಮ ಕ್ಷೇತ್ರದ ಅಭಿವೃದ್ಧಿಗೆ ರಫೀಕ್ ಪಟೇಲ್ ಅವರ ನೇತೃತ್ವದಲ್ಲಿ ಸಂಘ ಇನ್ನಷ್ಟು ಬಲಿಷ್ಠವಾಗಲಿ ಎಂದು ಶುಭ ಹಾರೈಸಿದರು. ಸನ್ಮಾನ ಸ್ವೀಕರಿಸಿದ ಮೊಹಮ್ಮದ್ ರಫೀಕ್ ಪಟೇಲ್ ಅವರು, ಸಂಘದ ಮೇಲಿಟ್ಟಿರುವ ವಿಶ್ವಾಸಕ್ಕೆ ಕೃತಜ್ಞತೆ ಸಲ್ಲಿಸಿ, ಜಿಲ್ಲೆಯ ಪತ್ರಕರ್ತರ ಹಕ್ಕುಗಳು, ಸಮಸ್ಯೆಗಳ ಪರಿಹಾರ ಹಾಗೂ ಸಂಘಟನೆಯ ಬಲವರ್ಧನೆಗೆ ಆದ್ಯತೆ ನೀಡುವುದಾಗಿ ತಿಳಿಸಿದರು. ಈ ಸಂದರ್ಭದಲ್ಲಿ ಸಂಘದ ಸಂಘದ ಸದಸ್ಯರಾದ ಚಾಂದ್ ಪಾಷಾ ಸೇರಿದಂತೆ ಪದಾಧಿಕಾರಿಗಳು, ಪತ್ರಕರ್ತರು ಹಾಗೂ ಗಣ್ಯರು ಉಪಸ್ಥಿತರಿದ್ದರು.

# ಶುದ್ಧ ಪರಿಸರಕ್ಕಾಗಿ ಸಸಿ ನೆಡಿ : ಬೋಗಾರ್

• ಮಲ್ಲಮ್ಮ ನುಡಿ ವಾರ್ತೆಮುದಗಲ್



ಒಂದು ಮರ ಸಾಕಷ್ಟು ಇಂಗಾಲವನ್ನು ಹೀರಿಕೊಂಡು–ಮನುಷ್ಯನಿಗೆ ಸಾಕಾಗುವಷ್ಟು ಆಮ್ಲಜನ ಪಡೆಯಲು ಪ್ರತಿಯೊಬ್ಬರು ಸಸಿ ನೆಡಲು ಮುಂದಾಗಬೇಕು ಎಂದು ಪುರಸಭೆ ಮುಖ್ಯಾಧಿಕಾರಿ ಪ್ರವೀಣ್ ಕುಮಾರ ಭೋಗಾರ ಶುಕ್ರವಾರ ಅಭಿಪ್ರಾಯಪಟ್ಟರು.

ಪಟ್ಟಣದ ಬಾಲಕಿಯರ ಸರಕಾರಿ ಪ್ರೌಢ ಶಾಲೆಯಲ್ಲಿ ನಿಸರ್ಗ ಇಕೋಕ್ಲಬ್ ಹಾಗೂ ಪುರಸಭೆ ಕಾರ್ಯಾಲಯ ಇವರ ಸಹಯೋಗದಲ್ಲಿ ಪರಿಸರ ದಿನಾಚರಣೆ ಆಯೋಜಿಸಿದ್ದ ಕಾರ್ಯಕ್ರಮ ಉದ್ಘಾಟನೆ ಮಾಡಿ ಮಾತನಾಡಿದರು. ಶುದ್ಧ

ಪರಿಸರ ಸಂರಕ್ಷಣೆ ನಮ್ಮೆಲ್ಲರ ಜವಾಬ್ದಾರಿಯಾಗಿದೆ. ಪರಿಸರ ನಾಶದಿದಂದ ವಾತವರಣದಲ್ಲಿ ಅನೇಕ ಬದಲಾವಣೆಯಾಗಿ ಜೀವಿ ಸಂಕುಲಗಳ ಮೇಲೆ ಕೆಟ್ಟ ಪರಿಣಾಮ ಉಂಟಾಗುತ್ತದೆ. ಕಾರಣ ಎಲ್ಲಾ ಮಕ್ಕಳು ಹೆಚ್ಚು ಹೆಚ್ಚು ಸಸಿಗಳನ್ನು ನೆಡಬೇಕು. ಇದರಿಂದ ಶುದ್ದ ಗಾಳಿ, ನೀರು ಪಡೆಯಬಹುದು ಹಾಗೂ ಎಲ್ಲೆಂದರಲ್ಲಿ ಕಸ ಚೆಲ್ಲಬಾರದು. ಕಸ ವಿಂಗಡಣೆ ಮಾಡಬೇಕು. ಪ್ಲಾಸ್ಟಿಕ ಬಳಕೆ ಕಡಿಮೆ ಮಾಡಲು ಸೂಚಿಸಿದರು. ನಂತರ ಶಾಲಾ ಆವರಣದಲ್ಲಿ ಸಸಿ ನೆಡಲಾಯಿತು.

ಕಾರ್ಯಕ್ರಮದಲ್ಲಿ ವಿಜ್ಞಾನ ಶಿಕ್ಷಕ ಮಲ್ಲಿಕಾರ್ಜುನ ಗೌಡೂರ, ಪ್ರಭುಲಿಂಗ ಗದ್ದಿ, ಅಮರೇಗೌಡ ಅಗಸಿಮುಂದಿನ ಅವರು ಮಾತನಾಡಿದರು.

ಶಾಲೆಯ ಮುಖ್ಯಗುರುಗಳು ಬಾಲಚಂದ್ರದಾಸರ, ಪುರಸಭೆ ಆರೋಗ್ಯ ಅಧಿಕಾರಿ ಆರೀಫಾ ಉನ್ನಿಸ್ಸಾ, ಸಾಹ ಶಿಕ್ಷಕರಾದ ಮಲ್ಲಪ್ಪ ಪಾಟೀಲ್, ಸುಜಿತ ಆನಂದ, ಶೋಭಾ ಇಂಗಳೇಶ್ವರ, ಶಿಕ್ಷಕಿಯರು ಶಶಿಕಲಾ, ನೂರಜಹಾನ ಸೇರಿದಂತೆ ಶಾಲಾ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಹಸಿರು ಪರಿಸರ ರಕ್ಷಣೆಗೆ ಶ್ರೀಕುಮಾರ್ ಕರೆ



• **ಮಲ್ಲಮ್ಮ ನುಡಿ ವಾರ್ತೆ ಕಂಪ್ಲಿ**

ಬಳ್ಳಾರಿ ಜಿಲ್ಲೆ ಕಂಪ್ಲಿ ನಗರದ ತಾಲೂಕು ಪಂಚಾಯತಿ ಆವರಣದಲ್ಲಿ ಪರಿಸರವನ್ನು ಉಳಿಸಿ, ಬೆಳೆಸಿ ಹಾಗೂ ಅಭಿವೃದ್ಧಿಪಡಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ ಎಂದು ತಾಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳಾದ ಇ ಓ ಆರ್ ಕೆ ಶ್ರೀಕುಮಾರ್ ಅವರು ಕರೆ ನೀಡಿದರು.

ಪ್ರಸ್ತುತ ದಿನಗಳಲ್ಲಿ ಪರಿಸರ ಮಾಲಿನ್ಯ ತೀವ್ರಗೊಳ್ಳುತ್ತಿರುವುದರ ಬಗ್ಗೆ ಕಳವಳ ವ್ಯಕ್ತಪಡಿಸಿದ ಅವರು, ಪ್ರತಿಯೊಬ್ಬ ನಾಗರಿಕನೂ ಕಡ್ಡಾಯವಾಗಿ ಪರಿಸರ ಸಂರಕ್ಷಣೆಗೆ ಕೈಜೋಡಿಸಬೇಕಾದ ಅನಿವಾರ್ಯತೆ ಎದುರಾಗಿದೆ ಎಂದು ಅಭಿಪ್ರಾಯಪಟ್ಟರು.

ಗಿಡ–ಮರಗಳನ್ನು ಬೆಳೆಸುವ ಮೂಲಕ ಪ್ರಕೃತಿಯನ್ನು ಸಮತೋಲನದಲ್ಲಿಡಬೇಕು. ಪ್ಲಾಸ್ಟಿಕ್ ಹಾಗೂ ಇತರ ತ್ಯಾಜ್ಯಗಳ ಬಳಕೆಯನ್ನು ಕಡಿಮೆ ಮಾಡಿ, ಅವುಗಳನ್ನು ವೈಜ್ಞಾನಿಕ ಹಾಗೂ ಸೂಕ್ತ ರೀತಿಯಲ್ಲಿ ವಿಲೇವಾರಿ ಮಾಡುವುದು ಮುಖ್ಯವಾಗಿದೆ. ನೈಸರ್ಗಿಕ ಇಂಧನ ಸಂಪನ್ಮೂಲಗಳನ್ನು ಮಿತವಾಗಿ ಬಳಸಿ, ಭವಿಷ್ಯದ ಪೀಳಿಗೆಗೆ ಉಳಿಸಬೇಕಾದ ಜವಾಬ್ದಾರಿ ನಮ್ಮ ಮೇಲಿದೆ ಎಂದು ತಿಳಿಸಿದರು.

ಮುಂದಿನ ಪೀಳಿಗೆಗೆ ಉತ್ತಮ ಮತ್ತು ಆರೋಗ್ಯಕರ ಪರಿಸರವನ್ನು ಕೊಡುಗೆಯಾಗಿ ನೀಡುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದ್ದು, ಸಾರ್ವಜನಿಕರು ಪರಿಸರ ಜಾಗೃತಿ ಮೂಡಿಸುವಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ತಾಲೂಕು ಪಂಚಾಯತಿ ಸಹಾಯಕ ನಿರ್ದೇಶಕರಾದ ಎಸ್ ಮಲ್ಲನಗೌಡ ಸುರೇಶ್ ಲೆಕ್ಕಶಾಸ್ತ್ರ ಸುರೇಶ್ ಹಾಗೂ ತಾಲೂಕು ಪಂಚಾಯತಿ ಎಲ್ಲಾ ಸಿಬ್ಬಂದಿಗಳು ವಿಶ್ವ ಪರಿಸರ ದಿನಾಚರಣೆಯಲ್ಲಿ ಪಾಲ್ಗೊಂಡಿದ್ದರು

# ಸಾಮೂಹಿಕ ಗಿಡ ನಾಟಿ ಮಾಡಿದಾಗ ಉತ್ತಮ ಪರಿಸರ ನಿರ್ಮಾಣ ಸಾಧ್ಯ



• **ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ**

ಪಶ್ಚಿಮ ತಾಲೂಕು ಕಾತರಕಿ ಗುಡ್ಲಾನೂರು ವಲಯದ ಸರ್ಕಾರಿ ಪ್ರೌಢ ಶಾಲೆಯಲ್ಲಿ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಪರಿಸರ ಕಾರ್ಯಕ್ರಮ ಹಮ್ಮಿಕೊಂಡಿದ್ದು ಕಾರ್ಯಕ್ರಮದ ಅಧ್ಯಕ್ಷತೆಯನ್ನು ಎಸ್ ಡಿ ಎಂ ಸಿ ಅಧ್ಯಕ್ಷರಾದ ರವೀಂದ್ರಗೌಡ ವಹಿಸಿದ್ದರು. ಕಾರ್ಯಕ್ರಮದಲ್ಲಿ ಶಾಲೆಯ ಮುಖ್ಯ ಗುರುಗಳಾದ ಶರಣಪ್ಪ ರವರು ಧರ್ಮಸ್ಥಳ ಯೋಜನೆಯು ಗಿಡ ನಾಟಿ ಮೂಲಕ ಜನರಲ್ಲಿ ಪರಿಸರದ ಬಗ್ಗೆ ಅರಿವು ಮೂಡಿಸುತ್ತಿರುವುದು ಶ್ಲಾಘನೀಯವಾದ ವಿಚಾರವಾಗಿದೆ.ಈ ಬಗ್ಗೆ ಜನರಲ್ಲಿ ಕಾಳಜಿ ಮೂಡಬೇಕು ಆಗ ಮಾತ್ರ ಸುಂದರ ಪರಿಸರ ನಿರ್ಮಾಣವಾಗುತ್ತದೆ ಎಂದು ತಿಳಿಸಿದರು. ನಂತರ ತಾಲೂಕಿನ ಯೋಜನಾಧಿಕಾರಿಗ ಶಶಿಧರ್ ರವರು ಮಾತನಾಡಿ. ಪರಿಸರ ಕಾರ್ಯಕ್ರಮ ಜನರಿಗೆ ಅರಿವು ಮೂಡಿಸುವ ಕಾರ್ಯಕ್ರಮವಾಗಿದ್ದು ಎಲ್ಲರಲ್ಲಿ ಪರಿಸರದ ಬಗ್ಗೆ ಕಾಳಜಿ ಮೂಡಿದರೆ ಉತ್ತಮ ಹಾಗೂ ಸ್ವಚ್ಛ ವಾತಾವರಣ ನಿರ್ಮಾಣವಾಗುವ ಜೊತೆಗೆ ಕಾಲಕಾಲಕ್ಕೆ ಮಳೆ ಆಗುತ್ತದೆ ಕೃಷಿಗೆ ಸಹಕಾರಿಯಾಗುತ್ತದೆ ರೈತರಿಗೆ ಹಾಗೂ ನಾಗರಿಕರಿಗೆ ಸಮೃದ್ಧಿಯ ವಾತಾವರಣ ನಿರ್ಮಾಣವಾಗುತ್ತದೆ ಎಂದು ತಿಳಿಸುವ ಮೂಲಕ ಶಾಲೆಗಳಲ್ಲಿ ಒಂದು ಮಗು ಒಂದು ಗಿಡ ಎಂಬ ಕಲ್ಪನೆಯ ಆಧಾರದಲ್ಲಿ ಸಾಮೂಹಿಕ ಗಿಡ ನಾಟಿ ಮಾಡಿದಾಗ ಉತ್ತಮ ಪರಿಸರ ನಿರ್ಮಾಣವಾಗುತ್ತದೆ ಎಂದು ಮಾಹಿತಿ ನೀಡಿದರು. ಕಾರ್ಯಕ್ರಮದಲ್ಲಿ ಶಾಲೆಯ ಶಿಕ್ಷಕರದ ಅನಂತನಾಗ. ಶಿವಪುತ್ರಪ್ಪ ವಲಯದ ಮೇಲ್ವಿಚಾರಕರು ಆಸ್ಪಕ್.ಕೃಷಿ ಮೇಲ್ವಿಚಾರಕರಾದ ಅಶೋಕ್ ಒಕ್ಕೂಟ ಪದಾಧಿಕಾರಿಗಳದ ಪಾರ್ವತಿ ಲಲಿತ ವೀಣಾ ಹಾಗು ಸೇವಾ ಪ್ರತಿನಿಧಿ ಅಕ್ಬರ್ ಶಾಲೆಯ ಶಿಕ್ಷಕರ ವೃಂದ ಮಕ್ಕಳು ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಿದರು

# ಸಂಭ್ರಮದಿಂದ ಶಾಸಕ ಗಣೇಶ ಜನ್ಮದಿನಾಚರಣೆ



• **ಮಲ್ಲಮ್ಮ ನುಡಿ ವಾರ್ತೆ ಕಂಪ್ಲಿ**

ಕ್ಷೇತ್ರದ ಶಾಸಕ ಜೆ.ಎನ್.ಗಣೇಶ್ ಅವರ ಹುಟ್ಟುಹಬ್ಬದ ಅಂಗವಾಗಿ ಪಟ್ಟಣ ಸೇರಿದಂತೆ ವಿವಿಧ ಭಾಗಗಳಲ್ಲಿ ಅಭಿಮಾನಿಗಳುಮತ್ತುಕಾಂಗ್ರೆಸ್ ಕಾರ್ಯಕರ್ತರು ಸಂಭ್ರಮದಿಂದ ಆಚರಣೆ ನಡೆಸಿದರು.ಕೇಕ್ ಕತ್ತರಿಸುವ ಮೂಲಕ ಶಾಸಕರಿಗೆ ಶುಭಾಶಯ ಕೋರಿದ ಅಭಿಮಾನಿಗಳು ಹುಟ್ಟುಹಬ್ಬವನ್ನು ವಿಶೇಷವಾಗಿ ಆಚರಿಸಿದರು.ಈ ಸಂದರ್ಭದಲ್ಲಿ ಸಮಾಜಮುಖಿ ಕಾರ್ಯಕ್ಕೂ ಆದ್ಯತೆ ನೀಡಿದ ಕಾಂಗ್ರೆಸ್ ಮುಖಂಡರು, ಕಂಪ್ಲಿಯ ಎಸ್ಸಿ/ಎಸ್ಟಿ ವಿದ್ಯಾರ್ಥಿ ನಿಲಯದ ವಿದ್ಯಾರ್ಥಿಗಳಿಗೆ ನೋಟು ಪುಸ್ತಕ ಹಾಗೂ ಪೆನ್‌ಗಳನ್ನು ವಿತರಿಸಿದರು. ಕಾಂಗ್ರೆಸ್ ಮುಖಂಡರಾದ ಸಿ.ಆರ್.ಹನುಮಂತ, ಬಿ.ಪ್ರಸಾದ್, ಅಭೀಬ್‌ರೆಹಮಾನ, ಷಣ್ಮುಖ ಹಾಗೂ ಬಿ.ಸಿದ್ದಪ್ಪ ಅವರ ನೇತೃತ್ವದಲ್ಲಿ ಈ ಕಾರ್ಯಕ್ರಮ ನಡೆಯಿತು.ವಿದ್ಯಾರ್ಥಿಗಳಿಗೆ ಅಗತ್ಯವಾದ ಶೈಕ್ಷಣಿಕ ಸಾಮಗ್ರಿಗಳನ್ನು ವಿತರಿಸುವ ಮೂಲಕ ಶಿಕ್ಷಣಕ್ಕೆ ಉತ್ತೇಜನ ನೀಡುವ ಪ್ರಯತ್ನ ಮಾಡಲಾಗಿದೆ ಎಂದು ಮುಖಂಡರು ತಿಳಿಸಿದರು. ಇದೇ ವೇಳೆ ಶಾಸಕ ಜೆ.ಎನ್.ಗಣೇಶ್ ಅವರ ಜನಪರ ಕಾರ್ಯಗಳನ್ನುಸ್ಮರಿಸಿ ಅವರ ದೀರ್ಘಾಯುಷ್ಯ ಹಾಗೂ ಉತ್ತಮ ಆರೋಗ್ಯಕ್ಕಾಗಿ ಶುಭ ಹಾರೈಸಿದರು.ಪಟ್ಟಣದಲ್ಲಿ ಇನ್ನೂ ಹಲವೆಡೆ ರಾತ್ರಿ ವೇಳೆಯವರೆಗೂ ಹುಟ್ಟುಹಬ್ಬದ ಅಂಗವಾಗಿ ವಿವಿಧ ಸಾಮಾಜಿಕ ಹಾಗೂ ಸೇವಾ ಕಾರ್ಯಕ್ರಮಗಳು ನಡೆಯಲಿದ್ದು, ಅಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವ ನಿರೀಕ್ಷೆಯಿದೆ ಎಂದು ಕಾಂಗ್ರೆಸ್ ಮುಖಂಡರು ತಿಳಿಸಿದರು.ಕಾರ್ಯಕ್ರಮದಲ್ಲಿ ಬಿ.ನಾರಾಯಣಪ್ಪ, ಚಾಂದ್ ಬಾಷಾ,ಕೆ.ಮನೋಹರ, ರಘುನಾಯ್ಕ, ರಾಮನಾಯ್ಡು, ಜಾಫರ್, ಗೋಪಾಲ್, ಸೆಕ್ಷಾವಲಿ, ಶಶಿಕುಮಾರ್, ಬೋಯ ವೆಂಕಟೇಶ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಬಾಲ್ಯವಿವಾಹ ಮುಕ್ತ ಗ್ರಾಮಗಳ ನಿರ್ಮಾಣಕ್ಕೆ ಕೈಜೋಡಿಸಿ: ಹೇಮಂತಕುಮಾರ

• **ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ**



ಗ್ರಾಮ ಮಟ್ಟದಲ್ಲಿ ಜಾಗೃತಿಯನ್ನು ಮೂಡಿಸಿ, ಬಾಲ್ಯವಿವಾಹದಿಂದ ಮಕ್ಕಳ ರಕ್ಷಣೆ, ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯಗಳ ತಡೆಗಟ್ಟುವ ಮೂಲಕ ಬಾಲ್ಯವಿವಾಹ ಮುಕ್ತಗ್ರಾಮಗಳನ್ನಾಸಲು ಪ್ರತಿಯೊಬ್ಬರು ಕೈಜೋಡಿಸಬೇಕೆಂದು ಹೆಚ್ಚುವರಿ ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಹೇಮಂತಕುಮಾರ ಅವರು ಹೇಳಿದರು.

ಕೊಪ್ಪಳ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಪೊಲೀಸ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ,ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಂಯುಕ್ತಾಶ್ರಯದಲ್ಲಿ ಬುಧವಾರ (ಜೂ. 3 ರಂದು) ಕನಕಗಿರಿ ತಾಲ್ಲೂಕಿನ ಬಸರಿಹಾಳ ಗ್ರಾಮದಲ್ಲಿ ಸಾರ್ವಜನಿಕರಿಗೆ ಹಮ್ಮಿಕೊಳ್ಳಲಾಗಿದ್ದ "ಮಕ್ಕಳ ಹಕ್ಕುಗಳು, ಕಾನೂನುಗಳು ಮತ್ತು ಮಕ್ಕಳ ಸುರಕ್ಷತೆ ಕುರಿತು ಜಾಗೃತಿ ಕಾರ್ಯಕ್ರಮ" ಉದ್ಘಾಟಿಸಿ ಅವರು ಮಾಡಿದವರು.

ಭಾಗಿಯಾದವರು, ಪ್ರೋತ್ಸಾಹಿಸಿದವರು ಬಾಲ್ಯವಿವಾಹ ನಿಷೇಧ ಕಾಯ್ದೆ ಮತ್ತು ಈ ಕಾಯ್ದೆಯಡಿಲ್ಲಿ ಸಿಲುಕಿ ಜೈಲು ಶಿಕ್ಷೆಗೆ ಗುರಿಯಾಗಿರುವುದು ಸಹ ಜಿಲ್ಲೆಯಲ್ಲಿ ವರದಿಯಾಗಿವೆ. ಜಿಲ್ಲೆಯ ವಸತಿ ನಿಲಯಗಳಲ್ಲಿ ಅಪ್ರಾಪ್ತ ವಯಸ್ಸಿನ ಮಕ್ಕಳು, ಮಕ್ಕಳಿಗೆ ಜನ್ಮ ನೀಡಿದ ಪ್ರಕರಣಗಳು ವರದಿಯಾಗಿವೆ. ಇದು ಸಮುದಾಯಗಳಲ್ಲಿ ಇನ್ನೂ ಸಹ ಜಾಗೃತಿ, ಮಾಹಿತಿಯ ಕೊರತೆಯನ್ನು ತಿಳಿಸುತ್ತಿದೆ. ರಾಷ್ಟ್ರೀಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಮೀಕ್ಷೆ–5ರಲ್ಲಿ ಅಪ್ರಾಪ್ತ ವಯಸ್ಸಿನಲ್ಲಿ ಮದುವೆಯಾದವರ ಪ್ರಮಾಣ ಜಿಲ್ಲೆಯಲ್ಲಿ 27% ಇದೆ. ಇದು ಕಳೆದ ಸಮೀಕ್ಷೆ–4ರಲ್ಲಿ ವರದಿಯಾದ ಪ್ರಮಾಣ 35.9% ಇದಿದ್ದು, ಇಳಿಕೆಯಾಗಿದ್ದರೂ ಸಹ ರಾಜ್ಯದಲ್ಲಿ ಅತಿ ಹೆಚ್ಚು ಬಾಲ್ಯವಿವಾಹಗಳು ಜರುಗುವ ಜಿಲ್ಲೆಗಳಲ್ಲಿ ಜಿಲ್ಲೆಯು ಒಂದಾಗಿದೆ ಎಂದು ಕಳವಳ ವ್ಯಕ್ತಪಡಿಸಿದರು.

ಹಲವಾರು ಪ್ರಕರಣಗಳಲ್ಲಿ ಆರೋಪಿತರಿಗೆ ಶಿಕ್ಷೆಯಾಗಿದ್ದರು ಬಾಲ್ಯವಿವಾಹಗಳು ಜರುಗುತ್ತಿರುವುದು ವಿಪರ್ಯಾಸಕರವಾಗಿದೆ. ಆದ್ದರಿಂದ ಗ್ರಾಮ ಮಟ್ಟದಲ್ಲಿ ಜಾಗೃತಿಯನ್ನು ಮೂಡಿಸಿ ತನ್ಮೂಲಕ ಮಕ್ಕಳನ್ನು ಬಾಲ್ಯವಿವಾಹದಿಂದ ರಕ್ಷಣೆ, ಮಕ್ಕಳ ಮೇಲಾಗುವ ಲೈಂಗಿಕ ದೌರ್ಜನ್ಯಗಳಿಂದ ಅವರ ರಕ್ಷಣೆ ಹಾಗೂ ಬಾಲ್ಯವಿವಾಹಗಳಿಂದ ಗ್ರಾಮಗಳನ್ನು ಮುಕ್ತಗೊಳಿಸುವುದು ಸರ್ಕಾರ, ಸಮುದಯ ಮತ್ತು ಪಾಲರದ್ದೂ ಸಹ ಜವಾಬ್ದಾರಿಯಾಗಿದ್ದು, ಈ ಕುರಿತು ಮಾಹಿತಿ ನೀಡಲು ಇಂತಹ ಜಾಗೃತಿ ಕಾರ್ಯಕ್ರಮವನ್ನು ಆಯೋಜಿಸಲಾಗುತ್ತಿದೆ. ಸಾರ್ವಜನಿಕರು ಇದರ ಉಪಯೋಗಪಡೆಯುವ ಮೂಲಕ ಮಕ್ಕಳನ್ನು ರಕ್ಷಣೆ ಮಾಡುವಂತೆ ಕರೆ ನೀಡಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ಗಂಗಾವತಿ ಪೊಲೀಸ್ ಉಪ ಅಧೀಕ್ಷಕರಾದ ನ್ಯಾಮಗೌಡ ಅವರು ಮಾತನಾಡಿ, ಮಕ್ಕಳ ಮೇಲಿನ ಲೈಂಗಿಕ ಅಪರಾಧಗಳನ್ನು ತಡೆಗಟ್ಟಲು ಸರಕಾರವು ವಿವಿಧ ಕಾನೂನುಗಳನ್ನು ಜಾರಿಯಲ್ಲಿ ತಂದಿರುತ್ತದೆ. ಅವುಗಳಲ್ಲಿ ಲೈಂಗಿಕ ಅಪರಾಧಗಳಿಂದ ಮಕ್ಕಳ ಸಂರಕ್ಷಣಾ ಕಾಯ್ದೆ–2012 ತಿದ್ದುಪಡಿ–2019 ಪ್ರಮುಖವಾದದ್ದು. ಈ ಕಾಯ್ದೆಯನ್ವಯ 18 ವರ್ಷದೊಳಗಿನ ಮಕ್ಕಳ ಮೇಲಿನ ಬೇಧಕ ಲೈಂಗಿಕ ಹಲ್ಲೆಗೆ ಕನಿಷ್ಠ 20 ವರ್ಷಗಳಿಂದ ಅಜೀವ ಜೈಲು ಶಿಕ್ಷೆ ಮತ್ತು ದಂಡವನ್ನು ವಿಧಿಸಬಹುದಾಗಿದೆ. ಲೈಂಗಿಕ ಕಿರುಕುಳ ಅಂದರೆ ಮಕ್ಕಳಿಗೆ ಶಾಬ್ದಿಕ, ಅಂಗಿಕ, ಭಾಷಿಕ ಹಾಗೂ ಲಿಖಿತವಾಗಿ ಅವರ ಘನತೆಗೆ ಧಕ್ಕೆ ಉಂಟುಮಾಡಬಹುದಾದ ಯಾವುದೇ ಈ ರೀತಿಯ ಕೃತ್ಯಗಳಾಗಿವೆ. ಈ ಕೃತ್ಯಗಳಿಗೆ 7 ವರ್ಷಗಳವರೆಗೆ ಜೈಲು ಶಿಕ್ಷೆ ಮತ್ತು ದಂಡವನ್ನು ವಿಧಿಸಬಹುದಾಗಿದೆ. ಈ ರೀತಿಯ ಕೃತ್ಯಗಳಿಗೆ ಸಹಾಯ, ಪ್ರೋತ್ಸಾಹ ನೀಡಿದವರಿಗೂ ಮತ್ತು ಪ್ರಯತ್ನಪಟ್ಟವರಿಗೂ ಸಹ ಅಷ್ಟೇ ಪ್ರಮಾಣದ ಶಿಕ್ಷೆಯನ್ನು ವಿಧಿಸಬಹುದಾಗಿದೆ. ಮಾಧ್ಯಮಗಳ ಪ್ರಭಾವದಿಂದ ಪ್ರೀತಿ, ಪ್ರೇಮದ ಹೆಸರಿನಲ್ಲಿ ಮಕ್ಕಳು ತಿಳಿದೊ, ತಿಳಿಯದೆಯೋ ಈ ಕಾಯ್ದೆಯಲ್ಲಿ ಸಿಲುಕುತ್ತಿದ್ದಾರೆ. ಮನೆಯಲ್ಲಿನ ಸಣ್ಣ ಮಕ್ಕಳನ್ನು ಕುಟುಂಬದಲ್ಲಿನ ಸದಸ್ಯರೇ ಲೈಂಗಿಕವಾಗಿ ದುರ್ಬಳಕೆ ಮಾಡುತ್ತಿರುವ ಪ್ರಕರಣಗಳು ವರದಿಯಾಗಿವೆ. ಆದ್ದರಿಂದ ಮಕ್ಕಳ ದೇಹದ ಭಾಗಗಳಲ್ಲಿ ಸುರಕ್ಷಿತ ಮತ್ತು ಅಸುರಕ್ಷಿತ ಸ್ಪರ್ಷಗಳ ಕುರಿತು ಜಾಗೃತಿ ಮೂಡಿಸುವಂತೆ ಸಾರ್ವಜನಿಕರಿಗೆ ಮಾಹಿತಿ ನೀಡಿದರು.

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳಾದ ಸಿಂಧು ಅಂಗಡಿ ಅವರು ಮಾತನಾಡಿ, ಜಿಲ್ಲೆಯಲ್ಲಿ ಮಕ್ಕಳನ್ನು ಎಲ್ಲೆಂದರಲ್ಲಿ ತೊರೆದು ಹೋಗಿ ಮಕ್ಕಳ ಪ್ರಾಣಕ್ಕೆ ಕುತ್ತು ತಂದ ಪ್ರಕರಣಗಳು ಸಹ ವರದಿಯಾಗಿವೆ. ಮಕ್ಕಳ ನ್ಯಾಯ(ಮಕ್ಕಳ ಪೋಷಣೆ ಮತ್ತು ರಕ್ಷಣೆ) ಕಾಯ್ದೆ–2015ರಡಿಯಲ್ಲಿ ಮಗು ಬೇಡವಾದಲ್ಲಿ ಅಂತಹ ಮಗುವನ್ನು ಎಲ್ಲೆಂದರಲ್ಲಿ ಬಿಸಾಡಿ ಮಗುವಿನ ಪ್ರಾಣಕ್ಕೆ ಎರವಾಗದೇ, ಅಂತಹ ಮಗುವನ್ನು 1098 ಮೂಲಕ ಅಥವಾ ನೇರವಾಗಿ ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿಯ ವಶಕ್ಕೆ ನೀಡಬಹುದಾಗಿದೆ. ನಂತರ ಸಮಿತಿಯು ಆ ಮಗುವನ್ನು ಕುಟುಂಬದ ವಾತಾವರಣದಲ್ಲಿ ಬೆಳೆಸಲು ಅಗತ್ಯ ಪುನರವಸತಿಗಳನ್ನು ನಿಯಮಾನುಸಾರ ಕೈಗೊಳ್ಳುತ್ತದೆ. ಅಕ್ರಮ ದತ್ತು ಶಿಕ್ಷಾರ್ಹ ಅಪರಾಧವಾಗಿದೆ. ನಿಯಮಬಾಹಿರವಾಗಿ ದತ್ತು ಪಡೆದಲ್ಲಿ ಅಂತಹ ಪಾಲಕರು ಮತ್ತು ದತ್ತು ನೀಡಿದ ಪೋಷಕರಿಗೂ ಸಹ ಶಿಕ್ಷೆಯನ್ನು ವಿಧಿಸಬಹುದಾಗಿದ್ದು, ಆದ್ದರಿಂದ ಬೇಡವಾದ ಶಿಶುಗಳನ್ನು ಎಲ್ಲಂದರಲ್ಲಿ ಬಿಸಾಡದೇ ಮಮತೆಯ ತೊಟ್ಟಿಲಿನಲ್ಲಿ ಹಾಕಿ ಅಥವಾ ಮಕ್ಕಳ ಸಹಾಯವಾಣಿ–1098ಕ್ಕೆ ಕರೆ ಮಾಡುವ ಮೂಲಕ ಅಂತಹ ಮಕ್ಕಳನ್ನು ಕಾನೂನುಬದ್ಧ ದತ್ತು ಪ್ರಕ್ರೀಯೆ ಮೂಲಕ ಕುಟುಂಬದ ವಾತಾವರಣವನ್ನು ನಿರ್ಮಸಲು ಸಹಕರಿಸುವಂತೆ ಸಾರ್ವಜನಿಕರಿಗೆ ಮಾಹಿತಿ ನೀಡಿದರು.

ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಂಪನ್ಮೂಲ ವ್ಯಕ್ತಿಗಳಾದ ಶಿವಲೀಲಾ ವನ್ನೂರು ಅವರು ಮಾತನಾಡಿ, 18 ವರ್ಷದೊಳಗಿನ ಮಕ್ಕಳು ಮಾದಕ ವ್ಯಸನಕ್ಕೊಳಗಾಗುತ್ತಿದ್ದಾರೆ. ವಾಹನ ಪರವಾನಿಗೆ ಇಲ್ಲದೇ ಅಸುರಕ್ಷಿತ ಚಾಲನೆ ಮಾಡಿ ಅಪಘಾತಗಳ ಪ್ರಮಾಣ ಏರಿಕೆಯಗುತ್ತಿದ್ದು, ಇದ–ರಿಂದ ಮಕ್ಕಳು ಮತ್ತು ವಯಸ್ಕರ ಜೀವಹಾನಿಯಾಗುತ್ತಿರುವುದು ವಿಷಾದನೀಯ. ಅಲ್ಲದೇ ಅಪ್ರಾಪ್ತ ವಯಸ್ಸಿನ ಮಕ್ಕಳು ಕಳ್ಳತನ ಮತ್ತು ಕೊಲೆ ಪ್ರಕರಣಗಳಲ್ಲಿ ಭಾಗಿಯಾಗುತ್ತಿರುವುದು ಹಾಗೂ ಪೋಕ್ಸೋ ಪ್ರಕರಣಗಳಲ್ಲಿಯೂ ಸಹ 18 ರಿಂದ 21 ವಯಸ್ಕಪುರುಷರು ಜೀವಾವಧಿ ಶಿಕ್ಷೆಯ ಪ್ರಮಾಣವನ್ನು ಅನುಭವಿಸುವಂತಹ ಘಟನೆಗಳು ವರದಿಯಾಗಿವೆ. ಆದ್ದರಿಂದ ಪಾಲಕರು ಮಕ್ಕಳ ಚಲನ–ವಲನಗಳ ಮೇಲೆ ನಿಗಾವಹಿಸಿ ಅವರಿಗೆ ಹೆಚ್ಚು ಪ್ರಾಶಸ್ತ್ಯವನ್ನು ನೀಡಿ, ಮಕ್ಕಳ ಮೇಲೆ ಹೆಚ್ಚು ಪ್ರೀತಿ, ಕಾಳಜಿಯನ್ನುವಹಿಸುವ ಮೂಲಕ ಮಕ್ಕಳು ಅಪಾಯದ ಅಂಚಿಗೆ ಸಿಲುಕುವ ಸಂದರ್ಭಗಳಿಂದ ಕಾಪಾಡುವ ಜವಾಬ್ದಾರಿ ನಮ್ಮ–ನಿಮ್ಮೆಲ್ಲರದ್ದಾಗಿದೆ ಎಂದು ಮಾಹಿತಿ ನೀಡಿದರು.

ಈ ಕಾರ್ಯಕ್ರಮದಲ್ಲಿ ಮಕ್ಕಳ ಕಾನೂನುಗಳ ಕುರಿತು ಜಾಗೃತಿ ಕಾರ್ಯಕ್ರಮವನ್ನು ಆಯೋಜಿಸುವ ಉದ್ದೇಶವನ್ನು ಪ್ರಾಸ್ತಾವಿಕವಾಗಿ ಕನಕಗಿರಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಾದ ವಿರುಪಾಕ್ಷಸ್ವಾಮಿ ಅವರು ಮಾತನಾಡಿದರು. ಕನಕಗಿರಿ ವಲಯದ ವೃತ್ತನಿರೀಕ್ಷಕರಾದ ನಾರಾಯಣ, ಕನಕಗಿರಿ ತಾಲ್ಲೂಕು ಪಂಚಾಯತ್ ಸಹಾಯಕ ನಿರ್ದೇಶಕರಾದ ನಾಗೇಶ ಎಚ್., ಅಂಗನವಾಡಿ ಮೇಲ್ವಿಚಾರಕರಾದ ಚಂದ್ರಕಲಾ, ಬಸರಿಹಳ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಕಾರಿಗಳಾದ ಬಸವರಾಜ ಸಂಕನಾಳ, ಎಸ್.ಡಿ.ಎಂ.ಸಿ. ಅಧ್ಯಕ್ಷರಾದ ಪರಶುರಾಮ ವಜ್ರಬಂಡಿ, ಬಸರಿಹಾಳ ಸ.ಹಿ.ಪ್ರಾ.ಶಾಲೆ ಮುಖ್ಯೋಪಾಧ್ಯಾಯರಾದ ಧರ್ಮಣ್ಣ ಸೇರಿದಂತೆ ಗ್ರಾಮ ಪಂಚಾಯತ್‌ನ ನಿಕಟಪೂರ್ವ ಸರ್ವಸದಸ್ಯರು, ಅಂಗನವಾಡಿ ಕಾರ್ಯಕರ್ತರು, ಅಕ್ಕಪಡೆ ಪೊಲೀಸ್ ಸಿಬ್ಬಂದಿಗಳು, ಆಶಾ ಕಾರ್ಯಕತೆ–ಯರು ಗ್ರಾಮದ ಮಹಿಳೆಯರು & ಊರಿನ ಮುಖಂಡರು ಹಾಗೂ ಮಕ್ಕಳು ಭಾಗವಹಿಸಿದ್ದರು.

ಕಾರ್ಯಕ್ರಮದ ನಿರೂಪಣೆ ಮತ್ತು ಪ್ರಾರ್ಥನೆಯನ್ನು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಮಾಜ ಕಾರ್ಯಕರ್ತರಾದ ಪ್ರತಿಭಾ ಕಾಶಿಮಠ ಅವರು ನೆರವೇರಿಸಿದರು. ಸ್ವಾಗವನ್ನು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ರಕ್ಷಣಾಧಿಕಾರಿ(ಸಾಂಸ್ಥಿಕ) ರವಿ ಬಡಿಗೇರ ಅವರು ಮತ್ತು ವಂದನಾರ್ಪಣೆಯನ್ನು ಮಕ್ಕಳ ಸಹಾಯವಾಣಿ–1098ರ ಸಂಯೋಜಕರಾದ ಶರಣಪ್ಪ ಸಿಂಗನಾಳ ಅವರು ನೆರವೇರಿಸಿದರು.

# ಎಸ್‌ಐಆರ್ ಮತದಾರರ ಪಟ್ಟಿ ಪಾರದರ್ಶಕಗೊಳಿಸುವ ಉದ್ದೇಶ

• **ಮಲ್ಲಮ್ಮ ನುಡಿ ವಾರ್ತೆ ರಾಯಚೂರು**



ಜೂ 05 : ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ರಾಜ್ಯದ ಎಲ್ಲಾ ವಿಧಾನಸಭಾ ಕ್ಷೇತ್ರಗಳಲ್ಲಿ ವಿಶೇಷ ತೀವ್ರ ಪರಿಷ್ಕರಣೆ–2026 (ಎಸ್‌ಐಆರ್)ರ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಮತದಾರರ ಪಟ್ಟಿಯನ್ನು ಇನ್ನಷ್ಟು ನಿಖರ, ದೋಷರಹಿತ ಹಾಗೂ ಪಾರದರ್ಶಕಗೊಳಿಸುವ ಉದ್ದೇಶ ಹೊಂದಿದೆ ಎಂದು ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ಹೇಳಿದರು.

ಜೂನ್ 05ರ ಶುಕ್ರವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ನಡೆದ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಅವರು ಮಾತನಾಡಿದರು.

ಮತದಾರರ ಪಟ್ಟಿಯ ಪರಿಷ್ಕರಣೆ ಪ್ರಕ್ರಿಯೆಯ ಅಂಗವಾಗಿ ಮನೆ ಮನೆ ಸಮೀಕ್ಷೆ ನಡೆಸಲಾಗುವುದು. ಈ ವೇಳೆ ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಒ) ಮನೆಗಳಿಗೆ ಭೇಟಿ ನೀಡಿ ಮತದಾರರ ವಿವರಗಳನ್ನು ಸಂಗ್ರಹಿಸಿ ಪರಿಶೀಲಿಸಲಿದ್ದಾರೆ. ಸಂಗ್ರಹಿಸಲಾದ ಮಾಹಿತಿಯ ಆಧಾರದ ಮೇಲೆ ಮತದಾರರ ಪಟ್ಟಿಯ ಪರಿಷ್ಕರಣೆ, ತಿದ್ದುಪಡಿ ಹಾಗೂ ನವೀಕರಣ ಕಾರ್ಯ ಕೈಗೊಳ್ಳಲಾಗುವುದು ಎಂದು ಹೇಳಿದರು.ಜಿಲ್ಲೆಯಲ್ಲಿ ಈಗಾಗಲೇ ಶೇ.85.90 ರಷ್ಟು ನೈಜ ಮತದಾರರನ್ನು ಗುರುತಿಸಿ, ಕುಟುಂಬಗಳ ಲಿಂಕೇಜ್‌ನೊಂದಿಗೆ ಹೊಂದಾಣಿಕೆ ಮಾಡಲಾಗಿದೆ. ವಿಶೇಷ ಪರಿಷ್ಕರಣೆ ಅಂಗವಾಗಿ ಜೂನ್ 20ರಿಂದ 29ರವರೆಗೆ ಪೂರ್ವಸಿದ್ಧತೆ, ತರಬೇತಿ ಮತ್ತು ಮುದ್ರಣ ಕಾರ್ಯಗಳು ನಡೆಯಲಿವೆ. ಜೂನ್ 30ರಿಂದ ಜುಲೈ 29ರವರೆಗೆ ಬಿ.ಎಲ್.ಓ.ಗಳು ಮನೆ ಮನೆಗೆ ಭೇಟಿ ನೀಡಿ ಸಮೀಕ್ಷೆ ಹಾಗೂ ಪರಿಶೀಲನೆ ನಡೆಸಲಿದ್ದಾರೆ. ತದನಂತರ ಆಗಸ್ಟ್ 5ರಂದು ಕರಡು ಮತದಾರರ ಪಟ್ಟಿಯನ್ನು ಪ್ರಕಟಿಸಲಾಗುವುದು. ಈ ಬಗ್ಗೆ ಸಾರ್ವಜನಿಕರಲ್ಲಿ ಹೆಚ್ಚಿನ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಮಾಧ್ಯಮಗಳು ಸಹಕರಿಸಬೇಕು ಎಂದು ಜಿಲ್ಲಾಧಿಕಾರಿಗಳು ಕೋರಿದರು.

14,78,141 ಮತದಾರ ಗುರುತು: 2025ರ ಜಿಲ್ಲೆಯ ಮತದಾರರ ಪಟ್ಟಿಯ ಪ್ರಕಾರ ಒಟ್ಟು 17,22,279 ಅರ್ಹ ಮತದಾರರಿದ್ದು, ಈ ಪೈಕಿ ಈಗಾಗಲೇ 14,78,141 ಮತದಾರರನ್ನು ಗುರುತಿಸಿ ಶೇ.85.90ರಷ್ಟು ಮ್ಯಾಪಿಂಗ್ ಮಾಡಲಾಗಿದೆ. ಉಳಿದ ಮತದಾರರನ್ನು ಪತ್ತೆ ಮಾಡಲಾಗುತ್ತಿದೆ. ಇದರಲ್ಲಿ ಕೆಲವರು ಮೃತರಾಗಿರಬಹುದು, ಬೇರೆ ಕಡೆಗೆ ಕಾಯಂ ಆಗಿ ವಲಸೆ ಹೋಗಿರಬಹುದು, ಅಥವಾ ಮತಪಟ್ಟಿಯಲ್ಲಿ ಎರಡು ಬಾರಿ ಹೆಸರು ಸೇರ್ಪಡೆಯಾಗಿರಬಹುದು. ಆದರೆ ಯಾರನ್ನೂ ಏಕಾಏಕಿ ಪಟ್ಟಿಯಿಂದ ಕೈಬಿಡಲಾಗುವುದಿಲ್ಲ. ಪತ್ತೆಯಾಗದ ಈ .. ಮತದಾರರಿಗೆ ನೋಟಿಸ್ ನೀಡಿ ಪರಿಶೀಲಿಸಲಾಗುವುದು. ಮೃತ ಪಟ್ಟ ಬಗ್ಗೆ ಅಧಿಕೃತ ಮರಣ ಪ್ರಮಾಣ ಪತ್ರ ಸಿಗುವವರೆಗೂ ಯಾರ ಹೆಸರನ್ನೂ ಪಟ್ಟಿಯಿಂದ ತೆಗೆದುಹಾಕುವುದಿಲ್ಲ. ಮತದಾರರ ಪತ್ತೆಗಾಗಿ ವಿಶೇಷ ಕಾರ್ಯಾಚರಣೆ ನಡೆಸಲಾಗುವುದು ಎಂದರು.

ಮನೆ ಗಣತಿ ಸಹಕಾರಕ್ಕೆ ಕೋರಿಕೆ: ಈಗಾಗಲೇ ಮನೆ ಮನೆ ಸಮೀಕ್ಷೆ ಮುಗಿದಿದ್ದು, ಮುಂದಿನ ಹಂತವಾಗಿ ಪ್ರತಿಯೊಬ್ಬ ಮತದಾರರ ಮನೆ ಬಾಗಿಲಿಗೆ ಬಿಎಲ್‌ಒಗಳ ಮೂಲಕ ಅರ್ಧದಷ್ಟು ಮಾಹಿತಿ ಭರ್ತಿಯಾಗಿರುವ ಗಣತಿ ನಮೂನೆ ತಲುಪಿಸಲಾಗುವುದು. ಇದರಲ್ಲಿ ಮತದಾರರ ಹೆಸರು, ಎಪಿಕ್ ಸಂಖ್ಯೆ, ಸಂಬಂಧಿಕರ ಹೆಸರು ಹಾಗೂ ವಿಧಾನಸಭಾ ಕ್ಷೇತ್ರದ ವಿವರಗಳು ಇರಲಿವೆ. ಬಿಎಲ್‌ಒಗಳು ಮನೆಗಳಿಗೆ ಕನಿಷ್ಠ ಮೂರು ಬಾರಿ ಭೇಟಿ ನೀಡಿ, ಗಣತಿ ನಮೂನೆಗಳನ್ನು ತಲುಪಿಸಲು ಪ್ರಯತ್ನಿಸಲಿದ್ದಾರೆ. ನಂತರ ವಿವರಗಳು ಸರಿಯಾಗಿವೆಯೇ ಎಂಬುದನ್ನು ಮತದಾರರಿಂದ ದೃಢೀಕರಿಸಿಕೊಂಡು ಸಹಿ ಪಡೆದು ವಾಪಸ್ ತರಲಿದ್ದಾರೆ. ಸಾರ್ವಜನಿಕರು ಗಣತಿ ನಮೂನೆ ಸ್ವೀಕರಿಸಿ, ಪರಿಶೀಲಿಸಿ ಕಡ್ಡಾಯವಾಗಿ ಬಿಎಲ್‌ಒಗಳಿಗೆ ವಾಪಸ್ ನೀಡಬೇಕು. ಇಲ್ಲದಿದ್ದರೆ ಮತದಾರರ ಪಟ್ಟಿಯಿಂದ ಹೆಸರು ಕೈಬಿಟ್ಟು ಹೋಗುವ ಸಾಧ್ಯತೆ ಇರುವ ಕಾರಣ ಸಾರ್ವಜನಿಕರು ಈ ಬೃಹತ್ ಕಾರ್ಯಕ್ಕೆ ಕೈಜೋಡಿಸಬೇಕು ಎಂದು ಜಿಲ್ಲಾಧಿಕಾರಿ ಪೂವಿತಾ ಎಸ್. ಅವರು ಕೋರಿದರು.

ಪ್ರಸ್ತುತ ರಾಯಚೂರು ಜಿಲ್ಲೆಯ 07 ವಿಧಾನಸಭಾ ಕ್ಷೇತ್ರಗಳಲ್ಲಿ ಒಟ್ಟು 1,853 ಮತಗಟ್ಟೆಗಳಿದ್ದು, ಒಟ್ಟು 17,22,279 ಮತದಾರರಿದ್ದು, ಮತದಾರರ ಪಟ್ಟಿ ಪರಿಷ್ಕರಣೆ ಪ್ರಜಾಪ್ರಭುತ್ವದ ಅತ್ಯಂತ ಮಹತ್ವದ ಪ್ರಕ್ರಿಯೆಯಾಗಿದೆ. ಗಣತಿ ನಮೂನೆ ಅರ್ಜಿಯನ್ನು ಸಾರ್ವಜನಿಕರು ಆದಷ್ಟು ಭೇಗನೆ ಭರ್ತಿ ಮಾಡಿ ಕೊಡಬೇಕು. ಮತ್ತು ಇವುಗಳಿಗೆ ಸಂಬಂಧಿಸಿದ ಯಾವುದೇ ದೂರು ಇದ್ದರೆ 1950 ಸಹಾಯವಾಣಿಗೆ ಸಾರ್ವಜನಿಕರು ಕರೆ ಮಾಡಬಹುದಾಗಿದೆ. ಎಲ್ಲ ಮತದಾರರು, ರಾಜಕೀಯ ಪಕ್ಷಗಳ ಮುಖಂಡರು ಹಾಗೂ ಸಾರ್ವಜನಿಕರು ಬಿಎಲ್‌ಒಗಳಿಗೆ ಅಗತ್ಯ ಸಹಕಾರ ನೀಡುವ ಮೂಲಕ ಮತದಾರರ ಪಟ್ಟಿಯನ್ನು ಸಂಪೂರ್ಣ, ನಿಖರ ಮತ್ತು ಪಾರದರ್ಶಕಗೊಳಿಸಲು ಕೈಜೋಡಿಸಬೇಕು ಎಂದು ಜಿಲ್ಲಾಧಿಕಾರಿಗಳು ಮನವಿ ಮಾಡಿದರು.

ಪತ್ರಿಕಾಗೋಷ್ಠಿಯಲ್ಲಿ ರಾಯಚೂರು ಸಹಾಯಕ ಆಯುಕ್ತ ಡಾ.ಹಂಪಣ್ಣ ಸಜ್ಜನ್, ರಾಯಚೂರು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರಾದ ಜಿ.ಸುರೇಶ ಸೇರಿದಂತೆ ಚುನಾವಣಾ ಶಾಖೆಯ ಶಿರಸ್ತೇದಾರ್ ಋಷಿಕೇಶ ಇತರರು ಉಪಸ್ಥಿತರಿದ್ದರು.

# ಪರಿಸರ ಪಾಲಕ ಪ್ರಶಸ್ತಿಗೆ ಭಾಜನರಾದ ಗೌಡರಡ್ಡಿ



• **ಮಲ್ಲಮ್ಮ ನುಡಿ ವಾರ್ತೆ ಹುಣಸಗಿ**

ಸಮೀಪದ ಬಿ. ಸಾಲೋಡಗಿ ಗ್ರಾಮದ ಪ್ರಗತಿಪರ ರೈತ ಪ್ರಭುಗೌಡ ಬಿ. ಗೌಡರಡ್ಡಿ ಅವರಿಗೆ ಕರ್ನಾಟಕ ಸಂಘ, ಬೆಂಗಳೂರು ವತಿಯಿಂದ "ಪರಿಸರ ಪಾಲಕ ಪ್ರಶಸ್ತಿ–2026" ನೀಡಿ ಗೌರವಿಸಲಾಗಿದೆ.

ಸಾವಯವ ಕೃಷಿಯಲ್ಲಿ ಅದ್ಭುತ ಸಾಧನೆ ಮಾಡಿರುವ ಪ್ರಭುಗೌಡ ಬಿ. ಗೌಡರಡ್ಡಿ ಅವರು ತಮ್ಮನ್ನು ತಾವು ಸಂಪೂರ್ಣವಾಗಿ ಕೃಷಿ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡು ಪರಿಸರ ಸ್ನೇಹಿ ಕೃಷಿ ಪದ್ಧತಿಗಳನ್ನು ಅಳವಡಿಸಿಕೊಂಡಿದ್ದಾರೆ. ರಾಸಾಯನಿಕ ಮುಕ್ತ ಕೃಷಿಯ ಮೂಲಕ ಉತ್ತಮ ಬೆಳೆಗಳನ್ನು ಬೆಳೆದು, ನಮ್ಮ ಭಾಗದ ರೈತರಿಗೆ ಮಾದರಿಯಾಗಿ ಗುರುತಿಸಿಕೊಂಡಿದ್ದಾರೆ. ಕೃಷಿಯಲ್ಲಿ ಹೊಸತನ ಮತ್ತು ಪರಿಸರ ಕಾಳಜಿಯನ್ನು ಅಳವಡಿಸಿಕೊಂಡು ಅನೇಕ ರೈತರಿಗೆ ಪ್ರೇರಣೆಯಾಗಿದ್ದಾರೆ.

ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಪರಿಸರ ಸಂರಕ್ಷಣೆ, ಹಸಿರು ಪರಿಸರ ನಿರ್ಮಾಣ, ಸಸಿ ನೆಡುವಿಕೆ ಹಾಗೂ ಸಾವಯವ ಕೃಷಿ ಕ್ಷೇತ್ರದಲ್ಲಿ ಸಲ್ಲಿಸಿದ ವಿಶಿಷ್ಟ ಸೇವೆಯನ್ನು ಪರಿಗಣಿಸಿ ಕರ್ನಾಟಕ ಸಂಘವು ಅವರಿಗೆ "ಪರಿಸರ ಪಾಲಕ ಪ್ರಶಸ್ತಿ–2026" ಪ್ರದಾನ ಮಾಡಿದೆ.

ಪ್ರಶಸ್ತಿ ಸ್ವೀಕರಿಸಿದ ಪ್ರಭುಗೌಡ ಬಿ. ಗೌಡರಡ್ಡಿ ಅವರು, ಪರಿಸರ ಸಂರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿಯಾಗಿದ್ದು, ಸಾವಯವ ಕೃಷಿಯೇ ಆರೋಗ್ಯಕರ ಸಮಾಜ ಮತ್ತು ಸುಸ್ಥಿರ ಪರಿಸರ ನಿರ್ಮಾಣಕ್ಕೆ ಪೂರಕವಾಗಿದೆ ಎಂದು ಅಭಿಪ್ರಾಯಪಟ್ಟರು.

ಅವರ ಈ ಸಾಧನೆಗೆ ಬಿ. ಸಾಲೋಡಗಿ ಗ್ರಾಮ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ರೈತರು, ಗಣ್ಯರು ಹಾಗೂ ವಿವಿಧ ಸಂಘಟನೆಗಳ ಮುಖಂಡರು ಅಭಿನಂದನೆ ಸಲ್ಲಿಸಿ ಶುಭ ಹಾರೈಸಿದ್ದಾರೆ.

# ಹುಟ್ಟುಹಬ್ಬಕ್ಕೆ ಸಸಿ ನೆಡಲು ಮುಖ್ಯ ಗುರುಗಳ ಕರೆ



• **ಮಲ್ಲಮ್ಮ ನುಡಿ ವಾರ್ತೆ ಕಮಲನಗರ**

ತಾಲೂಕಿನ ಸಂಗಮ ಗ್ರಾಮದ ಡಾ. ಚನ್ನಬಸವ ಪಟ್ಟದೇವರ ಗುರುಕುಲ್ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ವಿಶ್ವ ಪರಿಸರ ದಿನಾಚರಣೆಯನ್ನು ಅತ್ಯಂತ ಅರ್ಥಪೂರ್ಣವಾಗಿ ಆಚರಿಸಲಾಯಿತು.

ಹಸಿರನ್ನು ಉಳಿಸಿ, ಬೆಳೆಸುವ ನಿಟ್ಟಿನಲ್ಲಿ ಶಾಲೆಯ ವತಿಯಿಂದ ವಿಶೇಷ ಜಾಗೃತಿ ಮೂಡಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಲೆಯ ಮುಖ್ಯ ಗುರುಗಳಾದ ಸಂಜಯ್ ಕುಮಾರ್ ಮೆಂಗಾ ಅವರು ವಹಿಸಿದ್ದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, "ಪರಿಸರ ನಮಗೆ ಉಚಿತವಾಗಿ ಮಳೆ, ಶುದ್ಧ ಗಾಳಿ ಹಾಗೂ ನೆರಳನ್ನು ಒದಗಿಸುತ್ತದೆ. ಅಂತಹ ಅಮೂಲ್ಯವಾದ ಮರ–ಗಿಡಗಳನ್ನು ಕೊಡವಿ ಹಾಕದೆ, ಅವುಗಳನ್ನು ರಕ್ಷಿಸುವ ಕೆಲಸವನ್ನು ನಾವೆಲ್ಲರೂ ಮಾಡಬೇಕಿದೆ. ಶಾಲೆಯ ಪ್ರತಿಯೊಬ್ಬ ವಿದ್ಯಾರ್ಥಿಯೂ ತಮ್ಮ ಹುಟ್ಟುಹಬ್ಬದ ಸವಿನೆನಪಿಗಾಗಿ ಕಡ್ಡಾಯವಾಗಿ ಒಂದೊಂದು ಸಸಿಯನ್ನು ನೆಟ್ಟು, ಅದನ್ನು ಪೋಷಿಸುವ ಸಂಕಲ್ಪ ಮಾಡಬೇಕು" ಎಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಲಕ್ಷ್ಮಣ್ ಸರ್, ದೀಪಿಕಾ ಮೇಡಂ ಹಾಗೂ ಶ್ವೇತಾ ಮೇಡಂ ಅವರು ಆಗಮಿಸಿ ಪರಿಸರ ಸಂರಕ್ಷಣೆಯ ಕುರಿತು ಮಾತನಾಡಿದರು. ಶಿಕ್ಷಕಿ ವೈಶಾಲಿ ಮೇಡಂ ಅವರು ಎಲ್ಲರನ್ನೂ ಆದರದಿಂದ ಸ್ವಾಗತಿಸಿದರೆ, ಶಿವಕುಮಾರ್ ಸ್ವಾಮಿ ಇಡೀ ಕಾರ್ಯಕ್ರಮವನ್ನು ನಿರೂಪಿಸಿದರು.

ಕಾರ್ಯಕ್ರಮದಲ್ಲಿ ಶಾಲೆಯ ಸಮಸ್ತ ಶಿಕ್ಷಕ ವೃಂದದವರು ಹಾಗೂ ಮುದ್ದು ವಿದ್ಯಾರ್ಥಿಗಳು ಉತ್ಸಾಹದಿಂದ ಪಾಲ್ಗೊಂಡು ಪರಿಸರ ದಿನಾಚರಣೆಯನ್ನು ಯಶಸ್ವಿಗೊಳಿಸಿದರು. ಶಾಲೆಯ ಈ ಪರಿಸರ ಜಾಗೃತಿ ನಡೆ ಸಾರ್ವಜನಿಕರ ವಲಯದಲ್ಲಿ ವ್ಯಾಪಕ ಪ್ರಶಂಸೆಗೆ ಪಾತ್ರವಾಗಿದೆ.

# ಮಾನವ ಜೀವನಕ್ಕೂ ಪರಿಸರಕ್ಕೂ ಅವಿನಾಭಾವ ಸಂಬಂಧ :ನ್ಯಾ. ಸಿದ್ದಲಿಂಗಪ್ರಭು

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಮಾನವನ ಉತ್ತಮ ಆರೋಗ್ಯಕ್ಕೆ ಶುದ್ಧವಾದ ಗಾಳಿ, ನೀರು ಮತ್ತು ಉತ್ತಮ ಆಹಾರ ಅತ್ಯಂತ ಪ್ರಮುಖವಾದ ಅಗತ್ಯಗಳಾಗಿದ್ದು, ಇವೆಲ್ಲವೂ ನಮಗೆ ಪ್ರಕೃತಿಯಿಂದಲೇ ದೊರೆಯುತ್ತಿವೆ. ಹಾಗಾಗಿ ನಮ್ಮ ದೈನಂದಿನ ಜೀವನ ಕ್ರಮಕ್ಕೂ ಮತ್ತು ಪರಿಸರಕ್ಕೂ ಒಂದು ಅವಿನಾಭಾವ ಸಂಬಂಧವಿದೆ ಎಂದು ಜಿಲ್ಲಾ ಪ್ರಧಾನ ಹಾಗೂ ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರೂ ಆದ ಸಿದ್ದಲಿಂಗಪ್ರಭು ಅವರು ಹೇಳಿದರು. ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಅರಣ್ಯ ಇಲಾಖೆ, ಶಾಲಾ ಶಿಕ್ಷಣ ಇಲಾಖೆ, ಸ್ಕೌಟ್ಸ್ ಮತ್ತು ಗೈಡ್ಸ್ ಹಾಗೂ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಬಳ್ಳಾರಿ ಪ್ರಾದೇಶಿಕ ಕಚೇರಿ ಇವರ ಸಂಯುಕ್ತಾಶ್ರಯದಲ್ಲಿ 'ಪ್ರಕೃತಿಯಿಂದ ಪ್ರೇರಿತ–ಹವಾಮಾನಕ್ಕಾಗಿ, ನಮ್ಮ ಭವಿಷ್ಯಕ್ಕಾಗಿ' ಎಂಬ ಘೋಷವಾಕ್ಯದೊಂದಿಗೆ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಶುಕ್ರವಾರ ಏರ್ಪಡಿಸಿದ್ದ ವಿಶ್ವ ಪರಿಸರ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಪರಿಸರದಿಂದ ಪ್ರೇರಣೆಗೊಂಡು, ನಮ್ಮ ಮುಂದಿನ ಉಜ್ವಲ ಭವಿಷ್ಯಕ್ಕಾಗಿ ಮತ್ತು ಅತ್ಯುತ್ತಮ ಹವಾಮಾನಕ್ಕಾಗಿ ನಾವು ಪಣತೊಡಬೇಕು. ಕೇವಲ ಪಣತೊಡುವುದಷ್ಟೇ ಅಲ್ಲದೆ, ಆ ನಿಟ್ಟಿನಲ್ಲಿ ನಾವೆಲ್ಲರೂ ದೈನಂದಿನ ಜೀವನದಲ್ಲಿ ಶ್ರಮಿಸಬೇಕಾಗಿದೆ. ಒಬ್ಬ ಮನುಷ್ಯನಿಗೆ ಉತ್ತಮ ಗಾಳಿ ಮತ್ತು ಆಮ್ಲಜನಕ ಸಿಗಬೇಕಾದರೆ ಕನಿಷ್ಠ 7 ಮರಗಳ ಅವಶ್ಯಕತೆ ಇರುತ್ತದೆ. ಆದರೆ ಪ್ರಸ್ತುತ ನಮ್ಮ ಜನಸಂಖ್ಯೆಗೆ ಅನುಗುಣವಾಗಿ ಅಷ್ಟು ಪ್ರಮಾಣದಲ್ಲಿ ಮರ–ಗಿಡಗಳು ಇಲ್ಲದಿರುವುದು ಆತಂಕಕಾರಿ ವಿಚಾರ ಎಂದು ಕಳವಳ ವ್ಯಕ್ತಪಡಿಸಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ ಅವರು ಮಾತನಾಡಿ, ಮಾನವನ ಅಸ್ತಿತ್ವಕ್ಕೆ ಪರಿಸರ ಅತ್ಯಂತ ಅತ್ಯಗತ್ಯವಾಗಿದ್ದು, ಪ್ರಕೃತಿಯನ್ನು ರಕ್ಷಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ. ಪ್ರಸ್ತುತ ಜಗತ್ತಿನಲ್ಲಿ ಪರಿಸರ ಮಾಲಿನ್ಯದ ಭೀತಿ ಹೆಚ್ಚಾಗುತ್ತಿದ್ದು, ನಾವೆಲ್ಲರೂ ಜಾಗೃತರಾಗಬೇಕಾದ ತುರ್ತು ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಹೇಳಿದರು.

ಪರಿಸರಕ್ಕೆ ಮಾನವನ ಅಗತ್ಯವಿಲ್ಲ, ಆದರೆ ಮಾನವನಿಗೆ ಪರಿಸರದ ಅಗತ್ಯ ಖಂಡಿತ ಇದೆ. ಪ್ರಕೃತಿ ತಾನಾಗಿಯೇ ಚೇತರಿಸಿಕೊಳ್ಳುವ ಶಕ್ತಿಯನ್ನು ಹೊಂದಿದೆ. ನಾವು ಪರಿಸರವನ್ನು ಚೆನ್ನಾಗಿಟ್ಟುಕೊಂಡು, ಇಂಗಾಲದ ಡೈ ಆಕ್ಸೈಡ್ ಪ್ರಮಾಣವನ್ನು ನಿಯಂತ್ರಿಸಿದರೆ ಮಾತ್ರ ಮಾನವ ಸಂಕುಲ ಉಳಿಯಲು ಸಾಧ್ಯ ಎಂದು ಅವರು ಅಭಿಪ್ರಾಯಪಟ್ಟರು.

ಭೂಮಿಯ ಮೇಲಿರುವ ಕ್ರಿಮಿ–ಕೀಟಗಳು ನಾಶವಾದರೆ ಕೇವಲ ಮೂರೇ ವರ್ಷಗಳಲ್ಲಿ ಇಡೀ ಮನುಕುಲ ನಾಶವಾಗುತ್ತದೆ. ಅದೇ ರೀತಿ ವನ್ಯಜೀವಿಗಳು ಮತ್ತು ಅರಣ್ಯ ನಾಶವಾದರೆ 100 ವರ್ಷಗಳಲ್ಲಿ ಭೂಮಿ ವಿನಾಶದ ಅಂಚು ತಲುಪುತ್ತದೆ. ಆದರೆ ಮನುಕುಲವೇ ಇಲ್ಲದಿದ್ದರೆ ಭೂಮಿ ಮತ್ತಷ್ಟು ಸಂಪದ್ಭರಿತವಾಗಿ ಕಂಗೊಳಿಸುತ್ತದೆ ಎಂದು ಎಚ್ಚರಿಸಿದರು.



ಅರಣ್ಯ ಇಲಾಖೆಯ ಉಪ ಅರಣ್ಯ ಸಂರಕ್ಷಣಾಧಿಕಾರಿ ಡಾ.ಬಸವರಾಜ ಕೆ.ಎನ್ ಅವರು ಮಾತನಾಡಿ, ಮನುಷ್ಯ ಮತ್ತು ವೃಕ್ಷಗಳ ನಡುವೆ ಪ್ರಕೃತಿಯೇ ರೂಪಿಸಿರುವ ಅದ್ಭುತ ಸಂಬಂಧವಿದೆ. ಮನುಷ್ಯರು ಆಮ್ಲಜನಕವನ್ನು ಪಡೆದು ಇಂಗಾಲದ ಡೈ ಆಕ್ಸೈಡ್ ಹೊರಬಿಟ್ಟರೆ, ಮರಗಳು ಆ ಇಂಗಾಲದ ಡೈ ಆಕ್ಸೈಡ್ ಪಡೆದು ನಮಗೆ ಆಮ್ಲಜನಕವನ್ನು ನೀಡುತ್ತವೆ. ಮನುಷ್ಯನ ಉಸಿರಾಟ ಪ್ರಕ್ರಿಯೆಯನ್ನು ನಡೆಸುವ ಶ್ವಾಸಕೋಶಗಳ ಚಿತ್ರವನ್ನು ಸೂಕ್ಷ ??ವಾಗಿ ಗಮನಿಸಿದರೆ, ಅದು ತಲೆಕೆಳಗಾಗಿ ನಿಂತಿರುವ ಒಂದು ಮರದ ಆಕಾರದಲ್ಲೇ ಕಾಣಿಸುತ್ತದೆ. ಇದು ಪ್ರಕೃತಿ ನಮಗೆ ನೀಡಿರುವ ಸಾಂಕೇತಿಕ ಸಂದೇಶವಾಗಿದೆ ಎಂದು ಹೇಳಿದರು.

ಹಿಂದೆ ಕಾಡುಗಳಲ್ಲಿ ಅಥವಾ ಗ್ರಾಮೀಣ ಭಾಗಗಳಲ್ಲಿ ಪ್ರಾಣಿಗಳು ಸತ್ತಾಗ, ಆಕಾಶದಲ್ಲಿ ಹಾರಾಡುವ ರಣಹದ್ದುಗಳನ್ನು ನೋಡಿ ಪ್ರಾಣಿ ಸತ್ತಿರುವುದು ತಿಳಿಯುತ್ತಿತ್ತು. ಅವು ಯಾವುದೇ ಕೂಲಿ ಪಡೆಯದೇ ಪರಿಸರವನ್ನು ಸ್ವಚ್ಛಗೊಳಿಸುವ ಉಚಿತ ಕಾವಲುಗಾರರಾಗಿದ್ದವು. ಆದರೆ ಕಳೆದ ಮೂರು ದಶಕಗಳಲ್ಲಿ ರಣಹದ್ದುಗಳ ಸಂತತಿ ಶೇ.90 ರಿಂದ 95 ರಷ್ಟು ಕ್ಷೀಣಿಸಿದೆ. ಇದಕ್ಕೆ ಮುಖ್ಯ ಕಾರಣ ಸಾಕುಪ್ರಾಣಿಗಳ ಚಿಕಿತ್ಸೆಗೆ ಬಳಸುತ್ತಿದ್ದ 'ಡೈಕ್ಲೋಫೆನಾಕ್' ಎಂಬ ನೋವು ನಿವಾರಕ ಔಷಧಿ. ಈ ಔಷಧೋಪಚಾರ ಪಡೆದ ಜಾನುವಾರುಗಳು ಸತ್ತಾಗ, ಅವುಗಳ ಮಾಂಸ ತಿಂದ ರಣಹದ್ದುಗಳ ಕಿಡ್ನಿ ವೈಫಲ್ಯಗೊಂಡು ಅವು ಸಾವನ್ನಪ್ಪಿದವು. ರಣಹದ್ದುಗಳು ಇಲ್ಲದ ಜಾಗವನ್ನು ಬೀದಿ ನಾಯಿಗಳು ಆಕ್ರಮಿಸಿಕೊಂಡವು. ಯಥೇಚ್ಛವಾಗಿ ಆಹಾರ ಸಿಕ್ಕಿದ್ದರಿಂದ ನಾಯಿಗಳ ಸಂತತಿ ತೀವ್ರವಾಗಿ ಹೆಚ್ಚಳವಾಯಿತು. ಬೀದಿ ನಾಯಿಗಳ ಕಾಟ ಹೆಚ್ಚಾಗಿದ್ದರಿಂದ ಇತ್ತೀಚೆಗೆ ಸುಪ್ರೀಂ ಕೋರ್ಟ್ ಕೂಡ ನಾಯಿಗಳ ಜನಸಂಖ್ಯೆ ನಿಯಂತ್ರಣ–ಕ್ಕೆ ಕಟ್ಟುನಿಟ್ಟಿನ ನಿರ್ದೇಶನ ನೀಡಬೇಕಾಗಿ ಬಂತು. ನಾಯಿಗಳ ಹೆಚ್ಚಳದಿಂದ 'ರೇಬಿಸ್' ಹರಡುವಿಕೆ ಹೆಚ್ಚಾಯಿತು. ರೇಬಿಸ್‌ಗೆ ಚಿಕಿತ್ಸೆ ಇಲ್ಲದ ಕಾರಣ ಕೇವಲ ಲಸಿಕೆಗಳಿಗಾಗಿ ಸರ್ಕಾರಿ ಸ್ವಾಮ್ಯದ ಸಾರ್ವಜನಿಕ ಆರೋಗ್ಯ ವಲಯದಲ್ಲಿ ಕೋಟ್ಯಂತರ ರೂಪಾಯಿ ಹೆಚ್ಚುವರಿ ವೆಚ್ಚವಾಗುತ್ತಿದೆ. ಒಂದು ರಣಹದ್ದು ಉಚಿತವಾಗಿ ಮಾಡುತ್ತಿದ್ದ ಪರಿಸರ ಸ್ವಚ್ಛತೆಯ ಕೆಲಸ ನಿಂತುಹೋಗಿದ್ದರಿಂದ ಇಂದು ಮಾನವ ಇಷ್ಟೊಂದು ದೊಡ್ಡ ಬೆಲೆ ತೆರಬೇಕಾಗಿ ಬಂದಿದೆ. ಪ್ರಕೃತಿಯಿಂದ ಯಾವುದೇ ಒಂದು ಜೀವಿ ಅಳಿದರೂ ಅದರ ತೀವ್ರತೆ ಮನುಷ್ಯನಿಗೆ ತಡವಾಗಿ ಅರ್ಥವಾಗುತ್ತದೆ ಎಂದರು.

ಕಳೆದ ವಾರದಲ್ಲಿ ಬಳ್ಳಾರಿಯಲ್ಲಿ ಬಿದ್ದ ಕೇವಲ ಎರಡು ಮಳೆಗಳಿಂದ ಇಡೀ ಜಿಲ್ಲೆಯ ತಾಪಮಾನ ತಕ್ಷಣವೇ 3 ಡಿಗ್ರಿ ಸೆಲ್ಸಿಯಸ್‌ನಷ್ಟು ಕಡಿಮೆಯಾಯಿತು. ಮನುಷ್ಯರು ಇಷ್ಟೇ ಪ್ರಮಾಣದ ತಾಪಮಾನ ಕಡಿಮೆ ಮಾಡಬೇಕಾದರೆ ಸಾವಿರಾರು ಎಸಿ, ಕೂಲರ್ ಹಾಗೂ ಫ್ಯಾನ್‌ಗಳನ್ನು ದಿನಗಟ್ಟಲೆ ಓಡಿಸಬೇಕಾಗುತ್ತಿತ್ತು. ಆದರೆ ಪ್ರಕೃತಿ ಇದನ್ನು ಕ್ಷಣಮಾತ್ರದಲ್ಲಿ ಉಚಿತವಾಗಿ ಮಾಡಿತೋರಿಸಿತು. ನಾವು ಕೃತಕವಾಗಿ ಸೃಷ್ಟಿಸುವ ಪರಿಸರ ಎಂದಿಗೂ ನೈಸರ್ಗಿಕ ಪರಿಸರಕ್ಕೆ ಸಮನಾಗಲಾರದು ಎಂದು ಅಭಿಪ್ರಾಯಪಟ್ಟರು.

ಪರಿಸರ ದಿನಾಚರಣೆ ಎಂದರೆ ಕೇವಲ ಗಿಡ ನಡುವುದು ಮಾತ್ರವಲ್ಲ, ನಮ್ಮ ದೈನಂದಿನ ಜೀವನ ಶೈಲಿಯನ್ನು ಬದಲಾಯಿಸಿಕೊಳ್ಳುವುದಾಗಿದೆ. ಅದಕ್ಕಾಗಿ 3ಆರ್ ಸೂತ್ರ ಪಾಲಿಸಬೇಕಾಗಿದೆ. ಪ್ಲಾಸ್ಟಿಕ್ ಬಳಕೆಯನ್ನು ಗಣನೀಯವಾಗಿ ಕಡಿಮೆ (ರೆಡ್ಯೂಸ್) ಮಾಡುವುದು. ವಸ್ತುಗಳನ್ನು ಎಸೆಯದೇ ಮರುಬಳಕೆ(ರೀಯೂಸ್) ಮಾಡುವುದು. ಅವಶ್ಯಕತೆ ಇಲ್ಲದ ಕಡೆ ಪ್ಲಾಸ್ಟಿಕ್ ಬಳಸುವುದಿಲ್ಲ (ರೀಫ್ಯೂಸ್) ಎಂದು ತಿರಸ್ಕಾರ ಮಾಡುವುದು ಎಂದು ತಿಳಸಿದರು.

ವಿ.ಶ್ರೀ.ಕೃ. ವಿಶ್ವವಿದ್ಯಾಲಯದ ಪ್ರಾಣಿಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕ ನಾಗಭೂಷಣ ವಿ.ಚರಂತಿಮಠ ಹಾಗೂ ವೀರಶೈವ ಕಾಲೇಜಿನ ಮಾಜಿ ಪ್ರಾಂಶುಪಾಲರು ಹಾಗೂ ಪ್ರಾಣಿಶಾಸ್ತ್ರ ವಿಭಾಗದ ಮುಖ್ಯಸ್ಥ ಜಿ.ಮನೋಹರ ಅವರು ಪರಿಸರ ರಕ್ಷಣೆ, ಬೆಳೆಸುವಿಕೆ ಅಂಶಗಳ ಕುರಿತು ವಿಶೇಷ ಉಪನ್ಯಾಸ ನೀಡಿದರು.

ಕಾರ್ಯಕ್ರಮಕ್ಕೂ ಮುನ್ನ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದ ಆವರಣದಲ್ಲಿ ಗಣ್ಯರು ಸಸಿಗಳನ್ನು ನೆಟ್ಟು ನಿರೂಣಿಸಿದರು.

ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ವತಿಯಿಂದ ಸರ್ಕಾರಿ, ಖಾಸಗಿ, ಅನುದಾನಿತ, ಸ್ಕೌಟ್ಸ್ ಮತ್ತು ಗೈಡ್ಸ್ ವಿದ್ಯಾರ್ಥಿಗಳಿಗೆ ಹಮ್ಮಿಕೊಂಡಿದ್ದ ಚಿತ್ರಕಲಾ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಕಾಣಿಕೆ, ಪ್ರಶಸ್ತಿ ಪತ್ರ ನೀಡಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಜೆ.ಎಂ.ತಿಪ್ಪೇಸ್ವಾಮಿ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ವಿಜಯನಗರ ವಿಭಾಗೀಯ ಕಚೇರಿಯ ಹಿರಿಯ ಪರಿಸರ ಅಧಿಕಾರಿ ಬಿ.ಎಸ್.ಮುರಳೀಧರ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಬಳ್ಳಾರಿ ಪ್ರಾದೇಶಿಕ ಕಚೇರಿಯ ಪರಿಸರ ಅಧಿಕಾರಿ ಟಿ.ಎಂ. ಸಿದ್ದೇಶ್ವರ ಬಾಬು ಸೇರಿದಂತೆ ಸ್ಕೌಟ್ ಮತ್ತು ಗೈಡ್ಸ್ ನ ಅಧಿಕಾರಿಗಳು, ಶಾಲಾ ವಿದ್ಯಾರ್ಥಿಗಳು, ಸಾರ್ವಜನಿಕರು ಉಪಸ್ಥಿತರಿದ್ದರು.

# ಜನರ ಸಮಸ್ಯೆಗಳಿಗೆ ಸ್ಥಳದಲ್ಲೇ ಪರಿಹಾರ
# ನಮ್ಮೂರಿಗೆ ನಮ್ಮ ಶಾಸಕ ಕಾರ್ಯಕ್ರಮಕ್ಕೆ ಉತ್ತಮ ಸ್ಪಂದನೆ

• ಮಲ್ಲಮ್ಮ ನುಡಿ ವಾರ್ತೆಚಿಕ್ಕಬಳ್ಳಾಪುರ

ಜನರ ಸಮಸ್ಯೆಗಳಿಗೆ ಸ್ಥಳದಲ್ಲೇ ಪರಿಹಾರ ಕಲ್ಪಿಸಬೇಕೆಂಬ ಉದ್ದೇಶದಿಂದ ಚಿಕ್ಕಬಳ್ಳಾಪುರ ಶಾಸಕ ಪ್ರದೀಪ್ ಈಶ್ವರ್ ಆರಂಭಿಸಿರುವ ರಾಜ್ಯದಲ್ಲೇ ವಿನೂತನವಾದ ನಮ್ಮೂರಿಗೆ ನಮ್ಮ ಶಾಸಕ ಕಾರ್ಯಕ್ರಮಕ್ಕೆ ಸಾರ್ವಜನಿಕರಿಂದ ಉತ್ತಮ ಸ್ಪಂದನೆ ವ್ಯಕ್ತವಾಗುತ್ತಿದೆ.ಈ ಕಾರ್ಯಕ್ರಮದ ಅಂಗವಾಗಿ ಶುಕ್ರವಾರ ಬೆಳಿಗ್ಗೆ 7 ಗಂಟೆಗೆ ಶಾಸಕ ಪ್ರದೀಪ್ ಈಶ್ವರ್ ಅವರು 36 ವಿವಿಧ ಇಲಾಖೆಗಳ ಅಧಿಕಾರಿಗಳೊಂದಿಗೆ ತಾಲೂಕಿನ ಕಮ್ಮಗುಟ್ಟ ಗ್ರಾಮ ಪಂಚಾಯಿತಿಯ ವ್ಯಾಪ್ತಿಯ ನಮಿಲಗುರ್ಕಿ, ವಕ್ರಹಳ್ಳಿ ಹಾಗೂ ಜೀಗಾನಹಳ್ಳಿ ಗ್ರಾಮಗಳಿಗೆ ಭೇಟಿ ನೀಡಿ ಗ್ರಾಮಸ್ಥರ ಸಮಸ್ಯೆಗಳನ್ನು ಆಲಿಸಿದರು.

ಈ ವೇಳೆ ಗ್ರಾಮಸ್ಥರು ಕುಡಿಯುವ ನೀರಿನ ಸಮಸ್ಯೆ, ಪಿಂಚಣಿ ಸೌಲಭ್ಯ, ಆಧಾರ್ ಕಾರ್ಡ್, ರೇಷನ್ ಕಾರ್ಡ್, ನಿವೇಶನ, ರಸ್ತೆ ಸಂಪರ್ಕ ಸೇರಿದಂತೆ ವಿವಿಧ ಮೂಲಸೌಕರ್ಯಗಳ ಕೊರತೆ ಕುರಿತು ಶಾಸಕರ ಗಮನಕ್ಕೆ ತಂದರು. ಸಮಸ್ಯೆಗಳನ್ನು ಆಲಿಸಿದ ಶಾಸಕ ಪ್ರದೀಪ್ ಈಶ್ವರ್ ಅವರು ಸ್ಥಳದಲ್ಲಿದ್ದ ಸಂಬಂಧಿತ ಅಧಿಕಾರಿಗಳಿಗೆ ಅಗತ್ಯ ಸೂಚನೆ ನೀಡಿ, ಶೀಘ್ರದಲ್ಲೇ ಪರಿಹಾರ ಕಲ್ಪಿಸುವಂತೆ ನಿರ್ದೇಶನ ನೀಡಿದರು.



ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಪ್ರದೀಪ್ ಈಶ್ವರ್ ಕ್ಷೇತ್ರದ ಜನರ ಸಮಸ್ಯೆಗಳಿಗೆ ಸ್ಪಂದಿಸುವುದನ್ನೇ ನಾನು ಮೊದಲ ಆದ್ಯತೆಯಾಗಿ ಪರಿಗಣಿಸಿದ್ದೇನೆ. ಅದರ ಭಾಗವಾಗಿಯೇ 'ನಮ್ಮೂರಿಗೆ ನಮ್ಮ ಶಾಸಕ' ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮ ಆರಂಭವಾದ ದಿನದಿಂದ ಇದುವರೆಗೆ ಚಿಕ್ಕಬಳ್ಳಾಪುರ ಕ್ಷೇತ್ರದ 250ಕ್ಕೂ ಹೆಚ್ಚು ಗ್ರಾಮಗಳಿಗೆ ಭೇಟಿ ನೀಡಿ ಜನರ ಅಹವಾಲುಗಳನ್ನು ಆಲಿಸಿದ್ದೇನೆ. ಜನರ ಮನೆಬಾಗಿಲಿಗೆ 36 ಅಧಿಕಾರಿಗಳ ತಂಡವನ್ನು ಕರೆದೊಯ್ದು ಸ್ಥಳದಲ್ಲೇ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ ಪ್ರಯತ್ನ ಮಾಡಲಾಗುತ್ತಿದೆ. ಶುಕ್ರವಾರ ಕಮ್ಮಗುಟ್ಟ ಗ್ರಾಮ ಪಂಚಾಯಿತಿಯ ಮೂರು ಗ್ರಾಮಗಳಿಗೆ ಭೇಟಿ ನೀಡಲಾಗಿದ್ದು, ಈ ಪಂಚಾಯಿತಿಯ ಅಭಿವೃದ್ಧಿಗಾಗಿ ಇದುವರೆಗೆ ಸುಮಾರು 12 ಕೋಟಿ ಅನುದಾನದಲ್ಲಿ ವಿವಿಧ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ.ಗ್ರಾಮಸ್ಥರು ಕುಡಿಯುವ ನೀರಿನ ವ್ಯವಸ್ಥೆ, ರಸ್ತೆ ದುರಸ್ತಿ, ಸ್ಮಶಾನ ಒತ್ತುವರಿ ತೆರವು, ಚರಂಡಿ ವ್ಯವಸ್ಥೆ ಸುಧಾರಣೆ, ಗ್ರಾಮ ಠಾಣೆ ಹಾಗೂ ಅಂಬೇಡ್ಕರ್ ಭವನ ನಿರ್ಮಾಣ ಸೇರಿದಂತೆ ಹಲವು ಬೇಡಿಕೆಗಳನ್ನು ಸಲ್ಲಿಸಿದ್ದಾರೆ. ಅಲ್ಲದೆ ಎಸ್‌ಸಿ/ಎಸ್‌ಟಿ ಸಮುದಾಯದ ಜನರು ವಸತಿ ಸೌಲಭ್ಯ ಕಲ್ಪಿಸುವಂತೆ ಮನವಿ ಮಾಡಿದ್ದಾರೆ.ಎಲ್ಲ ಮನವಿಗಳನ್ನು ಗಂಭೀರವಾಗಿ ಪರಿಗಣಿಸಿ ಆದಷ್ಟು ಬೇಗ ಸ್ಪಂದಿಸುವ ಭರವಸೆ ನೀಡಿದ್ದೇನೆ. ನಾನು ಕೊಡುವ ಭರವಸೆಗಳನ್ನು ಖಂಡಿತವಾಗಿ ಈಡೇರಿಸುತ್ತೇನೆ ಎಂದರು.ಇದೇ ಸಂದರ್ಭದಲ್ಲಿ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಗ್ರಾಮಗಳ ಸರ್ಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳೊಂದಿಗೆ ಗಿಡ ನೆಟ್ಟು ಪರಿಸರ ಸಂರಕ್ಷಣೆಯ ಮಹತ್ವವನ್ನು ತಿಳಿಸಿದರು. ಪರಿಸರ ಸಂರಕ್ಷಣೆ ಪ್ರತಿಯೊಬ್ಬ ನಾಗರಿಕನ ಜವಾಬ್ದಾರಿಯಾಗಿದ್ದು, ಎಲ್ಲರೂ ಗಿಡ ನೆಟ್ಟು ಅವುಗಳನ್ನು ಪೋಷಿಸುವ ಮೂಲಕ ಪರಿಸರ ಉಳಿವಿಗೆ ಕೈಜೋಡಿಸಬೇಕು ಎಂದು ಕರೆ ನೀಡಿದರು.ಈ ವೇಳೆ ತಹಶೀಲ್ದಾರ್ ರಶ್ಮೀ,ತಾಪಂ ಇಒ ಮಂಜುನಾಥ್,ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಮಂಜುಳ,ಪಿಡಿಓ ಮದ್ದಿರೆಡ್ಡಿ,ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ನಾಗಭೂಷಣ್,ರಕ್ಷಿತ್ ರೆಡ್ಡಿ,ಮುಖಂಡರಾದ ಅಡ್ಡಗಲ್ ಶ್ರೀಧರ್,ಸುಧಾ ವೆಂಕಟೇಶ್,ಬಿ ವಿ ಆನಂದ್,ಟಿಎಪಿಸಿಎಂಎಸ್ ನಿರ್ದೇಶಕ ಬಿಸೇಗಾರಹಳ್ಳಿ ನಾಗೇಶ್,ನಾಗೇಶ್ ರೆಡ್ಡಿ, ಉಮೇಶ್.ಜಿ, ವಿನಯ್ ಬಂಗಾರಿ,ತಂಝೀಮ್,ಮತ್ತಿತರರು ಇದ್ದರು.



• ಬೆಂಗಳೂರು ಜಮೀರ್ ಅಹಮದ್ ಖಾನ್ ಅವರನ್ನು ಸಂಪುಟಕ್ಕೆ ತೆಗೆದುಕೊಳ್ಳುವಂತೆ ಅಗ್ರಹಿಸಿ ಫ್ರೀಡಂ ಪಾರ್ಕ್ ನಲ್ಲಿ ಮುಖಂಡರು ಅಭಿಮಾನಿ ಗಳು ಬೃಹತ್ ಪ್ರತಿಭಟನೆ ನಡೆಸಿದರು..

# ಮಂಗಲಗಿ ಟೋಲ್ ಪ್ಲಾಜಾನಲ್ಲಿ ವಿಶ್ವ ಪರಿಸರ ದಿನಾಚರಣೆ



• ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ

ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಭಾರತದ ರಾಷ್ಟ್ರೀಯ ಪ್ರಾಧಿಕಾರ ಹೆದ್ದಾರಿ 65ರ ಮೇಲೆ ಬೋರಾಳ ಗ್ರಾಮದ ಹತ್ತಿರ ಇರುವ ರಾಷ್ಟ್ರೀಯ ಹೆದ್ದಾರಿ 65 ರ ಮೇಲೆ ಡೆಕ್ಕನ್ ಟೋಲ್ವೇಸ್ ಪ್ರೈವೇಟ್ ಲಿಮಿಟೆಡ್ ಮಂಗಲಗಿ ಟೋಲ್ ಪ್ಲಾಜಾ ಮತ್ತು ರಾಷ್ಟ್ರೀಯ ಪ್ರಾಧಿಕಾರ ಹೆದ್ದಾರಿ ಅಧಿಕಾರಿಗಳು ಹಾಗೂ ಆರ್ ಆರ್ ಎಜುಕೇಶನ್ ಸಂಸ್ಥೆಯ ವಿದ್ಯಾರ್ಥಿಗಳು ರಾಷ್ಟ್ರೀಯ ಹೆದ್ದಾರಿಯ ಅಕ್ಕ ಪಕ್ಕದಲ್ಲಿ ಸಸಿಗಳನ್ನು ನೆಟ್ಟು ಪರಿಸರ ದಿನಾಚರಣೆ ಮಾಡಿದರು.

ಈ ಸಂದರ್ಭದಲ್ಲಿ ಡೆಕ್ಕನ್ ಟೂಲ್ವೇಸ್ ಪ್ರೈವೇಟ್ ಲಿಮಿಟೆಡ್ ಅಧಿಕಾರಿ ರೇವಣಸಿದ್ದಪ್ಪ ವಾಲಿ, ರಾಷ್ಟ್ರೀಯ ಪ್ರಾಧಿಕಾರದ ಸಿಬ್ಬಂದಿಗಳಾದ ಶ್ರೀನಿವಾಸ್, ಮಹೇಶಕುಮಾರ್, ಮಹಾಂತಯ್ಯ ಸ್ವಾಮಿ, ಗ್ಯಾನಪ್ಪ, ಪರಮೇಶ್ವರ್ ಸೇರಿದಂತೆ ಆರ್ ಆರ್ ಎಜುಕೇಶನ್ ಸಂಸ್ಥೆಯ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಸರ್ಕಾರಿ ಬಾಲಕಿಯರ ಪ್ರೌಢಶಾಲೆಯಲ್ಲಿ ವಿಶ್ವ ಪರಿಸರ ದಿನಾಚರಣೆ



• ಮಲ್ಲಮ್ಮ ನುಡಿ ವಾರ್ತೆ ಹುಣಸಗಿ

ಪಟ್ಟಣದಸರ್ಕಾರಿಬಾಲಕಿಯರಪ್ರೌಢಶಾಲೆಯಲ್ಲಿ ವಿಶ್ವ ಪರಿಸರ ದಿನಾಚರಣೆಯನ್ನು ಸಸಿ ನೆಡುವ ಮೂಲಕ ಅರ್ಥಪೂರ್ಣವಾಗಿ ಆಚರಿಸಲಾಯಿತು. ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಶಾಲಾ ಆವರಣದಲ್ಲಿ ವಿವಿಧ ಜಾತಿಯ ಸಸಿಗಳನ್ನು ನೆಟ್ಟು ಪರಿಸರ ಸಂರಕ್ಷಣೆಯ ಮಹತ್ವವನ್ನು ಸಾರಿದರು.

ಕಾರ್ಯಕ್ರಮದಲ್ಲಿ ವಿಜ್ಞಾನ ಶಿಕ್ಷಕರಾದ ಶ್ರೀ ತಮ್ಮಣ್ಣ ಗುಡಿಹಾಳ್ ಅವರು ಮಾತನಾಡಿ, ಜಾಗತಿಕ ತಾಪಮಾನದ ಏರಿಕೆ, ಹವಾಮಾನ ವೈಪರೀತ್ಯ, ಎಲ್ ನೀನೊ ಹಾಗೂ ಲಾ ನೀನೊ ಪರಿಣಾಮಗಳ ಕುರಿತು ವಿದ್ಯಾರ್ಥಿಗಳಿಗೆ ಅರಿವು ಮೂಡಿಸಿದರು. ಪಳೆಯುಳಿಕೆ ಇಂಧನಗಳ ಅತಿಯಾದ ಬಳಕೆಯಿಂದ ಪರಿಸರದ ಮೇಲೆ ಉಂಟಾಗುತ್ತಿರುವ ದುಷ್ಪರಿಣಾಮಗಳನ್ನು ವಿವರಿಸಿದ ಅವರು, ಪರಿಸರ ಸಂರಕ್ಷಣೆಗಾಗಿ ಪ್ರತಿಯೊಬ್ಬ ವಿದ್ಯಾರ್ಥಿಯೂ ಒಂದು ಸಸಿಯನ್ನು ನೆಟ್ಟು ಅದನ್ನು ಮರವಾಗಿ ಬೆಳೆಸುವ ಜವಾಬ್ದಾರಿ ವಹಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಮುಖ್ಯೋಪಾಧ್ಯಾಯರಾದ ಶ್ರೀ ವಿಠ್ಠಲ್ ಬಿ. ಚೌಹಾಣ್ ಅವರು ಮಾತನಾಡಿ, "ಪರಿಸರ ಉಳಿದರೆ ಮಾತ್ರ ಮಾನವ ಜೀವನ ಉಳಿಯುತ್ತದೆ. ಪ್ರತಿಯೊಬ್ಬರೂ ಸಸಿ ನೆಟ್ಟು ಅದರ ಸಂರಕ್ಷಣೆಗೆ ಮುಂದಾಗಬೇಕು. ಮರಗಳನ್ನು ಬೆಳೆಸುವುದು ಹಾಗೂ ಅವುಗಳನ್ನು ಉಳಿಸುವುದು ನಮ್ಮೆಲ್ಲರ ಸಾಮಾಜಿಕ ಕರ್ತವ್ಯವಾಗಿದೆ" ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಹಿರಿಯ ಶಿಕ್ಷಕರಾದ ಶ್ರೀ ನಾಗನಗೌಡ ಪಾಟೀಲ್, ಶ್ರೀ ಭೀಮಣ್ಣ ವಾಲ್ಮೀಕಿ, ಶ್ರೀ ಬಸವರಾಜ ತಗ್ಗಳ್ಳಿ, ಶ್ರೀಮಶಾಕ ಯಾಳಗಿ, ಶ್ರೀಮತಿ ಲಲಿತಾಬಾಯಿ ಮಠ, ಶ್ರೀ ಯುನೂಸ್ ಕೋತ್ವಾಲ್, ಶ್ರೀ ಸೋಮನಗೌಡ ಬಳವಾಡ, ಶ್ರೀ ಗುರುರಾಜ ಜೋಶಿ ಸೇರಿದಂತೆ ಶಿಕ್ಷಕ ವೃಂದ ಹಾಗೂ ವಿದ್ಯಾರ್ಥಿಗಳು ಸಕ್ರಿಯವಾಗಿ ಭಾಗವಹಿಸಿದರು.

ಅನೇಕ ವಿದ್ಯಾರ್ಥಿಗಳು ತಾವು ನೆಟ್ಟ ಸಸಿಗಳನ್ನು ದತ್ತು ಪಡೆದು ಪೋಷಿಸುವ ಸಂಕಲ್ಪ ಕೈಗೊಂಡು, ಪರಿಸರ ಸಂರಕ್ಷಣೆಗಾಗಿ ಸದಾ ಶ್ರಮಿಸುವುದಾಗಿ ಪ್ರತಿಜ್ಞೆ ಸ್ವೀಕರಿಸಿದರು. ಈ ಕಾರ್ಯಕ್ರಮವು ವಿದ್ಯಾರ್ಥಿಗಳಲ್ಲಿ ಪರಿಸರದ ಬಗ್ಗೆ ಜಾಗೃತಿ ಮತ್ತು ಹಸಿರು ಪ್ರಜ್ಞೆ ಮೂಡಿಸುವಲ್ಲಿ ಯಶಸ್ವಿಯಾಯಿತು.

# ಸ್ವಚ್ಛತೆಗೆ ಸಾರ್ವಜನಿಕರು ಕೈ ಜೋಡಿಸಿ: ಸತೀಶ ಗುಡ್ಡೆ



• ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ

ಪರಿಸರದ ಸಮತೋಲನ ಕಾಪಾಡಲು ಹಾಗೂ ಮುಂದಿನ ಪೀಳಿಗೆಗೆ ಹಸಿರು ವಾತಾವರಣ ನಿರ್ಮಿಸಲು ಪ್ರತಿಯೊಬ್ಬರೂ ಗಿಡಗಳನ್ನು ನೆಟ್ಟು ಅವುಗಳನ್ನು ಪೋಷಿಸುವ ಜವಾಬ್ದಾರಿ ವಹಿಸಬೇಕೆಂದು ಮುಖ್ಯಾಧಿಕಾರಿ ಸತೀಶ ಗುಡ್ಡೆ ಪಟ್ಟಣದ ಪುರಸಭೆಯ ಆವರಣದಲ್ಲಿ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಸಸಿ ನೆಟ್ಟು ಮಾತನಾಡಿದ ಅವರು, ಪ್ರತಿಯೊಬ್ಬರೂ ತಮ್ಮ ಮನೆ ಸುತ್ತಮುತ್ತ ಹೆಚ್ಚಿನ ಪ್ರಮಾಣದಲ್ಲಿ ಗಿಡಗಳನ್ನು ನೆಡುವ ಮೂಲಕ ಪರಿಸರ ಸಂರಕ್ಷಣೆಗೆ ಉತ್ತೇಜನ ನೀಡಬೇಕು. ಮಗುವಿಗೊಂದು ಸಸಿ ನೆಟ್ಟು, ಮರಗಳಾಗಿಸಿ, ವನವಾಗಿಸಬೇಕು. ಮುಂದಿನ ಪೀಳಿಗೆಗಾಗಿ ಶುದ್ಧ ಗಾಳಿ ನೀಡುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ ಎಂದರು. ಘನ ತ್ಯಾಜ್ಯ ನಿರ್ವಹಣೆ ನೂತನ ನಿಯಮಗಳನ್ವಯ ಪುರಸಭೆ ವ್ಯಾಪ್ತಿಯ ಸಾರ್ವಜನಿಕರು ಮತ್ತು ವ್ಯಾಪಾರಸ್ಥರು ಘನ ತ್ಯಾಜ್ಯ ವಸ್ತುಗಳನ್ನು ನಾಲ್ಕು ವಿಧಗಳಲ್ಲಿ ಕಡ್ಡಾಯವಾಗಿ ಮೂಲದಲ್ಲಿಯೇ ವಿಂಗಡಿಸಿ ಪುರಸಭೆಯ ಕಸ ಸಂಗ್ರಹಿಸುವ ವಾಹನಗಳಿಗೆ ನೀಡಬೇಕು. ಅಡುಗೆ ಮನೆಯಲ್ಲಿ ಸಂಗ್ರಹವಾಗುವ ಹಾಗೂ ಇತರೆ ಕರಗುವ ತ್ಯಾಜ್ಯ ವಸ್ತುಗಳನ್ನು ಹಸಿ ತ್ಯಾಜ್ಯ, ಎಲ್ಲಾ ರೀತಿಯ ಪ್ಲಾಸ್ಟಿಕ್ ಮತ್ತು ಬಟ್ಟೆಯ ತ್ಯಾಜ್ಯವನ್ನು ಒಣ ತ್ಯಾಜ್ಯ, ಡೈಪರ್, ಸ್ಯಾನಿಟರಿ ನ್ಯಾಪಿಡ್ ಸೇರಿದಂತೆ ಸ್ಯಾನಿಟರಿ ತ್ಯಾಜ್ಯವನ್ನು ಹಾಗೂ ಬಣ್ಣದ ಡಬ್ಬ, ಕೀಟನಾಶಕ ಮೀರಿದ ಔಷಧಿಗಳು, ಬಳಸಿದ ಸಿರೆಂಜ್ ನೀಡಲ್ಸ್, ಬಲ್ಪ್ ಹಳೆಯ ಬ್ಯಾಟರಿ ಮುಂತಾದವುಗಳನ್ನು ವಿಶೇಷ ಕಾಳಜಿ ತ್ಯಾಜ್ಯ ಎಂದು ಪ್ರತ್ಯೇಕವಾಗಿ ವಿಂಗಡಿಸಿ ಪುರಸಭೆಯ ವಾಹನಕ್ಕೆ ನೀಡುವ ಮೂಲಕ ಸ್ವಚ್ಛತೆಗೆ ಕೈ ಜೋಡಿಸಬೇಕೆಂದು ಮನವಿ ಮಾಡಿದ್ದಾರೆ. ಈ ಸಂದರ್ಭದಲ್ಲಿ ಪುರಸಭೆ ಮಾಜಿ ಸದಸ್ಯ ವಿಶಾಲ ಬೋರಳೆ, ವೀರಣ್ಣ ಜಾಟ್ಲ, ಪರಿಸರ ಅಭಿನಯಂತರ ವಿಜಯದೀಪ, ಕಂದಾಯ ನಿರೀಕ್ಷಕ ವಿಜಯಕುಮಾರ, ಚಂದ್ರಕಾಂತ ಪಾಟೀಲ್, ರವಿಕುಮಾರ್ ಸ್ವಾಮಿ, ಸಂತೋಷ ಬಿರಾದಾರ್, ಚಿದಾನಂದ ಪತ್ರಿ, ಬಸವರಾಜ ಬಿರಾದಾರ್, ಸಂತೋಷ ಹಳ್ಳಿಖೇಡ, ಆನಂದ, ವೈಶಾಲಿ, ಸರೋಜನಿ, ಅಶ್ವಿನಿ ಚವ್ಹಾಣ, ಮಲ್ಲಮ್ಮ, ನೆಥನಿಯಲ್, ಸಚಿನ, ಇಲಾಹಿ ಸೇರಿದಂತೆ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಜಯ ಕರ್ನಾಟಕ ಜನಪರ ವೇದಿಕೆ ವತಿಯಿಂದ ವಿಶ್ವ ಪರಿಸರ ದಿನಾಚರಣೆ

• ಮಲ್ಲಮ್ಮ ನುಡಿ ವಾರ್ತೆ ಹುಣಸಗಿ

ವಿಶ್ವ ಪರಿಸರ ದಿನಾಚರಣೆಯ ಅಂಗವಾಗಿ ಜಯ ಕರ್ನಾಟಕ ಜನಪರ ವೇದಿಕೆ ವತಿಯಿಂದ ಪಟ್ಟಣದ ಸರ್ಕಾರಿ ಮಾದರಿ ಪ್ರಾಥಮಿಕ ಶಾಲೆಯಲ್ಲಿ ಸಸಿ ನೆಡುವ ಮೂಲಕ ಪರಿಸರ ದಿನವನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ವೇದಿಕೆಯ ಅಧ್ಯಕ್ಷರಾದ ಪ್ರಭುಗೌಡ ಪೋತರೆಡ್ಡಿ ಅವರು, ಪರಿಸರ ಸಂರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿಯಾಗಿದ್ದು, ಗಿಡ–ಮರಗಳನ್ನು ಬೆಳೆಸುವ ಮೂಲಕ ಮುಂದಿನ ಪೀಳಿಗೆಗೆ ಉತ್ತಮ ಪರಿಸರವನ್ನು ನೀಡಬೇಕು ಎಂದು ತಿಳಿಸಿದರು.



ಈ ಸಂದರ್ಭದಲ್ಲಿ ಗೌರವಾಧ್ಯಕ್ಷರಾದ ನೀಲಕಂಠ ಬಿ. ಚಿಂಚೋಳಿ, ಸಂಘಟನೆಯ ಸದಸ್ಯರಾದ ಸಿದ್ಧಾರೂಢ ನೂಲಿನ, ಸಂಗನಬಸಪ್ಪ ಗೋಗಿ, ರಾಜು ಮಲಗಲದಿನ್ನಿ, ರುದ್ರು ಪಡಶೆಟ್ಟಿ, ರಾಜು ದೇಸಾಯಿ, ಮಲ್ಲಿಕಾರ್ಜುನ ಸೇವಟಿ, ಶಿವರಾಜ್ ಕುಂಬಾರ, ಮಂಜುನಾಥ ನೂಲಿನ, ರಾಮು ರಾಠೋಡ್ ಸೇರಿದಂತೆ ಹಲವರು ಭಾಗವಹಿಸಿ ಶಾಲಾ ಆವರಣದಲ್ಲಿ ವಿವಿಧ ಸಸಿಗಳನ್ನು ನೆಟ್ಟರು.

ಕಾರ್ಯಕ್ರಮದಲ್ಲಿ ಶಾಲೆಯ ಮುಖ್ಯ ಶಿಕ್ಷಕರು, ಸಹ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದು, ಪರಿಸರ ಸಂರಕ್ಷಣೆಯ ಬಗ್ಗೆ ಅರಿವು ಮೂಡಿಸಲಾಯಿತು. ಸಸಿ ನೆಡುವುದರೊಂದಿಗೆ ಅವುಗಳನ್ನು ಪೋಷಿಸಿ ಬೆಳೆಸುವ ಸಂಕಲ್ಪವನ್ನು ಕೈಗೊಳ್ಳಲಾಯಿತು.

## ಪರಿಸರ ಬೆಳೆಸುವಲ್ಲಿ ವಿದ್ಯಾರ್ಥಿಗಳು ಆಸಕ್ತಿ ವಹಿಸಬೇಕು



**ಚಿಟಗುಪ್ಪ:** ಪರಿಸರ ನಾಶದಿಂದ ಜಾಗತಿಕ ತಾಪಮಾನ ಹೆಚ್ಚಳವಾಗುತ್ತಿದ್ದು, ಪ್ರತಿಯೊಬ್ಬ ವಿದ್ಯಾರ್ಥಿಯೂ ಪರಿಸರವನ್ನು ಉಳಿಸಿ ಬೆಳೆಸುವಲ್ಲಿ ಅತ್ಯಂತ ಆಸಕ್ತಿ ವಹಿಸಬೇಕೆಂದು ತಾಲೂಕ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಲಿಂಗರಾಜ ಪಾಟೀಲ್ ಹೇಳಿದರು.

ಪಟ್ಟಣದ ಸರ್ಕಾರಿ ಕನ್ಯಾ ಪ್ರೌಢ ಶಾಲೆಯಲ್ಲಿ ಪ್ರಾದೇಶಿಕ ಅರಣ್ಯ ಇಲಾಖೆ ಹಮ್ಮಿಕೊಂಡಿದ್ದ ವಿಶ್ವ ಪರಿಸರ ದಿನಾಚರಣೆಯನ್ನು ಸಸಿ ನೆಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಪರಿಸರ ನಾಶದಿಂದ ಉಷ್ಣಾಂಶ ಹೆಚ್ಚಾಗುತ್ತಿದ್ದು, ಇದರಿಂದ ಪ್ರಾಣಿ ಸಂಕುಲಕ್ಕೆ ಗಂಡಾಂತರ ಬಂದಿದೆ. ಆದ್ದರಿಂದ ಎಲ್ಲರೂ ಸಸಿ ನೆಡುವುದು, ನೆಟ್ಟ ಸಸಿಗಳನ್ನು ಬೆಳೆಸುವುದು ಹಾಗೂ ಸುತ್ತಲಿನ ಪರಿಸರ ಸ್ವಚ್ಛವಾಗಿಟ್ಟುಕೊಳ್ಳುವಂತೆ ವಿದ್ಯಾರ್ಥಿಗಳು ಜಾಗೃತಿ ಮೂಡಿಸಬೇಕು ಎಂದರು. ಪ್ರಾದೇಶಿಕ ವಲಯ ಅರಣ್ಯಾಧಿಕಾರಿ ಶ್ರೀಕಾಂತ ರಾಠೋಡ ಮಾತನಾಡಿ, ಸಮೃದ್ಧವಾಗಿ ಮರ ಗಿಡಗಳನ್ನು ಬೆಳೆಸಿದಾಗ ಸಮೃದ್ಧವಾಗಿ ಮಳೆಯಾಗುತ್ತದೆ. ಈ ನಿಟ್ಟಿನಲ್ಲಿ ಪ್ರತಿಯೊಬ್ಬರು ಮರ ಗಿಡಗಳನ್ನು ಬೆಳೆಸಿ ಅರಣ್ಯ ಸಂಪತ್ತು ಹೆಚ್ಚಾಗುವಂತೆ ಮಾಡಬೇಕು.

ಸರ್ಕಾರ ಹಸಿರು ಹೊನ್ನು ಮತ್ತು ಕೃಷಿ ಅರಣ್ಯ ಯೋಜನೆಯಡಿ ಗಿಡಗಳನ್ನು ನೀಡುತ್ತಿದ್ದು, ಕೃಷಿಕರು ಸಸಿ ಪಡೆದು ಕೃಷಿ ಭೂಮಿಯ ಅಂಚಿನಲ್ಲಿ ಬೆಳೆಸಿ, ಲಾಭಗಳಿಸುವ ಜತೆಗೆ ಪರಿಸರ ಸಂರಕ್ಷಣೆಯ ಕೊಡುಗೆ ನೀಡಬೇಕು, ನಮ್ಮ ತಾಲೂಕಿನಲ್ಲಿ ಅತೀ ಹೆಚ್ಚು ಸಸಿಗಳನ್ನು ನೆಟ್ಟು ಹಸಿರುಕರಣಕ್ಕೆ ಪ್ರತಿಯೊಬ್ಬರು ಕೈ ಜೋಡಿಸಬೇಕು ಎಂದರು. ಶಾಲೆಯ ಮುಖ್ಯ ಶಿಕ್ಷಕ ಬಸವರಾಜ ಮೇತ್ರೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ನಮ್ಮ ಶಾಲೆಯಲ್ಲಿ ಪರಿಸರದ ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಂಡು ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸಲಾಗುತ್ತಿದೆ. ಈ ವರ್ಷ ವಿಶ್ವ ಪರಿಸರ ದಿನಾಚರಣೆ ನಮ್ಮ ಶಾಲೆಯಲ್ಲಿ ಹಮ್ಮಿಕೊಂಡಿದ್ದು ಬಹಳ ಸಂತೋಷ ತಂದಿದೆ. ಮುಂದೆಯೂ ಸಹ ಇಂತಹ ಕಾರ್ಯಕ್ರಮಗಳು ನಮ್ಮ ಶಾಲೆಯಲ್ಲಿ ಹಮ್ಮಿಕೊಂಡು ವಿದ್ಯಾರ್ಥಿಗಳಿಗೆ ಅರಿವು ಮೂಡಿಸಬೇಕು ಎಂದರು. ನಮ್ಮ ಶಾಲೆಯಲ್ಲಿ ಒಟ್ಟು 250 ವಿದ್ಯಾರ್ಥಿಗಳಿದ್ದಾರೆ. ಪ್ರತಿಯೊಬ್ಬರಿಗೂ ಒಂದೊಂದು ಸಸಿ ನೀಡಬೇಕು ಎಂದು ಅರಣ್ಯ ಇಲಾಖೆ ಅಧಿಕಾರಿಗಳಿಗೆ ಮನವಿ ಮಾಡಿದರು. ವಿದ್ಯಾರ್ಥಿಗಳು ಶಾಲೆಯ ಆವರಣದಲ್ಲಿ ಸಸಿ ನೆಡೆಸುತ್ತೇವೆ ಎಂದರು. ಆಡಳಿತ ವೈದ್ಯಾಧಿಕಾರಿ ವಿಜಯ ಹಿರಸ್ಕರ್, ಪಶು ವೈದ್ಯಾಧಿಕಾರಿ ಶಾಂತವೀರ ಗೋಪಾ, ಸಾಹಿತಿ ಸಂಗಮೇಶ ಜವಾದಿ ಪರಿಸರ ಸಂರಕ್ಷಣೆ ಬಗ್ಗೆ ಮಾಹಿತಿ ನೀಡಿದರು. ಈ ಸಂದರ್ಭದಲ್ಲಿ ಪುರಸಭೆ ಮುಖ್ಯಾಧಿಕಾರಿ ಸತೀಶ ಗುಡ್ಡೆ, ವಿಜಯದೀಪ, ಗಸ್ತು ಅರಣ್ಯ ಪಾಲಕರಾದ ಶ್ರೀಶೈಲ, ಮಾಳಪ್ಪ, ಪಿಡಿಪಿ ವಿಜಯಕುಮಾರ್, ನಾಗೇಶ ಮಾಡಗುಳ, ನಾಗರಾಜ ಸ್ವಾಮಿ, ಗುಂಡಪ್ಪ ಕೋರಿ, ರಾಜನಿಕಾಂತ ಫುಲೇ, ಹಸನ್, ಪಂಚಶೀಲ ಕಟ್ಟಿಮನಿ, ಸಾದಿಯ ಸುಲ್ತಾನಾ, ಶಿಲ್ಪ, ಸುಮಾ ರೆಡ್ಡಿ ಹಾಗೂ ವಿದ್ಯಾರ್ಥಿಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು. ಕಾರ್ಯಕ್ರಮ ಶಿಕ್ಷಕ ಸಂಜೀವನ ಭೋಸ್ಲೆ ನಿರೂಪಿಸಿದರು. ಕೊನೆಯಲ್ಲಿ ಉಪ ವಲಯ ಅರಣ್ಯಾಧಿಕಾರಿ ವೀರಯ್ಯ ಪೂಜಾರಿ ವಂದಿಸಿದರು.

## ಮುಕ್ತ ವಿವಿ ಪರೀಕ್ಷಾ ಕೇಂದ್ರದಲ್ಲಿ ಮತ್ತೆ ಅಕ್ರಮದ ಆರೋಪ; ವೈರಲ್ ವಿಡಿಯೊ ಸೃಷ್ಟಿಸಿದ ಸಂಚಲನ



**ಲಿಂಗಸುಗೂರು:** ಪರೀಕ್ಷಾ ಕೇಂದ್ರವೊಂದು ಪದವಿ ಪಡೆಯುವ ವೇದಿಕೆಯೋ ಅಥವಾ ನಕಲು ಮಾಡಲು ಮುಕ್ತ ಅವಕಾಶ ಕಲ್ಪಿಸುವ ಕೇಂದ್ರವೋ ಎಂಬ ಪ್ರಶ್ನೆ ಸಾರ್ವಜನಿಕ ವಲಯದಲ್ಲಿ ಕೇಳಿಬರುತ್ತಿದೆ. ಕಾರಣ, ಜೂನ್ 2ರಂದು ನಡೆದ ಎಂ.ಎಸ್‌ಸಿ. ಗಣಿತ ವಿಷಯದ ಪರೀಕ್ಷೆಯಲ್ಲಿ ಪರೀಕ್ಷಾರ್ಥಿಯೊಬ್ಬರು ಮೊಬೈಲ್ ಫೋನ್ ಬಳಸಿ ಪರೀಕ್ಷೆ ಬರೆಯುತ್ತಿರುವ ದೃಶ್ಯವಿರುವ ವಿಡಿಯೊ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ.

ವೈರಲ್ ವಿಡಿಯೊದಲ್ಲಿ ಪರೀಕ್ಷಾರ್ಥಿ ಮೊಬೈಲ್ ಪರದೆಯನ್ನು ನೋಡುತ್ತಲೇ ಉತ್ತರಗಳನ್ನು ಬರೆಯುತ್ತಿರುವುದು ಕಂಡುಬಂದಿದೆ ಎನ್ನಲಾಗಿದ್ದು, ಪರೀಕ್ಷಾ ಮೇಲ್ವಿಚಾರಕರ ಜವಾಬ್ದಾರಿ ಮತ್ತು ಕೇಂದ್ರದ ಕಾರ್ಯವೈಖರಿ ಬಗ್ಗೆ ಅನುಮಾನಗಳು ವ್ಯಕ್ತವಾಗಿವೆ. ಪರೀಕ್ಷಾ ಕೊಠಡಿಯಲ್ಲಿ ಮೊಬೈಲ್ ಬಳಕೆಗೆ ಕಟ್ಟುನಿಟ್ಟಿನ ನಿಷೇಧವಿದ್ದರೂ ಅದು ಹೇಗೆ ಒಳಗೆ ತಲುಪಿತು? ಮೇಲ್ವಿಚಾರಕರು ಇದನ್ನು ಗಮನಿಸಿಲ್ಲವೇ? ಅಥವಾ ಗಮನಿಸಿದರೂ ಕ್ರಮ ಕೈಗೊಂಡಿಲ್ಲವೇ? ಎಂಬ ಪ್ರಶ್ನೆಗಳು ಉದ್ಭವಿಸಿವೆ. ಇದೇ ಪರೀಕ್ಷಾ ಕೇಂದ್ರ ಈ ಹಿಂದೆ ಕೂಡ ವಿವಾದಗಳಿಂದ ಸುದ್ದಿಯಾಗಿತ್ತು. ಕಳೆದ ಬಾರಿ ನಡೆದ ಬಿ.ಎಡ್. ಪರೀಕ್ಷೆಗಳ ಸಂದರ್ಭದಲ್ಲಿ ಸಾಮೂಹಿಕ ನಕಲು ನಡೆಯುತ್ತಿದೆ ಎಂಬ ಆರೋಪಗಳು ಕೇಳಿಬಂದಿದ್ದವು. ಈ ಕುರಿತು ಹಲವು ಮಾಧ್ಯಮಗಳಲ್ಲಿ ವರದಿಗಳು ಪ್ರಕಟವಾಗಿದ್ದವು. ವಿವಿಧ ಸಂಘಟನೆಗಳು ಪರೀಕ್ಷಾ ಕೇಂದ್ರವನ್ನು ರದ್ದುಪಡಿಸುವಂತೆ ಒತ್ತಾಯಿಸಿ ಅಧಿಕಾರಿಗಳಿಗೆ ಮನವಿ ಸಲ್ಲಿಸಿದ್ದವು. ವಿಷಯ ರಾಜ್ಯ ವಿಧಾನಮಂಡಲದ ಸದನದಲ್ಲಿಯೂ ಪ್ರತಿಧ್ವನಿಸಿತ್ತು. ಆದರೂ, ಆರೋಪಗಳ ಗಂಭೀರತೆಯನ್ನು ಪರಿಗಣಿಸಿ ಯಾವುದೇ ನಿರ್ಣಾಯಕ ಕ್ರಮ ಕೈಗೊಳ್ಳಲಾಗಿಲ್ಲ ಎಂಬ ಟೀಕೆಗಳು ಕೇಳಿಬರುತ್ತಿವೆ. ಪ್ರಶ್ನೆ ಏನೆಂದರೆ, ಹಿಂದಿನ ಆರೋಪಗಳ ತನಿಖೆಯ ವರದಿ ಏನಾಯಿತು? ತಪ್ಪಿತಸ್ಥರ ವಿರುದ್ಧ ಯಾವ ಕ್ರಮ ಜರುಗಿತು? ಪರೀಕ್ಷಾ ಕೇಂದ್ರದ ಕಾರ್ಯವೈಖರಿಯನ್ನು ಸುಧಾರಿಸಲು ಯಾವ ಕ್ರಮಗಳನ್ನು ಕೈಗೊಳ್ಳಲಾಯಿತು? ಎಂಬುದರ ಬಗ್ಗೆ ಸ್ಪಷ್ಟ ಉತ್ತರಗಳು ಲಭ್ಯವಾಗಿಲ್ಲ.

ಶಿಕ್ಷಣ ತಜ್ಞರ ಅಭಿಪ್ರಾಯದಂತೆ, ಇಂತಹ ಘಟನೆಗಳು ಪರೀಕ್ಷಾ ವ್ಯವಸ್ಥೆಯ ವಿಶ್ವಾಸಾರ್ಹತೆಯನ್ನೇ ಪ್ರಶ್ನಿಸುವಂತಿವೆ. ಪ್ರಾಮಾಣಿಕವಾಗಿ ಓದಿ ಪರೀಕ್ಷೆ ಬರೆಯುವ ವಿದ್ಯಾರ್ಥಿಗಳಿಗೆ ಇದು ಅನ್ಯಾಯವಾಗಿದ್ದು, ಪದವಿಯ ಮೌಲ್ಯಕ್ಕೂ ಧಕ್ಕೆ ಉಂಟುಮಾಡುವ ಸಾಧ್ಯತೆ ಇದೆ.

ಈಗ ವೈರಲ್ ಆಗಿರುವ ವಿಡಿಯೊ ನಿಜಾಸತ್ಯತೆ ಪರಿಶೀಲಿಸಿ, ಸಂಬಂಧಿಸಿದ ಪರೀಕ್ಷಾರ್ಥಿ, ಮೇಲ್ವಿಚಾರಕರು ಹಾಗೂ ಪರೀಕ್ಷಾ ಕೇಂದ್ರದ ವಿರುದ್ಧ ಕ್ರಮ ಕೈಗೊಳ್ಳುವ ಜವಾಬ್ದಾರಿ ಮುಕ್ತ ವಿಶ್ವವಿದ್ಯಾಲಯದ ಮೇಲಿದೆ. ಇಲ್ಲದಿದ್ದರೆ "ನಕಲು ಆರೋಪಗಳ ಕೇಂದ್ರ" ಎಂಬ ಹಣೆಪಟ್ಟಿ ಮತ್ತಷ್ಟು ಗಟ್ಟಿಯಾಗುವ ಸಾಧ್ಯತೆ ಇದೆ.

ವೈರಲ್ ವಿಡಿಯೊ ಕುರಿತು ಮೈಸೂರು ಮುಕ್ತ ವಿಶ್ವವಿದ್ಯಾಲಯ ಯಾವ ರೀತಿಯ ತನಿಖೆ ನಡೆಸಲಿದೆ? ಪರೀಕ್ಷಾ ಕೇಂದ್ರದ ಮಾನ್ಯತೆಯ ಕುರಿತು ಮರುಪರಿಶೀಲನೆ ಮಾಡಲಿದೆಯೇ? ಎಂಬ ಪ್ರಶ್ನೆಗಳಿಗೆ ಉತ್ತರ ಸಿಗಬೇಕಿದೆ.

# ಪರಿಸರ ಸಂರಕ್ಷಣೆ ಎಲ್ಲರ ಆದ್ಯ ಕರ್ತವ್ಯವಾಗಲಿ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ಪರಿಸರ ಪ್ರತಿಯೊಬ್ಬರ ಜೀವನದ ಆಧಾರವಾಗಿದ್ದು, ಅದನ್ನು ಕಾಪಾಡುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಬೇಕು ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಮಾಸ್ಟರ ಆರ್.ಕೆ.ಜಿ.ಎಂ.ಎಂ. ಮಹಾಸ್ವಾಮೀಜಿ ಹೇಳಿದರು.

ನವನಗರ ಸೆಕ್ಟರ ನಂ.70 ರಲ್ಲಿರುವ ಬಾಗಲಕೋಟೆ ಪಟ್ಟಣ ಅಭಿವೃದ್ಧಿ ಪ್ರಾಧಿಕಾರದ ಉದ್ಯಾನವನದಲ್ಲಿ ರಾಜ್ಯ ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಜಿಲ್ಲಾಡಳಿತ, ಪ್ರಾದೇಶಿಕ ಹಾಗೂ ಅರಣ್ಯ ಇಲಾಖೆ, ಆದರ್ಶ ವಿದ್ಯಾಲಯದ ಸಹಯೋಗದಲ್ಲಿ ಹಮ್ಮಿಕೊಂಡ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಉದ್ಯಾನವನದಲ್ಲಿ ಗಿಡ ನೆಟ್ಟು ನೀರುಣಿಸುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಪ್ರಕೃತಿಯಲ್ಲಿ ನಮ್ಮ ಕಣ್ಣಿಗೆ ಕಾಣುವ ನೆಲ, ಜಲ, ಪ್ರಾಣಿ, ಪಕ್ಷಿ. ಗಿಡ, ಮರಗಳು ಪರಿಸರದ ಅಂಗಗಳಾಗಿವೆ. ಗಿಡಮರಗಳಿಂದ ನಮಗೆ ಆಮ್ಲಜನಕ ಲಭ್ಯವಾಗುತ್ತಿದ್ದು, ನಾವು ಪರಿಸರವನ್ನು ಕಾಪಾಡಿಕೊಳ್ಳಬೇಕಾದ ಅಗತ್ಯವಿದೆ. ಪ್ರಕೃತಿಯಲ್ಲಿ ಸಿಗುವ ಸಂಪನ್ಮೂಲಗಳನ್ನು ಮಿತವಾಗಿ



ಬಳಸುವ ಮೂಲಕ ಪರಿಸರ ಸಂರಕ್ಷಿಸಿಕೊಂಡು ಮುನ್ನಡೆಯಬೇಕಿದೆ. ಇದು ಪ್ರತಿಯೊಬ್ಬ ನಾಗರಿಕರ ಕರ್ತವ್ಯವಾಗಿದೆ. ಪ್ಲಾಸ್ಟಿಕ್ ಮಾಲಿನ್ಯದಿಂದ ಪರಿಸರದ ಮೇಲೆ ಉಂಟಾಗುತ್ತಿರುವ ದುಷ್ಪರಿಣಾಮಗಳ ಬಗ್ಗೆ ಜನರು ಎಚ್ಚೆತ್ತುಕೊಳ್ಳಬೇಕಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾಧಿಕಾರಿ ಸಂಗಪ್ಪ ಮಾತನಾಡಿ, ಬಾಗಲಕೋಟೆ ಜಿಲ್ಲೆಯಲ್ಲಿ 80 ಸಾವಿರ ಹೆಕ್ಟೇರನಷ್ಟು ಅರಣ್ಯ ಪ್ರದೇಶವಿದ್ದು, ಈ ಪೈಕಿ ಶೇ.21 ರಷ್ಟು ಅರಣ್ಯವಿದೆ. ಆದರೆ ಅದು ಶೇ.31 ರಷ್ಟು ಇರಬೇಕಿತ್ತು. ಇನ್ನು ಶೇ.10 ರಷ್ಟು ಪರಿಸರ ಬೆಳೆಸಬೇಕಾದರೆ ಒಂದು ಕೋಟಿ ಗಿಡಗಳನ್ನು ಬೆಳೆಸುವ ಕೆಲಸವಾಗಬೇಕು. ಈ ನಿಟ್ಟಿನಲ್ಲಿ ಜಿಲ್ಲಾಡಳಿತ ಅರಣ್ಯ ಇಲಾಖೆ ಸಹಯೋಗದೊಂದಿಗೆ ಹೆಚ್ಚಿನ ಆದ್ಯತೆ ನೀಡಲಿದೆ ಎಂದು ತಿಳಿಸಿದರು.

ಪ್ರಾರಂಭದಲ್ಲಿ ಉಪ ಅರಣ್ಯ ಸಂರಕ್ಷಣಾಧಿಕಾರಿ ಸ್ವಪ್ನಿಲ್ ಮನೋಹರ ಅಹೀರೆ ಪ್ರಾಸ್ತಾವಿಕವಾಗಿ ಮಾತನಾಡಿದ ಅವರು, ಅರಣ್ಯ ವೃದ್ಧಿ ಹಾಗೂ ಜೀವ ವೈವಿಧ್ಯ ಸಂರಕ್ಷಣೆಗೆ ಸಾರ್ವಜನಿಕರ ಸಹಭಾಗಿತ್ವ ಅಗತ್ಯವಾಗಿದ್ದು, ಪ್ರತಿಯೊಬ್ಬರೂ ಕನಿಷ್ಟ ಒಂದು ಸಸಿ ನೆಟ್ಟು ಅದರ ಪೋಷಣೆ ಮಾಡಬೇಕು. ಪ್ರತಿಯೊಬ್ಬ ವಿದ್ಯಾರ್ಥಿಗಳು ಮನೆ ಹಾಗೂ ಶಾಲೆಗಳಲ್ಲಿ ಒಂದೊಂದು ಗಿಡ ನೆಡುವ ಸಂಕಲ್ಪ ಮಾಡಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಚಂದ್ರಶೇಖರ ದಿಡ್ಡಿ, ಸಾಮಾಜಿಕ ಅರಣ್ಯ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ಕೆ.ಎಸ್.ಗೊರವರ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎ.ಸಿ.ಮನ್ನಿಕೇರಿ, ವಕೀಲರ ಸಂಘದ ಅಧ್ಯಕ್ಷ ಬಿ.ಜಿ.ಗದ್ದಿ, ಬಿಟಿಡಿಎ ಮುಖ್ಯ ಅಭಿಯಂತರ ಚಂದ್ರಹಾಸ್, ಆಹಾರ ಇಲಾಖೆಯ ಜಂಟಿ ನಿರ್ದೇಶಕ ಶ್ರೀಶೈಲ ಕಂಕಣವಾಡಿ, ಆದರ್ಶ ವಿದ್ಯಾಲಯದ ಮುಖ್ಯೋಪಾಧ್ಯಾಯ ಬಿ.ವಿ.ಪಾಟೀಲ, ತಹಶೀಲ್ದಾರ ವಾಸುದೇವ ಸ್ವಾಮಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಮತದಾರರ ಪಟ್ಟಿ ಪರಿಷ್ಕರಣೆ: ನಿಖರ ಮಾಹಿತಿ ಸಂಗ್ರಹಣೆಗೆ ಸೂಚನೆ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ಜಿಲ್ಲೆಯಾದ್ಯಂತ ಜೂನ್ 30 ರಿಂದ ಪ್ರಾರಂಭವಾಗುವ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಹಿನ್ನಲೆಯಲ್ಲಿ ಜಿಲ್ಲೆಯ ವಿವಿಧ ತಾಲೂಕುಗಳಲ್ಲಿ ಹಮ್ಮಿಕೊಳ್ಳಲಾದ ತರಬೇತಿ ಕಾರ್ಯಾಗಾರ ಪ್ರಕ್ರಿಯೆಯನ್ನು ಜಿಲ್ಲಾಧಿಕಾರಿ ಸಂಗಪ್ಪ ಗುರುವಾರ ವೀಕ್ಷಣೆ ಮಾಡಿ, ಅಗತ್ಯ ಮಾರ್ಗದರ್ಶನ ನೀಡಿದರು.

ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯವನ್ನು ಪಾರದರ್ಶಕವಾಗಿ ಹಾಗೂ ದೋಷರಹಿತವಾಗಿ ಕೈಗೊಳ್ಳುವ ಉದ್ದೇಶದಿಂದ ಚುನಾವಣಾ ಆಯೋಗದ ನಿರ್ದೇಶನದಂತೆ ಬೂತ್ ಮಟ್ಟದ ಅಧಿಕಾರಿಗಳು ಹಾಗೂ ವಿವಿಧ ರಾಜಕೀಯ ಪಕ್ಷಗಳಿಂದ ನೇಮಕಗೊಂಡ ಬೂತ್ ಮಟ್ಟದ ಏಜೆಂಟರಗಳಿಗೆ ವಿಶೇಷ ತರಬೇತಿ ನೀಡಲಾಗುತ್ತಿದೆ.

ಈ ವೇಳೆ ಮಾತನಾಡಿದ ಜಿಲ್ಲಾಧಿಕಾರಿ ಸಂಗಪ್ಪ, ಮತದಾರ ಪಟ್ಟಿ ಚುನಾವಣಾ ಪ್ರಕ್ರಿಯೆಯ ಮೂಲಾಧಾರವಾಗಿದ್ದು, ಅರ್ಹ ಮತದಾರರ ಹೆಸರು



ಸೇರ್ಪಡೆ, ಮೃತ ಹಾಗೂ ಸ್ಥಳಾಂತರಗೊಂಡ ಮತದಾರರ ಹೆಸರುಗಳನ್ನು ಕೈಬಿಡುವಿಕೆ ಸೇರಿದಂತೆ ಇತರೆ ಎಲ್ಲ ಕಾರ್ಯಗಳನ್ನು ನಿಯಮಾನುಸಾರ ಮತ್ತು ನಿಖರವಾಗಿ ನಿರ್ವಹಿಸುವಂತೆ ಸೂಚನೆ ನೀಡಿದರು. ಇದಕ್ಕಾಗಿ ತರಬೇತಿ ನೀಡಲಾಗುತ್ತಿದ್ದು, ಇದರ ಪ್ರಯೋಜನವನ್ನು ಸಂಪೂರ್ಣವಾಗಿ ಪಡೆದುಕೊಂಡು ಪರಿಷ್ಕರಣ ಕಾರ್ಯವನ್ನು ಯಶಸ್ವಿಗೊಳಿಸುವಂತೆ ತಿಳಿಸಿದರು.

ಜೂನ್ 30 ರಿಂದ ಜುಲೈ 29 ವರೆಗೆ ಒಂದು ತಿಂಗಳು ಕಾಲ ನಡೆಯಲಿರುವ ಮನೆ ಮನೆ ಸಮೀಕ್ಷೆ ವೇಳೆ ಸಾರ್ವಜನಿಕರಿಗೆ ಅಗತ್ಯ ಮಾಹಿತಿ ನೀಡುವ ಮೂಲಕ ಮತದಾರರ ಪಟ್ಟಿಯ ಪರಿಷ್ಕರಣೆ ಕಾರ್ಯದಲ್ಲಿ ಯಾವುದೇ ಲೋಪ ಉಂಟಾಗದಂತೆ ಅಧಿಕಾರಿಗಳು ಎಚ್ಚರಿಕೆಯಿಂದ ಕಾರ್ಯನಿರ್ವಹಿಸಬೇಕು. ಚುನಾವಣಾ ಆಯೋಗದ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ ನಿಗದಿತ ಅವಧಿಯೊಳಗೆ ಕಾರ್ಯ ಪೂರ್ಣಗೊಳಿಸಬೇಕೆಂದು ಜಿಲ್ಲಾಧಿಕಾರಿ ಹೇಳಿದರು.

ಬಾದಾಮಿ ನಗರದ ವೀರಪುಲಕೇಶಿ ಶಾಲೆಯ ಸಭಾಭವನ, ಹುನಗುಂದ ನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಸಭಾಭವನ ಹಾಗೂ ಬಾಗಲಕೋಟೆ ಡಾ.ಬಿ.ಆರ್.ಅಂಬೇಡ್ಕರ ಭವನದಲ್ಲಿ ನಡೆದ ಎಸ್.ಐ.ಆರ್ ತರಬೇತಿ ಕೇಂದ್ರಕ್ಕೆ ಡಿಸಿ ಸಂಗಪ್ಪ.ಭೇಟಿ ನೀಡಿ ಪ್ರಕ್ರಿಯೆ ವೀಕ್ಷಣೆ ಮಾಡಿದರೆ, ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ ಬೀಳಗಿ, ತೇರದಾಳ, ಮುಧೋಳ, ಜಮಖಂಡಿ ಹಾಗೂ ರಬಕವಿ–ಬನಹಟ್ಟಿಗೆ ಭೇಟಿ ನೀಡಿ ಎಸ್.ಐ.ಆರ್ ತರಬೇತಿ ಪ್ರಕ್ರಿಯೆ ವೀಕ್ಷಣೆ ಮಾಡಿದರು.

# ಫಿಸಿಯೋಥೆರಪಿ ಅಗತ್ಯದ ಚಿಕಿತ್ಸೆ: ಡಾ.ಭುವನೇಶ್ವರಿ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ವೈದ್ಯಕೀಯ ಕ್ಷೇತ್ರದಲ್ಲಿ ಫಿಜಿಯೋಥೆರಪಿ ಅಗತ್ಯದ ಚಿಕಿತ್ಸೆಯಾಗಿದೆ ಎಂದು ನಿಜಲಿಂಗಪ್ಪ ವೈದ್ಯಕೀಯ ಮಹಾವಿದ್ಯಾಲಯದ ಪ್ರಾಚಾರ್ಯ ಡಾ.ಭುವನೇಶ್ವರಿ ಯಳಮಲಿ ಹೇಳಿದರು.

ನಗರದ ಬಿವಿವಿ ಸಂಘದ ಪಿಜಿಯೊಥೆರಪಿ ಕಾಲೇಜಿನಲ್ಲಿ ಆಯೋಜಿಸಲಾಗಿದ್ದ ಎರಡು ದಿನಗಳ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದ ಅವರು, ಪಿಜಿಯೊಥೆರಪಿ ಚಿಕಿತ್ಸಾ ಕ್ಷೇತ್ರದಲ್ಲಿ ಹೊಸ ಹೊಸ ಅವಿಷ್ಕಾರಗಳಾಗುತ್ತಿದ್ದು, ಕೆ–ಟೇಪಿಂಗ್ ಚಿಕಿತ್ಸೆ ಎನ್ನುವುದು ನೋವು ನಿವಾರಣೆಗೆ ಅಗತ್ಯದ ಚಿಕಿತ್ಸೆಯಾಗಿದೆ ಎಂದರು.

ವೈದ್ಯಕೀಯ ಕ್ಷೇತ್ರದಲ್ಲಿ ಹೊಸ ವಿಧಾನಗಳು ಬಳಕೆಗೆ ಬರುತ್ತಿದ್ದು ಫಿಜಿಯೋಥೆರಪಿಯು ಸಹ ಈಗ ಬಹುಮುಖ್ಯ ಚಿಕಿತ್ಸೆಯಾಗಿದೆ. ಇಂದಿನ ದಿನಗಳಲ್ಲಿ ಫಿಜಿಯೋಥೆರಪಿ ವೈದ್ಯರ ಬೇಡಿಕೆ



ಹೆಚ್ಚುತ್ತಿದೆ. ಉತ್ತರ ಕರ್ನಾಟಕದ ಭಾಗದಲ್ಲಿ ಫಿಜಿಯೋಥೆರಪಿ ವೈದ್ಯರ ಕೊರತೆಯನ್ನು ನಿವಾರಿಸುವ ನಿಟ್ಟಿನಲ್ಲಿ ಬಿ.ವಿ.ವಿ ಸಂಘದ ಕಾಲೇಜಿನಲ್ಲಿ ಬಿ.ಪಿ.ಟಿ ಮತ್ತು ಎಮ್.ಪಿ.ಟಿ (ಸ್ನಾತಕೋತ್ತರ) ಕೋರ್ಸುಗಳ ಶಿಕ್ಷಣ ನೀಡಲಾಗುತ್ತಿದೆ. ವಿದ್ಯಾರ್ಥಿಗಳ ಅಧ್ಯಯನಕ್ಕೆ ಪೂರಕವಾಗಿ ಕಾರ್ಯಾಗಾರವನ್ನು ಆಯೋಜಿಸಲಾಗಿದೆ. ವಿದ್ಯಾರ್ಥಿಗಳು ಇದರ ಪ್ರಯೋಜನ ಪಡೆದುಕೊಳ್ಳಬೇಕು ಎಂದು ಡಾ. ಭುವನೇಶ್ವರಿ ಹೇಳಿದರು. ಕಾರ್ಯಾಗಾರದ ಸಂಪನ್ಮೂಲ ವ್ಯಕ್ತಿ ಬೆಂಗಳೂರಿನ ಡಾ.ಸೈಯದ್ ರಿಝ್ವಿ, ನೋವು ನಿವಾರಣೆ, ಕ್ರೀಡಾ ಗಾಯಗಳ ಚಿಕಿತ್ಸೆ ಮತ್ತು ಸ್ನಾಯುಗಳ ಕಾರ್ಯಕ್ಷಮತೆಯನ್ನು ಹೆಚ್ಚಿಸುವಲ್ಲಿ ಕೆ–ಟೇಪಿಂಗ್ ಚಿಕಿತ್ಸೆಯ ಪ್ರಾಮುಖ್ಯತೆಯನ್ನು ವಿವರಿಸಿದರು. ಕಾರ್ಯಾಗಾರದಲ್ಲಿ ಬಿ.ಪಿ.ಟಿ ಮತ್ತು ಎಮ್.ಪಿ.ಟಿ ಕೋರ್ಸಿನ 60 ವಿದ್ಯಾರ್ಥಿಗಳು ಶಿಬಿರಾರ್ಥಿಗಳಾಗಿ ಭಾಗವಹಿಸಿದ್ದರು. ವಿದ್ಯಾರ್ಥಿಗಳಿಗೆ ಕೆ–ಟೇಪಿಂಗ್ ಚಿಕಿತ್ಸಾ ವಿಧಾನದ ಪ್ರಾತ್ಯಕ್ಷಿಕೆ ಮೂಲಕ ತರಬೇತಿಯನ್ನು ನೀಡಲಾಯಿತು.

ಕಾರ್ಯಕ್ರಮದಲ್ಲಿ ಮೆಡಿಕಲ್ ಕಾಲೇಜ್ ಉಪಪ್ರಾಚಾರ್ಯ ಡಾ.ಸಿ.ಎಸ್.ಹಿರೇಮಠ, ಫಿಜಿಯೋಥೆರಪಿ ಕಾಲೇಜಿನ ಬೋಧಕ ವೈದ್ಯರಾದ ಡಾ.ಸುಚಿತ್ರಾ ವನಕಿ, ಡಾ.ಮಹಾಂತೇಶ ಬಿರಡಿ, ಡಾ.ಶ್ರದ್ಧಾ, ಇನ್ನಿತರ ಫಿಜಿಯೋಥೆರಪಿ ಬೋಧಕರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಕಾನೂನು ಬಾಹಿರ ತಂಬಾಕು ಉತ್ಪನ್ನ ಮಾರಾಟ: ಅಂಗಡಿಗಳಿಗೆ ದಾಳಿ





• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಕಲಬುರಗಿ ಗ್ರಾಮೀಣ ಭಾಗ ಫರಹತಾಬಾದ್. ಪ್ರದೇಶದಲ್ಲಿ ಕಾನೂನು ಬಾಹಿರ ತಂಬಾಕು ಉತ್ಪನ್ನ ಮಾರಾಟ ಮಾಡುವ ಅಂಗಡಿಗಳಿಗೆ ಆರೋಗ್ಯ ಮತ್ತು ಪೊಲೀಸ್ ಇಲಾಖೆ ದಂಡ ವಸೂಲಾತಿಯನ್ನು ಕಲಬುರಗಿ–ಫರಹತಾಬಾದ್ ಗ್ರಾಮದಲ್ಲಿ ಅಔಖಿಕಂ ೦ಅಖಿ 2003 ಕಟ್ಟುನಿಟ್ಟಿನ ಅನುಷ್ಠಾನ – ಆರೋಗ್ಯ ಮತ್ತು ಪೊಲೀಸ್ ಇಲಾಖೆ ಜಂಟಿ ಕಾರ್ಯಾಚರಣೆ: 26 ಅಂಗಡಿಗಳ ಮೇಲೆ ದಾಳಿ, ₹2,660 ದಂಡ ವಸೂಲಿ. ವಿಧಿಸಲಾಯಿತು.

ಮಾನ್ಯ ಜಿಲ್ಲಾಧಿಕಾರಿಗಳ ಸಭಾ ನಡವಳಿಕೆ ಆದೇಶದ ಮೇರೆಗೆ, ಕಲಬುರಗಿ ಜಿಲ್ಲೆಯಲ್ಲಿ ತಂಬಾಕು ನಿಯಂತ್ರಣ ಕಾಯ್ದೆ – 2003 ಅನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಗುರುವಾರ ಪ್ರಾಥಮಿಕ ಆರೋಗ್ಯ ಕೇಂದ್ರ, ಫರಹತಾಬಾದ್ ವ್ಯಾಪ್ತಿಯಲ್ಲಿ ಆರೋಗ್ಯ ಇಲಾಖೆ ಮತ್ತು ಪೊಲೀಸ್ ಇಲಾಖೆ ಜಂಟಿ ಕಾರ್ಯಾಚರಣೆ ನಡೆಸಲಾಯಿತು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಾದ ಡಾ. ಶರಣಬಸಪ್ಪ ಖ್ಯಾತನಾಳ ರವರ ನಿರ್ದೇಶನದಲ್ಲಿ, ಜಿಲ್ಲಾ ಸರ್ವೇಕ್ಷಣಾಧಿಕಾರಿ ( ಡಿ ಎಸ್ ಓ ) ಡಾ. ರಾಕೇಶ ಕಾಂಬಳೆ. ಮತ್ತು ತಾಲೂಕು ಆರೋಗ್ಯಾಧಿಕಾರಿಗಳು ಡಾ. ಮಾರುತಿ ಕಾಂಬಳೆ, ಸಲಹೆ ಮೇರೆಗೆ, ಫರಹತಾಬಾದ್ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿಗಳು ಡಾ. ಸಂತೋಷ್ ಪಾಟೀಲ. ಸಹಕಾರದೊಂದಿಗೆ ನಡೆದ ಈ ದಾಳಿಯಲ್ಲಿ ಶಾಲಾ–ಕಾಲೇಜುಗಳ 100 ಗಜದೊಳಗೆ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಕಾನೂನುಬಾಹಿರವಾಗಿ ತಂಬಾಕು ಉತ್ಪನ್ನ ಮಾರಾಟ ಮಾಡುತ್ತಿದ್ದ. 26 ಅಂಗಡಿ–ಮುಂಗಟ್ಟುಗಳ ಮೇಲೆ ದಾಳಿ ನಡೆಸಿ, ಒಟ್ಟು ₹2,660 ದಂಡ ವಸೂಲಿ ಮಾಡಲಾಯಿತು.

**ಜಾಗೃತಿ ಕಾರ್ಯಕ್ರಮ:** ಸರ್ಕಾರಿ ಪ್ರೌಢ ಶಾಲೆ, ಫರಹತಾಬಾದ್‌ನಲ್ಲಿ ವಿದ್ಯಾರ್ಥಿಗಳಿಗೆ ತಂಬಾಕು ದುಷ್ಪರಿಣಾಮಗಳ ಬಗ್ಗೆ ಅರಿವು ಮೂಡಿಸಿ, "ತಂಬಾಕು ಮುಕ್ತ ಶಾಲೆ" ಘೋಷಣೆ ಮಾಡಲಾಯಿತು. ವಿದ್ಯಾರ್ಥಿಗಳಿಂದ ಸಸಿ ನೆಡುವ ಮೂಲಕ "ಆರೋಗ್ಯವಂತ ಮಗು, ಸದೃಢ ಭಾರತ" ಸಂದೇಶ ಸಾರಲಾಯಿತು. ಅಂಗಡಿಕಾರರಿಗೆ ಅಔಖಿಕಂ ಕಾಯ್ದೆಯ ಸೆಕ್ಷನ್ 4 & 6 ರ ಬಗ್ಗೆ ಎಚ್ಚರಿಕೆ ನೀಡಲಾಯಿತು.

ಕಾರ್ಯಾಚರಣೆಯಲ್ಲಿ ಭಾಗವಹಿಸಿದವರು ವೈ ಎಂ ಪೂಜಾರ ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳು.ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ಸಲಹೆಗಾರರಾದ ಶ್ರೀಮತಿ ಸುಜಾತ ಪಾಟೀಲ ಹಾಗೂ ತಂಡ, ಹಿರಿಯ ಆರೋಗ್ಯ ನಿರೀಕ್ಷಾಧಿಕಾರಿಗಳು ಸಂತೋಷ್ ಮುಲಜೆ. ಸೋಶಿಯಲ್ ವರ್ಕರ್ ಕು.ಆರತಿ ಧನಶ್ರೀ , ಡಿ ಇ ಓ ರವಿ ಪೂಜಾರಿ. ಹಾಗೂ ಸ್ಥಳೀಯ ಗಂಗೂಬಾಯಿ, ಬ್ಲಾಕ್ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿಗಳು ವಿರೂಪಾಕ್ಷಯ್ಯ ಹಿರೇಮಠ, ಹಾಗೂ ಪೊಲೀಸ್ ಇಲಾಖೆ ಅಧಿಕಾರಿಗಳು ದಾಳಿ ವೇಳೆ ಉಪಸ್ಥಿತರಿದ್ದರು.

## ಗ್ರಾಹಕರಿಗೆ ಸಸಿ ಉಚಿತ ವಿತರಣೆ



**ಬೀದರ್:** ಇಲ್ಲಿಯ ಓಲ್ಡ್ ಸಿಟಿಯಲ್ಲಿ ಇರುವ ಮುತ್ತೂಟ್ ಫಿನ್ ಕಾರ್ಪ್ ಶಾಖಾ ಕಚೇರಿಯಲ್ಲಿ ಶುಕ್ರವಾರ ಗ್ರಾಹಕರಿಗೆ ಉಚಿತ ಸಸಿ ಕೊಟ್ಟು ವಿಶ್ವ ಪರಿಸರ ದಿನವನ್ನು ವಿಶಿಷ್ಟವಾಗಿ ಆಚರಿಸಲಾಯಿತು. ಏರಿಯಾ ವ್ಯವಸ್ಥಾಪಕ ಬಂಡೆಪ್ಪ ಪಾಟೀಲ, ಶಾಖಾ ವ್ಯವಸ್ಥಾಪಕ ಉಮರ್ ಬೇಗ್ ಮತ್ತಿತರರು ಇದ್ದರು.

## ಮಾಣಿಕ ವಿಹಾರ ಸಂಘದ ವತಿಯಿಂದ ಸಾಮಾಜಿಕ ಕಾರ್ಯ



**ಹುಮನಾಬಾದ್:** ಮಾಣಿಕ ವಿಹಾರ ಸಂಘದ ವತಿಯಿಂದ ವಿವಿಧ ಸಾಮಾಜಿಕ ಕಾರ್ಯಗಳನ್ನು ಮಾಡಲಾಗುವುದು ಎಂದು ಸಮಿತಿಯ ಅಧ್ಯಕ್ಷ ಸುರೇಶ ಸೀಗಿ ರವರು ತಿಳಿಸಿದರು.

ಶುಕ್ರವಾರ ಮಾಣಿಕನಗರದಲ್ಲಿ ಸಮಿತಿಯ ಉಪಾಧ್ಯಕ್ಷರು ಆದ ವೈಜಿನಾಥ ಪಾಟೀಲ, ಭೀಮೇಶ ಪಂಚಾಳ, ಇವರುಗಳ ಹುಟ್ಟು ಹಬ್ಬವನ್ನು ಆಚರಿಸಿ ಮಾತನಾಡುತ್ತಿದ್ದರು.

ಈ ಸಂದರ್ಬದಲ್ಲಿ,ಬಸವರಾಜ ಮಜಕೂರಿ, ಶಂಕರ ಅವಳಿ, ಮಲ್ಲಿಕಾರ್ಜುನ ರೋಗನ, ಸುಭಾಷ ಪಾಟೀಲ, ಮನೋಜ ಬುನ್ನಾ, ಬಸವರಾಜ ಕನಕಟ್ಟಾ, ಸಿದ್ದು ಸ್ವಾಮಿ, ಶ್ರೀಕಾಂತ ಕುಲಕರಣಿ, ರಾಜಕುಮಾರ ಚನಶಟ್ಟಿ,ಮಡಿವಾಳಯ್ಯಸ್ವಾಮಿ,ಅಣ್ಣೆಪ್ಪಾಸಿಂಧನಕೇರಾ, ಮಲ್ಲಿಕಾರ್ಜುನ ರೋಗನ, ಸೇರಿದಂತೆ ಇತರರಿದ್ದರು.ಬಸವರಾಜ ಮಂದಕನಳ್ಳಿ ಸೇರಿದಂತೆ ಇತರರಿದ್ದರು.

## ಹವಾಮಾನ ಬದಲಾವಣೆ ಭವಿಷ್ಯದ ಆರ್ಥಿಕತೆಗೂ ಸವಾಲು



**ಬೆಂಗಳೂರು:** ಹವಾಮಾನ ಬದಲಾವಣೆ, ಜೀವವೈವಿಧ್ಯತೆಯ ಹಾನಿ ಕೇವಲ ಪರಿಸರಾತ್ಮಕ ಸಮಸ್ಯೆಯಷ್ಟೇ ಆಗಿರದೆ ಭವಿಷ್ಯದ ಆರ್ಥಿಕತೆ ಮತ್ತು ಕೈಗಾರಿಕಾ ನೀತಿ ನಿರೂಪಣೆಯ ಸವಾಲೂ ಆಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಅಭಿಪ್ರಾಯಪಟ್ಟಿದ್ದಾರೆ.

ಬೆಂಗಳೂರು ಹೊರವಲಯ ಅತ್ತಿಬೆಲೆ ಬಳಿಯ ಟಿವಿಎಸ್ ಕಾರ್ಖಾನೆಯಲ್ಲಿ ಆಯೋಜಿಸಲಾಗಿದ್ದ ಪರಿಸರ ದಿನದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಪ್ರಕೃತಿ ನಮಗೆ ಎಲ್ಲವನ್ನೂ ನೀಡಿದೆ. ಆದರೆ ಪ್ರಾಕೃತಿಕ ಸಂಪನ್ಮೂಲವನ್ನು ಹಿತಮಿತವಾಗಿ ಬಳಸಬೇಕು. ಯಾವುದೇ ಸಂಪನ್ಮೂಲ ಬಳಕೆ ಮಾಡವಾಗ ಭವಿಷ್ಯದ ಪೀಳಿಗೆಯ ಕಾಳಜಿಯೂ ಇರಬೇಕು ಎಂದರು.

ಜಾಗತಿಕ ತಾಪಮಾನ ಏರಿಕೆ ಮತ್ತು ಹವಾಮಾನ ಬದಲಾವಣೆ ಇಡೀ ವಿಶ್ವದ ಮುಂದಿರುವ ದೊಡ್ಡ ಸವಾಲಾಗಿದ್ದು, ಇದು ಜೀವನೋಪಾಯ ವಿಧಾನದ ಮೇಲೂ ಪರಿಣಾಮ ಬೀರುತ್ತಿದೆ. ಸಾಮಾಜಿಕ ಆರ್ಥಿಕ ವ್ಯವಸ್ಥೆಗೂ ಘಾಸಿ ಮಾಡುತ್ತಿದೆ. ಇದಕ್ಕೆ ಹಸಿರು ಹೊದಿಕೆಯ ಹೆಚ್ಚಳವೇ ಪರಿಹಾರವಾಗಿದೆ ಎಂದರು.

ನಾವು ನಮ್ಮ ಅಗತ್ಯಗಳ ಪೂರೈಕೆಗಾಗಿ ಮುಂದಿನ ಪೀಳಿಗೆಯ ಭವಿಷ್ಯ ಬಲಿಕೊಡಬಾರದು. ಮರು ಬಳಕೆ, ಪುನರ್ಬಳಕೆಗೆ ಒತ್ತು ನೀಡಿ ಸುಸ್ಥಿರ ಅಭಿವೃದ್ಧಿಗೆ ಗಮನ ಹರಿಸಬೇಕು ಎಂದು ಕಿವಿಮಾತು ಹೇಳಿದರು.

ತಾವು ಅರಣ್ಯ ಸಚಿವರಾಗಿದ್ದಾಗ ಬೆಂಗಳೂರು ನಗರಕ್ಕೆ ಅಗತ್ಯವಾದ ಶ್ವಾಸತಾಣಗಳ ಸಂರಕ್ಷಣೆಗೆ ಶ್ರಮಿಸಿದ್ದಲ್ಲದೆ ರಾಜಧಾನಿಯಲ್ಲಿ 250 ಎಕರೆ ಸೇರಿದಂತೆ ರಾಜ್ಯದಾದ್ಯಂತ ಒಟ್ಟು 12000ಕ್ಕೂ ಹೆಚ್ಚು ಎಕರೆ ಅರಣ್ಯ ಭೂಮಿ ಒತ್ತುವರಿ ತೆರವು ಮಾಡಿಸಿದ್ದಲ್ಲದೆ, ಹೆಸರುಘಟ್ಟದ 5678 ಎಕರೆ ಪ್ರದೇಶವನ್ನು ಸಂರಕ್ಷಿತ ಹುಲ್ಲುಗಾವಲು ಎಂದು ಘೋಷಿಸಿದ್ದಾಗಿ ತಿಳಿಸಿದರು.

150 ವರ್ಷಗಳ ಬಳಿಕ ಬೆಂಗಳೂರು ನಗರದಲ್ಲಿ 153 ಎಕರೆ ಪ್ರದೇಶದಲ್ಲಿ ವಿಶ್ವಗುರು ಬಸವಣ್ಣ ಬೃಹತ್ ಜೈವಿಕ ಉದ್ಯಾನವನವನ್ನು 250 ಕೋಟಿ ರೂ. ವೆಚ್ಚದಲ್ಲಿ ಅಭಿವೃದ್ಧಿ ಪಡಿಸಲು ತೀರ್ಮಾನಿಸಿ, ಸಂಪುಟದ ಅನುಮೋದನೆ ಪಡೆದಿದ್ದು, ಪ್ರಥಮ ಹಂತದ ಕಾಮಗಾರಿಗೆ 50 ಕೋಟಿ ಕಾಯ್ದಿರಿಸಲಾಗಿದೆ ಎಂದೂ ತಿಳಿಸಿದರು.

ಇದೇ ಸಂದರ್ಭದಲ್ಲಿ Mobility in Harmony with Nature ವಾರ್ಷಿಕ ವರದಿಯನ್ನೂ ಬಿಡುಗಡೆ ಮಾಡಿ, ಆವರಣದಲ್ಲಿ ಸಸಿ ನೆಟ್ಟು ನೀರೆರೆದರು. ಕಾರ್ಯಕ್ರಮದಲ್ಲಿ ಯು.ಎನ್. ಜೆಸಿಎನ್.ಐ. ಕಾರ್ಯನಿರ್ವಾಹಕ ನಿರ್ದೇಶಕ ರತ್ನೇಶ್ ಮತ್ತಿತರರು ಪಾಲ್ಗೊಂಡಿದ್ದರು.

# ಪರಿಸರ ಸಂರಕ್ಷಣೆ ನಮ್ಮೆಲ್ಲರ ಹೊಣೆ: ನ್ಯಾ. ಮಾಲಾ ಎನ್.ಡಿ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು



ಮನುಷ್ಯತನ್ನಸ್ವಾರ್ಥಕ್ಕಾಗಿ ಮರಗಿಡಗಳನ್ನು ಕಡಿಯುವ ಮೂಲಕ ನಮ್ಮ ಉತ್ತಮ ಪರಿಸರ ಹಾಳು ಮಾಡುತ್ತಿದ್ದು, ನಾವೆಲ್ಲರೂ ಎಚ್ಚೆತ್ತುಕೊಳ್ಳದಿದ್ದರೆ ಈಗಾಗಲೇ ಅಲ್ಲಲಿ ಸಂಭವಿಸುತ್ತಿರವ ಪ್ರಕೃತಿಯ ವಿಕೋಪದ ಜತೆಗೆ ಮತ್ತಷ್ಟು ಘೋರ ವಿಕೋಪಗಳನ್ನು ನಾವು ಎದುರಿಸಬೇಕಾಗುತ್ತದೆ ಎಂದು ರಾಯಚೂರಿನ 1ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಗೌರವಾನ್ವಿತ ಶ್ರೀಮತಿ ಮಾಲಾ ಎನ್.ಡಿ. ಅವರು ಹೇಳಿದರು.

ಜೂನ್ 05ರ ಶುಕ್ರವಾರ ದಂದು ನಗರದ ನೂತನ ನ್ಯಾಯಾಲಯ ಕಟ್ಟಡದ ಆವರಣದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ನ್ಯಾಯಾಂಗ ಇಲಾಖೆ, ಜಿಲ್ಲಾಡಳಿತ, ಅರಣ್ಯ ಇಲಾಖೆ ಹಾಗೂ ಜಿಲ್ಲಾ ವಕೀಲರ ಸಂಘ ರಾಯಚೂರು ಇವರುಗಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ವಿಶ್ವ ಪರಿಸರ ದಿನಾಚರಣೆಯ ಅಂಗವಾಗಿ ಸಸಿಗಳನ್ನು ನೆಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಮುಂದಿನ ಪೀಳಿಗೆಗೆ ಒಳ್ಳೆಯ ಬದುಕು ನೀಡುವ ನಿಟ್ಟಿನಲ್ಲಿ ಉತ್ತಮ ಪರಿಸರವನ್ನು ನೀಡುವ ಗುರುತರ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ. ಗಿಡಗಳನ್ನು ನೆಟ್ಟಾಕ್ಷಣ ನಮ್ಮ ಜವಾಬ್ದಾರಿ ಮುಗಿಯುವುದಿಲ್ಲ. ಅದನ್ನು ಒಂದು ಹಂತದವರೆಗೆ ಅವುಗಳ ಪೋಷಣೆ ಮಾಡಿ ಜನ, ಜಾನುವಾರುಗಳಿಗೆ ಬಲಿಯಾಗದಂತೆ ಕಾಪಾಡ ಬೇಕಿದೆ ಎಂದರು.

ಪ್ರಕೃತಿಯಿಂದ ಪ್ರೇರಿತವಾಗಿದೆ. ಹವಾಮಾನಕ್ಕಾಗಿ. ನಮ್ಮ ಭವಿಷ್ಯಕ್ಕಾಗಿ ಎಂಬುದು 2026ರ ವಿಶ್ವ ಪರಿಸರ ದಿನದ ಅಧಿಕೃತ ಘೋಷವಾಕ್ಯ ಆಗಿದ್ದು, ಕಲ್ಯಾಣ ಕರ್ನಾಟಕದ ಭಾಗದಲ್ಲಿ ಪರಿಸರ ಪ್ರಮಾಣ ಕಡಿಮೆ ಇದೆ. ಮಳೆಗಾಲದಲ್ಲಿ ಸಸಿಗಳನ್ನು ನೆಟ್ಟರೆ ಮುಂದಿನ ದಿನಗಳಲ್ಲಿ ವಾತಾವರಣದಲ್ಲಿ ಬದಲಾವಣೆಗೆ ಸಹಕಾರಿಯಾಗುತ್ತದೆ ಎಂದರು.

ಈ ವೇಳೆ ಹಿರಿಯ ಶ್ರೇಣಿ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಗೌರವಾನ್ವಿತ ಸಿದ್ದರಾಮಪ್ಪ ಕಲ್ಯಾಣರಾವ್ ಅವರು ಮಾತನಾಡಿ, ರಾಯಚೂರಿನಲ್ಲಿ ವರ್ಷದಿಂದ ವರ್ಷಕ್ಕೆ ತಾಪಮಾನವು ಹೆಚ್ಚಳವಾಗುತ್ತಿದ್ದು, ಅದನ್ನು ನಿಯಂತ್ರಣ ಮಾಡಲು ಗಿಡಮರಗಳಿಂದ ಸಾಧ್ಯ. ರಾಜ್ಯ ಕಾನೂನು ಪ್ರಾಧಿಕಾರದ ಆದೇಶದಂತೆ 5 ಕೋಟಿ ಸಸಿಗಳನ್ನು ಹಾಕಲಾಗುತ್ತದೆ. 2 ಕೋಟಿ ಸಸಿಗಳು ಬೆಂಗಳೂರಿನ ಸುತ್ತಮುತ್ತಲಿನ ಪ್ರದೇಶದಲ್ಲಿ ಹಾಗೂ 3 ಕೋಟಿ ಸಸಿಗಳನ್ನು ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಹಾಕಲಾಗುತ್ತದೆ. ಶಾಲಾ ಹಾಗೂ ಕಾಲೇಜು ಸೇರಿದಂತೆ ಸ್ಥಳವಕಾಶ ಇರುವ ಕಡೆಗಳಲ್ಲಿ ಸಸಿಗಳನ್ನು ಹಾಕಲಾಗುತ್ತದೆ ಎಂದರು.

ಇದೇ ಸಂದರ್ಭದಲ್ಲಿ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಮಲ್ಲಿಕಾರ್ಜುನ, ರಾಯಚೂರಿನ ಪ್ರಾದೇಶಿಕ ಅರಣ್ಯ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ಸುರೇಶ ಬಾಬು, ಕುಟುಂಬ ನ್ಯಾಯಾಲಯದ ಪ್ರಧಾನ ನ್ಯಾಯಾಧೀಶರಾದ ಗೌರವಾನ್ವಿತ ಶ್ರೀಕಾಂತ್. ಎಸ್.ವಿ., ಸಿ.ಜೆ.ಎಂ. ನ್ಯಾಯಾಲಯದ ಪ್ರಧಾನ ಹಿರಿಯ ಶ್ರೇಣಿ ದಿವಾಣಿ ನ್ಯಾಯಾಧೀಶರಾದ ಗೌರವಾನ್ವಿತ ಶ್ರೀಮತಿ ಬಿ.ಟಿ.ಅನ್ನಪೂರ್ಣೇಶ್ವರಿ, ಜೆ.ಎಂ.ಎಫ್.ಸಿ ನ್ಯಾಯಾಲಯದ 1ನೇ ಹೆಚ್ಚುವರಿ ಹಿರಿಯ ಶ್ರೇಣಿ ದಿವಾಣಿ ನ್ಯಾಯಾಧೀಶರಾದ ಗೌರವಾನ್ವಿತ ಶ್ರೀ.ಶಂಕರಪ್ಪ ಮಾಲಶೆಟ್ಟಿ, ಜೆ.ಎಂ. ಎಫ್.ಸಿ ನ್ಯಾಯಾಲಯದ 2ನೇ ಹೆಚ್ಚುವರಿ ಹಿರಿಯ ಶ್ರೇಣಿ ದಿವಾಣಿ ನ್ಯಾಯಾಧೀಶರಾದ ಗೌರವಾನ್ವಿತ ಸಾಗರ್ ಗುರುಗೌಡ ಪಾಟೀಲ್, ಜೆ.ಎಂ.ಎಫ್.ಸಿ. 3ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರಾದ ಗೌರವಾನ್ವಿತ ಶ್ರೀ.ಚನ್ನಬಸಪ್ಪ ಆರ್. ಕೂಡಿ, ವಲಯ ಅರಣ್ಯ ಅಧಿಕಾರಿ ರಾಜೇಶ ನಾಯಕ ಅವರು ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಇದ್ದರು.

# ಕುಡಿತಿನಿಯಲ್ಲಿ ಬೈಕ್ ಮೆರವಣಿಗೆ, ಭೂತದಹನ ಮೂಲಕ ಪ್ರತಿಭಟನೆ

• ಮಲ್ಲಮ್ಮ ನುಡಿ ವಾರ್ತೆ ಕುಡಿತಿನಿ



ವಿವಿಧ ರೈತ, ಕಾರ್ಮಿಕ, ದಲಿತ ಹಾಗೂ ಪ್ರಗತಿಪರ ಸಂಘಟನೆಗಳ ಜಂಟಿ ಸಮಿತಿಯ ವತಿಯಿಂದ ಜೂನ್ 18ರಂದು ಕರೆ ನೀಡಲಾಗಿರುವ ಬಳ್ಳಾರಿ ಜಿಲ್ಲಾ ಬಂದ್‌ನ್ನು ಯಶಸ್ವಿಗೊಳಿಸಲು ಸಾರ್ವಜನಿಕರ ಬೆಂಬಲ ಕೋರಲಾಯಿತು.

ಭೂ ಸಂತಸ್ತ್ರ ಹೋರಾಟ ಸಮಿತಿ, ಕರ್ನಾಟಕ ಪ್ರಾಂತ್ಯ ರೈತ ಸಂಘಟನೆ (ಕೆಪಿಆರ್‌ಎಸ್), ಸೆಂಟ–ರ್ ಆಫ್ ಇಂಡಿಯನ್ ಟ್ರೇಡ್ ಯೂನಿಯನ್ಸ್ (ಸಿಐಟಿಯು), ಕನ್ನಡ ಪರ ಸಂಘಟನೆಗಳು, ಡಿವೈಎಫ್ಐ, ಎಐಟಿಯುಸಿ, ಎಸ್‌ಎಫ್‌ಐ, ರಾಜ್ಯ ರೈತ ಸಂಘ, ಹೆಸರು ಸೇನೆ ಸೇರಿದಂತೆ ವಿವಿಧ ಸಂಘಟನೆಗಳ ಮುಖಂಡರು ಶುಕ್ರವಾರ ಕುಡಿತಿನಿಯಲ್ಲಿ ಬೈಕ್ ರ್ಯಾಲಿ ನಡೆಸಿ ಜಾಗೃತಿ ಮೂಡಿಸಿದರು.

ಕುಡಿತಿನಿ ಹಾಗೂ ಸುತ್ತಮುತ್ತಲಿನ ಏಳು ಗ್ರಾಮಗಳ ರೈತರು, ಕಾರ್ಮಿಕರು ಮತ್ತು ವಿವಿಧ ಸಂಘಟನೆಗಳ ಕಾರ್ಯಕರ್ತರು ರ್ಯಾಲಿಯಲ್ಲಿ ಭಾಗವಹಿಸಿದರು. ರ್ಯಾಲಿಯು ಪ್ರಮುಖ ರಸ್ತೆಗಳಲ್ಲಿ ಸಂಚರಿಸಿ ಸಾರ್ವಜನಿಕರಿಗೆ ಬಂದ್‌ನ ಉದ್ದೇಶ ಮತ್ತು ಹೋರಾಟದ ಹಿನ್ನೆಲೆಯನ್ನು ವಿವರಿಸಿತು.

ನಂತರ ಪಟ್ಟಣದ ರಾಯಲ್ ವೃತ್ತದಲ್ಲಿ ಪ್ರತಿಭಟನಾಕಾರರು ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿ, ತಮ್ಮ ಆಕ್ರೋಶ ವ್ಯಕ್ತಪಡಿಸಿದರು. ವಿವಿಧ ಜನಪರ ಸಮಸ್ಯೆಗಳ ಪರಿಹಾರಕ್ಕೆ ಸರ್ಕಾರ ಸಮರ್ಪಕ ಕ್ರಮ ಕೈಗೊಳ್ಳುತ್ತಿಲ್ಲ ಎಂದು ಆರೋಪಿಸಿದ ಪ್ರತಿಭಟನಾಕಾರರು, ಸಂಕೇತವಾಗಿ ಭೂತದಹನ ನಡೆಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಿಐಟಿಯು ರಾಜ್ಯ ಉಪಾಧ್ಯಕ್ಷ ಜೆ. ಸತ್ಯಬಾಬು, ರೈತರು, ಕಾರ್ಮಿಕರು, ಭೂಹೀನರು ಹಾಗೂ ದುಡಿಯುವ ವರ್ಗದ ಜನರ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಒದಗಿಸಬೇಕೆಂಬುದು ಬಂದ್‌ನ ಪ್ರಮುಖ ಉದ್ದೇಶವಾಗಿದೆ. ಜನರ ಹಿತಾಸಕ್ತಿಗೆ ಸಂಬಂಧಿಸಿದ ಬೇಡಿಕೆಗಳನ್ನು ಈಡೇರಿಸುವಂತೆ ಸರ್ಕಾರದ ಮೇಲೆ ಒತ್ತಡ ಹೇರಲು ಜೂನ್ 18ರ ಬಳ್ಳಾರಿ ಜಿಲ್ಲಾ ಬಂದ್‌ಗೆ ಕರೆ ನೀಡಲಾಗಿದೆ ಎಂದು ಹೇಳಿದರು.

ಸಿಐಟಿಯು ಮುಖಂಡ ಎಂ. ತಿಪ್ಪೇಸ್ವಾಮಿ ಮಾತನಾಡಿ, ಜಿಲ್ಲೆಯ ಜನರು, ವ್ಯಾಪಾರಸ್ಥರು, ರೈತರು, ಕಾರ್ಮಿಕರು ಹಾಗೂ ವಿವಿಧ ಸಂಘ–ಸಂಸ್ಥೆಗಳ ಪದಾಧಿಕಾರಿಗಳು ಬಂದ್‌ಗೆ ಬೆಂಬಲ ನೀಡಬೇಕು ಎಂದು ಮನವಿ ಮಾಡಿದರು.

ಪ್ರತಿಭಟನೆಯಲ್ಲಿ ಕುಡಿತಿನಿ, ಹರಗಿನಡೋಣಿ, ಜಾಣೆಕುಂಟೆ, ವೇಣಿ, ವೀರಪುರಂ ಸೇರಿದಂತೆ ವಿವಿಧ ಗ್ರಾಮಗಳ ರೈತ ಮುಖಂಡರು, ದೇವದಾಸಿ ಮಹಿಳೆಯರು ಹಾಗೂ ವಿವಿಧ ಸಂಘಟನೆಗಳ ಕಾರ್ಯಕರ್ತರು ಭಾಗವಹಿಸಿದ್ದರು.

ಜೂನ್ 18ರಂದು ನಡೆಯಲಿರುವ ಬಳ್ಳಾರಿ ಜಿಲ್ಲಾ ಬಂದ್‌ನ್ನು ಯಶಸ್ವಿಗೊಳಿಸಲು ಎಲ್ಲ ವರ್ಗದ ಜನರು ಸಹಕರಿಸಬೇಕು ಎಂದು ಜಂಟಿ ಸಮಿತಿಯ ಮುಖಂಡರು ಮನವಿ ಮಾಡಿದರು.

# ಜುಲೈ ಅಂತ್ಯಕ್ಕೆ ಕಾಮಗಾರಿ ಪೂರ್ಣಕ್ಕೆ ಡಿಸಿ ಗಡುವು

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ



ಚಿಂಚೋಳಿ ಪಟ್ಟಣದಲ್ಲಿ ಪುರಸಭೆಯಿಂದ ನಡೆಯುತ್ತಿರುವ 2025–26ನೇ ಸಾಲಿನ ವಿವಿಧ ಮೂಲಸೌಕರ್ಯ ಕಾಮಗಾರಿಗಳನ್ನು ಜುಲೈ ಅಂತ್ಯಕ್ಕೆ ಪೂರ್ಣಗೊಳಿಸುವಂತೆ ಮುಖ್ಯಾಧಿಕಾರಿಗಳಿಗೆ ಡಿ.ಸಿ. ಇಕ್ರಮ್ ಶರೀಫ್ ಗಡುವು ನೀಡಿದರು.

ಗುರುವಾರ ಚಿಂಚೋಳಿ ಪ್ರವಾಸ ಕೈಗೊಂಡಿದ್ದ ಅವರು, ಪಟ್ಟಣದ ಪ್ರಜಾ ಸೌಧದಲ್ಲಿ ಪುರಸಭೆಯ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಅವರು, ಕಾಮಗಾರಿಗಳಲ್ಲಿ ಗುಣಮಟ್ಟ ಕಾಯ್ದುಕೊಳ್ಳಬೇಕು. ಕಾಮಗಾರಿ ನಿಧಾನಗತಿಯಿಂದ ಮುಂದುವರೆದಲ್ಲಿ ಸರ್ಕಾರಕ್ಕೆ ಅನಗತ್ಯ ಅರ್ಥಿಕ ಹೊರೆಯಾಗುತ್ತದೆ. ಇದನ್ನರಿತು ಅಧಿಕಾರಿಗಳು ಕಾಮಗಾರಿಗಳಿಗೆ ವೇಗ ಹೆಚ್ಚಿಸಬೇಕೆಂದ ಅವರು, ಪ್ರಸಕ್ತ 2026–27ನೇ ಸಾಲಿನ ಕಾಮಗಾರಿಗಳನ್ನು ಸಹ ಇದೇ ಆಗಸ್ಟ್ ದೊಳಗೆ ಮುಗಿಸುವಂತೆ ಸೂಚಿಸಿದರು.

ಇನ್ನೇನ್ನು ಮಳೆಗಾಲ ಆರಂಭವಾಗಲಿದ್ದು, ಸಮರ್ಥವಾಗಿಸಲು ಎದುರಿಸಲು ಪುರಸಭೆ ಸನ್ನದ್ಧರಾಗಬೇಕು. ಪಟ್ಟಣದಲ್ಲಿನ ಮಳೆ ನೀರು ಚರಂಡಿಗಳನ್ನು ಕೂಡಲೆ ಸ್ವಚ್ಚಗೊಳಿಸಬೇಕು. ಸಿಬ್ಬಂದಿಗಳು ವಾರ್ಡ್ ವಾರು ಹೋಗಿ ಜನರ ಸಮಸ್ಯೆ ಆಲಿಸಬೇಕು. ಮಳೆಗಾಲದಲ್ಲಿ ಕುಡಿಯುವ ನೀರಿಗೆ ಕಲುಷಿತ ನೀರು ಸೇರದಂತೆ ಎಚ್ಚರ ವಹಿಸಬೇಕು. ಇನ್ನು ಪಟ್ಟಣಕ್ಕೆ ನೀರು ಪೂರೈಸಲು ಪ್ರಸ್ತಾಪಿತ ಇನ್ನೊಂದು ಜಾಕ್ ವೆಲ್ ನಿರ್ಮಾಣಕ್ಕೆ ಪುರಸಭೆಗೆ ಉಚಿತ ಜಮೀನು ಮಂಜೂರಾತಿಗೆ ಸಂಬಂಧಿಸಿದಂತೆ ಸರ್ಕಾರದ ಮಟ್ಟದಲ್ಲಿ ಚರ್ಚಿಸಲಾಗುವುದು ಎಂದು ಡಿ.ಸಿ ಇಕ್ರಮ್ ತಿಳಿಸಿದರು.

ಇನ್ನು ಇದೇ ಸಂದರ್ಭದಲ್ಲಿ ತಾಲೂಕಿನ ಕಂದಾಯ ಇಲಾಖೆಯ ಪ್ರಗತಿ ಪರಿಶೀಲನೆ ಸಹ ನಡೆಸಿದ ಜಿಲ್ಲಾಧಿಕಾರಿಗಳು, ಸಾರ್ವಜನಿಕರ ಕುಂದು–ಕೊರತೆ ಅರ್ಜಿಗಳಿಗೆ ಸ್ಪಂದಿಸಬೇಕು. ಜನರ ಕೆಲಸ ಕಾರ್ಯಗಳನ್ನು ಕಾಲಮಿತಿಯಲ್ಲಿ ಮಾಡಬೇಕು ಮತ್ತು ಅನಾವಶ್ಯಕ ಕಚೇರಿಗೆ ಅಲೆದಾಡಿಸಬಾರದು ಎಂದರಲ್ಲದೆ ಎ.ಜೆ.ಎಸ್.ಕೆ ಸೇರಿದಂತೆ ವಿವಿಧ ಸಾರ್ವಜನಿಕ ಸೇವೆ ನೀಡುವಲ್ಲಿ ಉತ್ತಮ ಪ್ರಗತಿ ಸಾಧಿಸಿದಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು.

ಸೇಡಂ ಸಹಾಯಕ ಆಯುಕ್ತ ಪ್ರಭುರೆಡ್ಡಿ, ಚಿಂಚೋಳಿ ತಹಶೀಲ್ದಾರ ಸುಬ್ಬಣ್ಣ ಜಮಖಂಡಿ, ಜಿಲ್ಲಾ ನಗರಾಭಿವೃದ್ಧಿ ಕೋಶದ ಇ.ಇ. ಸೋಮು ರಾಠೋಡ, ಪುರಸಭೆ ಮುಖ್ಯಾಧಿಕಾರಿ ಕಾಶಿನಾಥ, ಕೆ.ಯು.ಡಿ.ಎಫ್.ಸಿ. ಅಧಿಕಾರಿಗಳು ಹಾಗೂ ಕಂದಾಯ, ಪುರಸಭೆ ಸಿಬ್ಬಂದಿ ವರ್ಗದವರು ಹಾಜರಿದ್ದರು.

# ಶರಣ–ಸೂಫಿ ಸಂಪ್ರದಾಯದಲ್ಲಿ ಸ್ತ್ರೀಗೆ ಸಮಾನ ಸ್ಥಾನ



**ಧರ್ಮ–ಮರ್ಮ**

●ಡಾ.ಎಂ.ಮಹ್ಮದ್ ಬಾಷ ಗೂಳ್ಯಂ
ಪ್ರಧಾನ ಸಂಪಾದಕ, ಬೆಂಗಳೂರು

**ಕಳೆದ ಸಂಚಿಕೆಯಿಂದ...**

ದಿಲ್ಲಿಯ ಹಜರತ್ ನಿಜಾಮೂದ್ದೀನ್ ಚಿಶ್ತಿಯವರ ಶಿಷ್ಯ ಅಮೀರ್ ಖುಸ್ರು ಫಾರ್ಸಿ, ಅರಬ್ಬಿ ಭಾಷೆಯ ಪಂಡಿತನಾಗಿದ್ದ. ಹಿಂದುಸ್ಥಾನಿಯ ಭಾಷೆಯ ಮೇಲೂ ಖುಸ್ರೊಗೆ ಹಿಡಿತವಿತ್ತು. ಕೆಲವು ಸೂಫಿಗಳು ಅರಬ್ಬಿ, ಫಾರ್ಸಿ ಭಾಷೆಯಲ್ಲಿ ತಸವ್ವುಫ್ ಆಧಾರಿತ ನೋವು ತುಂಬಿದ ಭಕ್ತಿಯ ಗಂಭೀರ ಸಾಹಿತ್ಯ ರಚಿಸುತ್ತಿದ್ದರು. ಸಾಮಾನ್ಯರಿಗೆ ಇದು ಅರ್ಥವಾಗುತ್ತಿರಲಿಲ್ಲ. ಇದನ್ನು ಗಮನಿಸಿದ ಅಮೀರ್ ಖುಸ್ರೊ, ಶಿವಶರಣರು ಸರಳ ರೂಪದ ವಚನ ಸಾಹಿತ್ಯದಂತೆ ಹಿಂದಿಯ ಕಡಿಬೋಲಿ, ಬ್ರಿಜ್ ಭಾಷೆಗಳನ್ನು ಬಳಿಸಿ ಜನಸಾಮಾನ್ಯರಿಗೆ ತಲುಪುವಂಥ ಸಾಹಿತ್ಯವನ್ನು ರಚಿಸಿದ್ದು ಗಮನಾರ್ಹ. ಖುಸ್ರೊ ತನ್ನ ಗುರು ನಿಜಾಮೊದ್ದೀನರ ಮರಣದ ವಾರ್ತೆಯನ್ನು ಕೇಳಿದಾಗ ಒಂದು 'ದೂಹಾ' ಕೂಡ ಬರೆದಿದ್ದು, ಆತ ಹಿಂದುಸ್ತಾನಿ ಶಾಸ್ತ್ರೀಯ ಸಂಗೀತಕ್ಕೆ ವಿಶೇಷ ಕೊಡುಗೆ ನೀಡಿದ್ದು ಈತನಿಂದ ಸೂಫಿ ಸಾಹಿತ್ಯಕ್ಕೆ ಗಣನೀಯ ಸೇವೆ ಸಂದಿದೆ.

ಚರನ್ (ಚರಣ) ಮೂರಖ (ಮೂರ್ಖ) ಕರತಾರ (ಕರ್ತಾರ), ಧ್ಯಾನ ಮತ್ತು ಕೃಪಾ ಮುಂತಾದ ಪದಗಳ ಬಳಕೆಯನ್ನು ಖುಸ್ರೊ ವಿಶೇಷವಾಗಿ ಬಳಸಿರುವನು. ಅಂದರೆ ಈತನ ಮೇಲೆ ತನ್ನ ಸಮಕಾಲೀನನಾಗಿದ್ದ ಜ್ಞಾನದೇವ ಮುಂತಾದ ಮಹಾರಾಷ್ಟ್ರ ಸಂತರ ಪ್ರಭಾವವಕ್ಕೊಳಗಾಗಿದ್ದನೆಂಬ ಮಾತಿಗೆ ಇಂಬು ದೊರೆಯುತ್ತದೆ.

ದಕ್ಷಿಣ ಏಷಿಯಾದಲ್ಲಿಯೇ ಹೆಸರು ಮಾಡಿದ್ದ ಪ್ರಸಿದ್ಧ ಸಂತ ಹಜರತ್ ಕ್ವಾಜಾ ಬಂದೇನವಾಜ್ 15ನೇ ಶತಮಾನದ ಮೊದಲನೇ ದಶಕದಲ್ಲಿ ಗುಲಬರ್ಗಾದಲ್ಲಿ ಚಿಶ್ತಿ ಸೂಫಿ ಕೇಂದ್ರ ಸ್ಥಾಪಿಸಿದರು. ಅರಬ್ಬಿ, ಫಾರ್ಸಿ ಉಭಯ ಭಾಷಾ ಪಂಡಿತರಾಗಿದ್ದರು. 'ತಬಸಿರೆ ಉಲ್ ಬವಾರೆಖಾತ' ಎಂಬ ಪುಸ್ತಕದಿಂದ ಒಟ್ಟು 136 ಕೃತಿಗಳನ್ನು ರಚಿಸಿರುವುದಾಗಿ ತಿಳಿದುಬರುತ್ತದೆ. ಅತ್ಯಂತ ಶ್ರೇಷ್ಠಗ್ರಂಥ (ಅಸ್ಮಾರುಲ್ ಅಸ್ರಾರ್)ನಲ್ಲಿ ಏಕೇಶ್ವರ ಸಿದ್ಧಾಂತವನ್ನು ಕರತಲಾಮಲಕವಾಗಿ ಮಂಡಿಸಿದ್ದಾರೆ. ಉರ್ದು, ಅರಬ್ಬಿ, ಫಾರ್ಸಿಯಲ್ಲಿ ಕವಿತೆಗಳನ್ನು ರಚಿಸಿದ್ದಾರೆ. ಮೊಗಲ್ ದೊರೆ ಷಾಹ್‌ಜಾನನ ಕಾಲದಲ್ಲಿ ಶೇಖ್ ಮಹಿಬುಲ್ಲಾ ಹೆಸರಿನ ಸಂತನು ಹಿಂದು ಧರ್ಮಸಾರವನ್ನು ಅರಿತು ಕೊಳ್ಳುವಂತೆ ತನ್ನ ಶಿಷ್ಯರನ್ನು ಪ್ರೇರೇಪಿಸಿದ್ದನು. ಅಬ್ದುರ್‌ರಹ್ಮಾನ್ ಒಬ್ಬ ಚಿಶ್ತಿ ಸಂತನು ಹಿಂದು ಧರ್ಮ ಶಾಸ್ತ್ರದ ವಿಶ್ವೋತ್ಪತ್ತಿ ಸಿದ್ಧಾಂತವನ್ನು (ಮಿರಾತೆ ಉಲ್ ಮಖಲೂ ಕಾತ)ವೆಂಬ ಗ್ರಂಥದಲ್ಲಿ ನಿರೂಪಿಸಿದ್ದಾನೆ.

ಶರಣ ಸಂಪ್ರದಾಯದಲ್ಲಿ ಮಹಿಳೆಯರಿಗೂ ಸಮಾನ ಸ್ಥಾನ ಮಾನ ನೀಡಿದಂತೆ, ಸೂಫಿ ಪರಂಪರೆಯಲ್ಲೂ ಮಹಿಳೆಯರಿಗೂ ಪುರಷ ಸಮಾನ ಸ್ಥಾನ ನೀಡಲಾಗಿತ್ತು. ಪುರುಷರಂತೆ ಸ್ತ್ರೀಯರು ಸೂಫಿ ದೀಕ್ಷೆಯನ್ನು ಪಡೆಯಬಹುದಿತ್ತು. ಆದರೆ



ಮಹಿಳಾ ಸೂಫಿಗಳ ಸಂಖ್ಯೆ ಬೆರಳೆಣಿಕೆಯಷ್ಟು ಮಾತ್ರ. ಆದರೆ 12ನೇ ಶತಮಾನದ ಶಿವಶರಣೆಯರು ರಚಿಸಿದ ಅನುಭಾವ ಸಾಹಿತ್ಯವು ಇತಿಹಾಸದಲ್ಲಿ ಅಜರಾಮರ. ಅತ್ಯಲ್ಪ ಕಾಲದಲ್ಲಿ ಬಹುಸಂಖ್ಯಾ ಕವಿಯತ್ರಿಯರು ವಿಶ್ವದ ಯಾವ ಭಾಗದಲ್ಲೂ ಆಗಿ ಹೋಗಿಲ್ಲ, ಆ ಕೀರ್ತಿ ಶ್ರೇಯಗಳೆಲ್ಲವೂ ಕನ್ನಡಿಗರಿಗೆ ಸಂದಿವೆ. ಸೂಫಿ ಮಹಿಳೆಯರ ಸಂಖ್ಯೆ ಚಿಕ್ಕದಾಗಿವುದಕ್ಕೆ ಆ ಪರಂಪರೆಯ ಕಟ್ಟುನಿಟ್ಟಾದ ಕಟ್ಟಳೆಗಳೇ ಕಾರಣವಾಗಿರಲಿಕ್ಕೂ ಸಾಕು.

ಇಸ್ಲಾಂ ಧರ್ಮದ ಕಟ್ಟಾ ಅನುಯಾಯಿಯೆಂದೇ ಖ್ಯಾತನಾಗಿದ್ದ ಮೊಗಲ್ ಚಕ್ರವರ್ತಿ ಔರಂಗಜೇಬನ ಮಗಳು ಜೇಬುನ್ನಿಸಾ ಸೂಫಿ ದೀಕ್ಷೆಯನ್ನು ಪಡೆದಿದ್ದಳು. ಅಕ್ಕಮಹಾದೇವಿ, ಮೀರಾಬಾಯಿಯಂತೆ ದೇವರೇ ತನ್ನ ಪತಿ ಎಂದು ಭಜಿಸಿ ಹಾಡಿದ್ದಳು. ಅವಳ 'ದಿವಾನಿ'(ಕವನ ಸಂಕಲನ)ಯಲ್ಲಿ ಅದೆಷ್ಟೋ ನೋವು ತುಂಬಿದ ವಿರಹಗೀತೆಗಳಿವೆ. ಎಲ್ಲ ಸೂಫಿಗಳಂತೆ ಜೇಬುನ್ನಿಸಾ ಪ್ರಿಯಳನ್ನು ಸಂಬೋಧಿಸಿ ತನ್ನ ಕವಿತೆಗಳನ್ನು ರಚಿಸಿಲ್ಲ. ಇಲ್ಲಿ ತಾನೇ ಸಖಿಯಾಗಿದ್ದಾಳೆ. ದೇವರನ್ನು ಸಖನನ್ನಾಗಿಸಿ ಚಿತ್ರಿಸಿದ್ದಾಳೆ. ಮಹಾದೇವಿ ಅಕ್ಕ ಚೆನ್ನಮಲ್ಲಿಕಾರ್ಜುನನ ವಿರಹದಲ್ಲಿ ಹಾಡಿದಂತೆ ಜೇಬುನ್ನಿಸಾ ತನ್ನ ಸಖನಾದ ದೇವಸ್ಮರಣೆಯಲ್ಲಿ ತನ್ನ ಕವನ ಸಂಕಲನದಲ್ಲಿ ಹಾಡಿದ್ದಾಳೆ. ಕುಲಮತಗಳ ಬಂಧನಗಳನ್ನು ಕಳಚಿ ಮಾನವಕುಲ ಒಂದಾಗುವ ಸಂದೇಶವನ್ನು ಸಾರಿದ್ದಾಳೆ.

ಮುಂದುವರೆಯುವುದು...

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.

PRGI NO. 120927
(RNINO:KARKAN/2011/48371)